ಸಂಪುಟ: 14 Volume | ಸಂಚಿಕೆ: 84 Issue | ಪುಟಗಳು 08 Pages | ಭಾನುವಾರ 05 ಜುಲೈ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಜಾತಿಯನ್ನು ಕೇಳಬೇಡಿ, ಹೇಳಬೇಡಿ ಮತ್ತು ಅದರ ಬಗ್ಗೆ ಚಿಂತಿಸಲೂಬೇಡಿ.
–ನಾರಾಯಣ ಗುರು



ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಸಿಎಂ ಡಿ ಕೆ ಶಿವಕುಮಾರ್ ಅವರನ್ನು ಗೃಹ ಕಚೇರಿ "ಕೃಷ್ಣಾ"ದಲ್ಲಿ ಶನಿವಾರ ಭೇಟಿ ಮಾಡಿ ಸಮಾಲೋಚನೆ ನಡೆಸಿದರು.

## ಮುಖ್ಯಮಂತ್ರಿಗಳ ಜಿಲ್ಲಾ ಪ್ರವಾಸ



**ಕಲಬುರಗಿ:** ರಾಜ್ಯದ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ಬೀದರ್‌ನಿಂದ ವಿಶೇಷ ವಿಮಾನ ಮೂಲಕ ಜುಲೈ 6 ರಂದು ಸೋಮವಾರ ರಾತ್ರಿ 8.30 ಗಂಟೆಗೆ ಕಲಬುರಗಿ ವಿಮಾನ ನಿಲ್ದಾಣಕ್ಕೆ ಆಗಮಿಸಿ, ನಂತರ ಕಲಬುರಗಿ ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಿ ಕಾರ್ಯಕರ್ತರೊಂದಿಗೆ ಸಮಾಲೋಚನೆ ನಡೆಸುವರು. ನಂತರ ಕಲಬುರಗಿಯಲ್ಲಿ ವಾಸ್ತವ್ಯ ಮಾಡುವರು. ಜುಲೈ 7 ರಂದು ಮಂಗಳವಾರ ಬೆಳಿಗ್ಗೆ 10.30 ಗಂಟೆಗೆ ಕಲಬುರಗಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಕಲಬುರಗಿ ಪ್ರಾದೇಶಿಕ ವಿಭಾಗಮಟ್ಟದ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ನಡೆಸುವರು. ನಂತರ ಸಂಜೆ 6.20 ಗಂಟೆಗೆ ಕಲಬುರಗಿ ವಿಮಾನದ ನಿಲ್ದಾಣದಿಂದ ವಿಶೇಷ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.



ಬಿಡದಿಯ ತಮ್ಮ ತೋಟದ ಮನೆಯಲ್ಲಿ ಮಾನ್ಯ ಕೇಂದ್ರ ಸಚಿವರಾದ ಶ್ರೀ ಹೆಚ್.ಡಿ. ಕುಮಾರಸ್ವಾಮಿ ಅವರು ತಮ್ಮ ಕುಟುಂಬದೊಂದಿಗೆ SIR ಪ್ರಕ್ರಿಯೆಯಲ್ಲಿ ಪಾಲ್ಗೊಂಡರು. ಈ ಸಂದರ್ಭದಲ್ಲಿ ಶ್ರೀಮತಿ ಅನಿತಾ ಕುಮಾರಸ್ವಾಮಿ ಅವರು, ಯುವ ಜನತಾದಳದ ರಾಜ್ಯಾಧ್ಯಕ್ಷರಾದ ಶ್ರೀ ನಿಖಿಲ್ ಕುಮಾರಸ್ವಾಮಿ ಅವರು ಹಾಗೂ ಶ್ರೀಮತಿ ರೇವತಿ ನಿಖಿಲ್ ಅವರು ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಭಾಗಿಯಾದರು.



ಅಧ್ಯಕ್ಷ ಗಿನಚಂದಾನಿ ನೇತೃತ್ವದ ರಾಜ್ಯ ಮಲ್ಟಿಪ್ಲೆಕ್ಸ್ ಮಾಲೀಕರ ಸಂಘದ ನಿಯೋಗವು ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರನ್ನು ಗೃಹಕಚೇರಿ 'ಕೃಷ್ಣ'ದಲ್ಲಿ ಶನಿವಾರ ಭೇಟಿಯಾಗಿ ತಮ್ಮ ಸಮಸ್ಯೆಗಳ ಬಗ್ಗೆ ಅಹವಾಲು ಸಲ್ಲಿಸಿತು. ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಎಲ್.ಕೆ. ಅತೀಕ್ ಮತ್ತು ಸಂಘದ ಇತರ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಸಹಕಾರ ಚಳುವಳಿಯಿಂದ ವಿಶ್ವ ಶಾಂತಿ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತ ಬೆಂಗಳೂರು ಹಾಗೂ ಬೀದರ್ ಜಿಲ್ಲಾ ಸೌಹಾರ್ದ ಸಹಕಾರಿಗಳ ಒಕ್ಕೂಟ ನಿಯಮಿತ ಇದರ ವತಿಯಿಂದ ದಿನಾಂಕ 4.7.2026ರಂದು "104ನೇ ಅಂತರಾಷ್ಟ್ರೀಯ ಸಹಕಾರ" ದಿನ ಹಾಗೂ 32ನೇ ವಿಶ್ವಸಂಸ್ಥೆ ಯ ಅಂತರಾಷ್ಟ್ರೀಯ ಸಹಕಾರ ದಿನವನ್ನು "ಶಾಂತಿಯುತ ವಿಶ್ವಕ್ಕಾಗಿ ಸಹಕಾರ ಸಂಸ್ಥೆಗಳು" ಎಂಬ ಘೋಷವಾಕ್ಯದೊಂದಿಗೆ ಅಂತರಾಷ್ಟ್ರೀಯ ಸಹಕಾರ ದಿನಾಚರಣೆಯನ್ನು ಬೀದರ್ ಜಿಲ್ಲಾ ಸೌಹಾರ್ದ ಸಹಕಾರಿಗಳ ಒಕ್ಕೂಟದಲ್ಲಿ ಆಚರಿಸಲಾಯಿತು ಈ ಕಾರ್ಯಕ್ರಮದ ಧ್ವಜಾರೋಹಣವನ್ನು ಒಕ್ಕೂಟದ ಅಧ್ಯಕ್ಷರಾದ ಶ್ರೀ ಗುರುನಾಥ ಜಾಂತಿಕರ್‌ರವರು ನೆರವೇರಿಸಿದರು. ಇಂದಿನ ಜಾಗತಿಕ ಜಗತ್ತಿನಲ್ಲಿ ಸಹಕಾರಿ ಕ್ಷೇತ್ರವು ಬೂದಿ ಮುಚ್ಚಿದ ಕೆಂಡದ ಹಾಗೆ ಮುನ್ನುಗ್ಗುತ್ತಿದ್ದು ಉತ್ತಮ ಕಾರ್ಯ ಮಾಡುತ್ತಿರುವುದು



ಹೆಮ್ಮೆಯ ವಿಷಯವಾಗಿದೆ ಎಂದರು. ಉದಾ: ಭಾರತದಲ್ಲಿ ಹಾಲು ಉತ್ಪಾದಕರ ಸಹಕಾರ ಸಂಘ ಮಹಿಳಾ ಸ್ವಸಹಾಯ ಸಂಘ ಮತ್ತು ಕುರಿ ಉಣ್ಣೆಯ ಸಹಕಾರ ಸಂಘ, ಸೌಹಾರ್ದ ಸಹಕಾರಿ ಸಂಘ, ಆಹಾರ ಮತ್ತು ಸರಬರಾಜು ಸಹಕಾರಿ ಸಂಘಗಳು ಭಾರತ ದೇಶದ ಉತ್ಪಾದನೆಗಳನ್ನು ಅಂತರಾಷ್ಟ್ರೀಯ ಮಟ್ಟಕ್ಕೂ ವಿತರಿಸುವ ಕಾರ್ಯವನ್ನು ಸಹಕಾರ ಕ್ಷೇತ್ರದಿಂದ ನಡೆಯುತ್ತಿರುವುದು ಹೆಮ್ಮೆಯ ವಿಷಯವಾಗಿದೆ ಎಂದರು. ಈ ಕಾರ್ಯಕ್ರಮದಲ್ಲಿ ನಗರದ ಎಲ್ಲಾ ಸಹಕಾರಿಗಳಿಂದ ಸದಸ್ಯರು ಭಾಗವಹಿಸಿದರು.

## ಒಂದೇ ಕುಟುಂಬದ ಮೂವರು ಸಾವು

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ನಗರದ ಖ್ಯಾತ ನ್ಯೂ ಕಾಮಾಕ್ಷಿ ಜುವೆಲರ್ಸ್ ಮಾಲೀಕ ಪ್ರಕಾಶ್ ರಾಯ್ಕರ್, ಅವರ ಪತ್ನಿ ಪ್ರಭಾ ರಾಯ್ಕರ್ ಹಾಗೂ ಪುತ್ರ ಶಶಾಂಕ್ ರಾಯ್ಕರ್ ಸಂಶಯಾಸ್ಪದವಾಗಿ ಮೃತಪಟ್ಟಿರುವ ಘಟನೆ ಇಡೀ ಗಂಗಾವತಿ ನಗರವನ್ನು ಬೆಚ್ಚಿಬೀಳಿಸಿದೆ. ಒಂದೇ ಕುಟುಂಬದ ಮೂವರು ಮೃತಪಟ್ಟಿರುವ ಈ ಘಟನೆ ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದ್ದು, ಸಾವಿನ ನಿಖರ ಕಾರಣದ ಬಗ್ಗೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ಪ್ರಾಥಮಿಕ ಮಾಹಿತಿಯ ಪ್ರಕಾರ, ಕುಟುಂಬವು ಸುಮಾರು ₹3 ರಿಂದ ₹4 ಕೋಟಿ ಸಾಲದ ಹೊರೆ ಎದುರಿಸುತ್ತಿತ್ತು ಎನ್ನಲಾಗಿದೆ. ಅಲ್ಲದೆ, ₹2 ಕೋಟಿ ಬ್ಯಾಂಕ್ ಸಾಲಕ್ಕೆ ಗ್ಯಾರಂಟಿ ನೀಡಿದ್ದ ಕಾರಣ ಹೆಚ್ಚುವರಿ ಆರ್ಥಿಕ ಒತ್ತಡವೂ ಉಂಟಾಗಿತ್ತು ಎಂಬ ಮಾಹಿತಿ ಲಭ್ಯವಾಗಿದೆ. ಈ ಆರ್ಥಿಕ ಸಂಕಷ್ಟದಿಂದ ತೀವ್ರ ಮಾನಸಿಕ ಒತ್ತಡಕ್ಕೆ ಒಳಗಾಗಿದ್ದರು ಎನ್ನಲಾಗುತ್ತಿದ್ದು, ಕೆಲವರು



ಸಾಲಗಾರರ ಕಿರುಕುಳವೂ ಕಾರಣವಾಗಿರಬಹುದು ಎಂದು ಶಂಕೆ ವ್ಯಕ್ತಪಡಿಸಿದ್ದಾರೆ. ಆದರೆ ಈ ಬಗ್ಗೆ ಯಾವುದೇ ಅಧಿಕೃತ ದೃಢೀಕರಣ ಇದುವರೆಗೆ ಇಲ್ಲ.

ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆಯೇ ಪೊಲೀಸ್, ಬೆರಳಚ್ಚು ತಜ್ಞರ ತಂಡ ಹಾಗೂ ವಿಧಿವಿಜ್ಞಾನ ತಜ್ಞರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮೃತದೇಹಗಳನ್ನು ವಶಕ್ಕೆ ಪಡೆದು ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದ್ದು, ಅದರ ವರದಿ ಬಂದ ಬಳಿಕವೇ ಸಾವಿನ ನಿಖರ ಕಾರಣ ಬಹಿರಂಗವಾಗಲಿದೆ. ಈ ಸಂಬಂಧ ಪೊಲೀಸರು ಪ್ರಕರಣ ದಾಖಲಿಸಿಕೊಂಡು, ಆತ್ಮಹತ್ಯೆ, ಆರ್ಥಿಕ ಸಮಸ್ಯೆ, ಸಾಲದ ವ್ಯವಹಾರ ಸೇರಿದಂತೆ ಎಲ್ಲ ಆಯಾಮಗಳಲ್ಲಿ ತನಿಖೆ ಮುಂದುವರಿಸಿದ್ದಾರೆ.

# ಸಂಪುಟ ವಿಸ್ತರಣೆ ಸರ್ಕಸ್

### ಸಚಿವ ಪದವಿ ಆಕಾಂಕ್ಷಿಗಳಿಗೆ 10ರಂದು ಶುಭ ಸುದ್ದಿ ಸಾಧ್ಯತೆ | ಗರಿಗೆದರಿದ ರಾಜ್ಯ ರಾಜಕೀಯ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ನನೆ ಗುದಿಗೆ ಬಿದ್ದಿದ್ದ ಸಚಿವ ಸಂಪುಟ ವಿಸ್ತರಣೆ ವಿಸ್ತರಣೆ ವಿಚಾರಕ್ಕೆ ಇದೀಗ ರೆಕ್ಕಪುಕ್ಕ ಬಂದಿದೆ. ಆಸೆಕಂಗಳಿಂದ ಕಾಯುತ್ತಿದ್ದ ಸಚಿವ ಪದವಿ ಆಕಾಂಕ್ಷಿಗಳಿಗೂ ಸುಭಸುದ್ದಿ ಕಾದಿದೆ. ರಾಜ್ಯ ಸಚಿವ ಸಂಪುಟ ವಿಸ್ತರಣೆ ವಿಸ್ತರಣೆಯು ಜುಲೈ 10ರಂದು ನಡೆಯುವ ಸಾಧ್ಯತೆ ಇದೆ. ಇದಕ್ಕಾಗಿ ತೀವ್ರ ಲಾಬಿ ಹಾಗೂ ಇತರ ಪ್ರಕ್ರಿಯೆಗಳು ಜೋರಾಗಿವೆ.

**ವಿಶೇಷ ತೀವ್ರ ಪರಿಷ್ಕರಣೆ:** ಜುಲೈ 14ರಿಂದ ಆಷಾಢ ಆರಂಭವಾಗಲಿದ್ದು, ಆಗಸ್ಟ್ 12ರವರೆಗೂ ಮುಂದುವರಿಯಲಿದೆ. ರಾಜ್ಯದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ ಅಂಗವಾಗಿ ಬಿಎಲ್‌ಒ ಮತ್ತು ಬಿಎಲ್‌ಎಗಳು ಈ ತಿಂಗಳ ಅಂತ್ಯದವರೆಗೂ ಮನೆ ಮನೆಗೆ ಭೇಟಿ ನೀಡಲಿದ್ದಾರೆ.

**ಮಳೆಗಾಲದ ಅಧಿವೇಶನ:** ಅದಕ್ಕಾಗಿ ಎಲ್ಲಾ ಸಚಿವರು, ಶಾಸಕರು ತಮ ಕ್ಷೇತ್ರಗಳಲ್ಲೇ ಇರಬೇಕು ಎಂದು ಸೂಚನೆ ನೀಡಲಾಗಿದೆ. ಎಸ್‌ಐಆರ್ ಕಾರಣಕ್ಕಾಗಿ ವಿಧಾನಮಂಡಲದ ಅಧಿವೇಶನವನ್ನು ಮುಂದೂಡಲಾಗಿದೆ. ಚುನಾವಣಾ ಆಯೋಗ ಆಗಸ್ಟ್ 5ರಂದು ಮತದಾರರ ಕರಡು ಪಟ್ಟಿಯನ್ನು ಪ್ರಕಟಿಸಲಿದೆ. ಅನಂತರ ಮಳೆಗಾಲದ ವಿಧಾನಮಂಡಲ ಅಧಿವೇಶನ ಸಮಾವೇಶಗೊಳ್ಳುವ ಸಾಧ್ಯತೆ ಇದೆ.

### ಸಂಪುಟ ರಚನೆ ಅನಿವಾರ್ಯ

ಅಧಿವೇಶನಕ್ಕೂ ಮುನ್ನವೇ ಪರಿಪೂರ್ಣ ಸಂಪುಟ ರಚನೆಯಾಗಬೇಕಿದೆ. ಆಗಸ್ಟ್ 15ಕ್ಕೆ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಎಲ್ಲಾ ಜಿಲ್ಲೆಗಳಲ್ಲಿಯೂ ಉಸ್ತುವಾರಿ ಸಚಿವರು ಧ್ವಜಾರೋಹಣ ನೆರವೇರಿಸಬೇಕಿದೆ. ಅದಕ್ಕೂ ಮುನ್ನವೇ ಸಂಪುಟ ಪುನರ್ ರಚನೆಯಾಗುವ ಅನಿವಾರ್ಯತೆ ಇದೆ. ಸಂಪುಟ ವಿಸ್ತರಣೆಯಾಗಲಿದೆ ಎಂಬ ಸುಳಿವು ದೊರೆಯುತ್ತಿದ್ದಂತೆ ಆಕಾಂಕ್ಷಿಗಳು ಲಾಬಿ ತೀವ್ರಗೊಳಿಸಿದ್ದಾರೆ.



### ಬೆನ್ನಿಗೆ ಬಿದ್ದು ಅವಕಾಶಕ್ಕೆ ಒತ್ತಡ..!

ಒಂದೆಡೆ ಮುಖಂಡರು ಪೂರ್ಣ ಪ್ರಮಾಣದ ಸಂಪುಟ ವಿಸ್ತರಣೆಗೆ ತಯಾರಿ ಮಾಡಿಕೊಳ್ಳುತ್ತಿದ್ದರೆ, ಮತ್ತೊಂದು ಕಡೆ ಆಕಾಂಕ್ಷಿಗಳು ಹಿರಿಯ ನಾಯಕರ ಬೆನ್ನಿಗೆ ಬಿದ್ದು ಅವಕಾಶಕ್ಕಾಗಿ ಒತ್ತಡ ಹೇರುತ್ತಿದ್ದಾರೆ. ಲೋಕಸಭೆಯ ವಿರೋಧ ಪಕ್ಷ ನಾಯಕ ರಾಹುಲ್ ಗಾಂಧಿ, ಜುಲೈ 6ರಂದು ಐರ್‌ಲ್ಯಾಂಡ್ ಪ್ರವಾಸದಿಂದ ಭಾರತಕ್ಕೆ ಹಿದಿರುಗುವ ಸಾಧ್ಯತೆ ಇದ್ದು, ಅನಂತರವೇ ಎಲ್ಲಾ ವಿಷಯ ಮುನ್ನೆಲೆಗೆ ಬರಲಿದೆ.

### ಸಿಎಂ ಡಿಕೆಶಿ–ಖರ್ಗೆ ಭೇಟಿ

ಸಚಿವ ಸ್ಥಾನದ ಆಕಾಂಕ್ಷಿಗಳಾಗಿರುವ ಪಿ.ಎಂ. ಅಶೋಕ್, ಎ.ಎಸ್.ಪೊನ್ನಣ್ಣ, ಕೆ.ಎನ್.ರಾಜಣ್ಣ, ಎಂ.ಆರ್.ಸೀತಾರಾಮ್ ಮತ್ತಿತರರು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಒತ್ತಡ ಹೇರಿದ್ದಾರೆ. ಇತ್ತ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೆಂಗಳೂರಿನಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿ, ಮಾತುಕತೆ ನಡೆಸಿದ್ದಾರೆ.

### ದಿಲ್ಲಿಗೆ ದಿಗ್ಗಜರ ದೌಡು

ಜುಲೈ 7 ಅಥವಾ 8ರಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಅವರು ದೆಹಲಿಗೆ ತೆರಳುವ ಅನುಮಾನವಿದೆ. ಅಲ್ಲಿ ಸಂಪುಟ ವಿಸ್ತರಣೆ ಬಗ್ಗೆ ಚರ್ಚೆ ನಡೆಸಲಿದ್ದಾರೆ. ಹೈಕಮಾಂಡ್ ಸಮತಿ ನೀಡಿದರೆ ಜುಲೈ 12ರ ರೊಳಗೆ ಸಂಪುಟ ವಿಸ್ತರಣೆಯಾಗುವುದು ಬಹುತೇಕ ಖಚಿತವಾಗಿದೆ.

## ವಿದ್ಯಾರ್ಥಿಗಳು ರಾಷ್ಟ್ರದ ಭವಿಷ್ಯ: ಆರ್ ವಿ ದೇಶಪಾಂಡೆ

• ಮಲ್ಲಮ್ಮ ನುಡಿ ವಾರ್ತೆ ಹಳಿಯಾಳ

ವಿದ್ಯಾರ್ಥಿಗಳು ಜೀವನದಲ್ಲಿ ಗುರಿಯನ್ನು ಇಟ್ಟುಕೊಂಡು ವಿದ್ಯಾಭ್ಯಾಸ ಹಾಗೂ ಆರೋಗ್ಯದ ಕಡೆ ಹೆಚ್ಚು ಗಮನ ಕೊಡುವುದು, ಒಳ್ಳೆಯ ಚಾರಿತ್ರೆಯನ್ನು ಇಟ್ಟುಕೊಂಡದ್ದಾದಲ್ಲಿ ವಿಶ್ವಮಟ್ಟದಲ್ಲಿಯೇ ಸ್ಪರ್ಧಿಸಿ ಗುರಿಯನ್ನು ಸಾಧಿಸಬಹುದು ನೀವೇ ಮುಂದಿನ ರಾಷ್ಟ್ರದ ಭವಿಷ್ಯ ಎಂದು ಶಾಸಕ ಆರ್ ವಿ ದೇಶಪಾಂಡೆ ತಿಳಿಸಿದರು.

ಹಳಿಯಾಳ ಪಟ್ಟಣದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಆಯೋಜಿಸಲಾದ ಕಾರ್ಯಕ್ರಮವನ್ನು ಮಾನ್ಯ ಶಾಸಕರು ಉದ್ಘಾಟಿಸಿ ಮೈಸೂರ್ ಸೋಪ್ಸ್ & ಡಿಟರ್ಜೆಂಟ್ಸ್ ಲಿ.ನ ಸಾಮಾಜಿಕ ಹೊಣೆಗಾರಿಕೆ



ಯೋಜನೆಯಡಿ ನಿರ್ಮಿಸಲಾದ ನೂತನ ಕಂಪ್ಯೂಟರ್ ಲ್ಯಾಬ್ ಹಾಗೂ ತಾಂತ್ರಿಕ ಶಿಕ್ಷಣ ಇಲಾಖೆಯಿಂದ ಮಂಜೂರಾದ 25 ಕಂಪ್ಯೂಟರ್‌ಗಳನ್ನು ಶಾಸಕರು ವಿದ್ಯಾರ್ಥಿಗಳ ಶೈಕ್ಷಣಿಕ ಬಳಕೆಗಾಗಿ ಸಮರ್ಪಿಸಿ, ಈ ಸೌಲಭ್ಯವು ವಿದ್ಯಾರ್ಥಿಗಳ ಆಧುನಿಕ ತಾಂತ್ರಿಕ ಜ್ಞಾನಾರ್ಜನೆಗೆ ಕೌಶಲ್ಯಾಭಿವೃದ್ಧಿ ಹಾಗೂ ಭವಿಷ್ಯದ ಉದ್ಯೋಗಾವಕಾಶಗಳಿಗೆ ಅನುಕೂಲವಾಗಲೆಂದು ಹಾರೈಸಿದರು. ಈ ಸಮಾರಂಭದಲ್ಲಿ ಮುಖ್ಯ ಅತಿಥಿ–ಯಾಗಿ ಕೆ ಎಸ್ ಡಿ ಎಲ್ ಇಂಜಿನಿಯರ್ ಎಸ್ ಹೆಚ್ ಪರಶುರಾಮ ನಾಯಕ್ ತಸಿಲ್ದಾರ್ ಫಿರೋಜ್ ಷಾ ಸೋಮನಕಟ್ಟಿ, ಕಾಲೇಜಿನ ಪ್ರಾಂಶುಪಾಲರಾದ ಮೋಹನ್ ಕೆಎಸ್ ಮುಖಂಡರಾದ ಸತ್ಯಜಿತ್ ಗಿರಿ ಉಪಸ್ಥಿತರಿದ್ದರು.

# ಬಿಸಿಲ ನಾಡಿನ ರಾಜಕೀಯ ಬೆಳಗಿದವರಿಗೆ ಸಚಿವ ಪದವಿ..?

• ಎಂ.ಜಂಬುನಾಥ, ಬಳ್ಳಾರಿ ಜಿಲ್ಲಾವರದಿಗಾರ

ರಾಜ್ಯ ಸಚಿವ ಸಂಪುಟ ವಿಸ್ತರಣೆ ಹಾಗೂ ವಿವಿಧ ನಿಗಮ ಮಂಡಳಿಗಳಿಗೆ ಅಧ್ಯಕ್ಷರ ನೇಮಕಾತಿ ಕುರಿತ ರಾಜಕೀಯ ಚಟುವಟಿಕೆಗಳು ಕಾಂಗ್ರೆಸ್ ವಲಯದಲ್ಲಿ ಬಿರುಸುಗೊಂಡಿವೆ. ಇದರ ಬೆನ್ನಲ್ಲೇ ಗಡಿ ಜಿಲ್ಲೆ ಬಳ್ಳಾರಿಗೆ ಮತ್ತೆ ಸಚಿವ ಸ್ಥಾನ ದೊರೆಯುವ ಸಾಧ್ಯತೆಗಳ ಕುರಿತು ವ್ಯಾಪಕ ಚರ್ಚೆ ನಡೆಯುತ್ತಿದೆ.

**ಪ್ರಮುಖರ ಹೆಸರುಗಳು:** ಪ್ರಾದೇಶಿಕ ಸಮತೋಲನ, ಸಾಮಾಜಿಕ ಸಮೀಕರಣ ಹಾಗೂ ಜಿಲ್ಲೆಯ ರಾಜಕೀಯ ಪ್ರತಿನಿಧಿತ್ವಕ್ಕೆ ಆದ್ಯತೆ ನೀಡುವ ಉದ್ದೇಶದಿಂದ ಈ ಬಾರಿ ಬಳ್ಳಾರಿ ಜಿಲ್ಲೆಗೆ ಸಚಿವ ಸ್ಥಾನ ನೀಡುವ ಕುರಿತು ಕಾಂಗ್ರೆಸ್ ಹೈಕಮಾಂಡ್ ಹಾಗೂ ರಾಜ್ಯ ನಾಯಕತ್ವದ ಮಟ್ಟದಲ್ಲಿ ಚರ್ಚೆಗಳು ನಡೆಯುತ್ತಿವೆ ಎನ್ನಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಮಾಜಿ ಸಚಿವ ಬಿ. ನಾಗೇಂದ್ರ ಅವರ ಹೆಸರು ಮತ್ತೆ ಪ್ರಮುಖವಾಗಿ ಕೇಳಿಬರುತ್ತಿದೆ.

**ಸಚಿವ ಸ್ಥಾನದ ಆಕಾಂಕ್ಷಿ:** ಸರ್ಕಾರ ರಚನೆಯ ಆರಂಭಿಕ ಹಂತದಲ್ಲಿಯೇ ಬಳ್ಳಾರಿ ಜಿಲ್ಲೆಯಿಂದ ಸಚಿವ ಸ್ಥಾನಕ್ಕೆ ಬಿ. ನಾಗೇಂದ್ರ ಪ್ರಮುಖ ಆಕಾಂಕ್ಷಿಯಾಗಿದ್ದರು. ಆದರೆ ಮೊದಲ ಹಂತದಲ್ಲಿ ಅವರಿಗೆ ಸಚಿವ ಸ್ಥಾನ ದೊರೆಯಲಿಲ್ಲ. ನಂತರದ ಸಂಪುಟ ವಿಸ್ತರಣೆಯಲ್ಲಿ ಅವಕಾಶ ಸಿಗಲಿದೆ ಎಂಬ ವಿಶ್ವಾಸವನ್ನು ಅವರು ಹಲವು ಸಂದರ್ಭಗಳಲ್ಲಿ ವ್ಯಕ್ತಪಡಿಸಿದ್ದರು. ಇದೀಗ ಸಂಪುಟ ವಿಸ್ತರಣೆ ಕುರಿತು ಮತ್ತೆ ಚರ್ಚೆಗಳು ಆರಂಭವಾಗಿದ್ದು ಅವರ ಹೆಸರು ಮತ್ತೊಮ್ಮೆ ರಾಜಕೀಯ ಕೇಂದ್ರಬಿಂದುವಾಗಿದೆ.

**ಈ ಬಾರಿ ಭರತ್ ರೆಡ್ಡಿ, ನಾಗೇಂದ್ರಗೆ ಅವಕಾಶ...?**

**ರಾಜಕೀಯ ಪ್ರಾತಿನಿಧ್ಯ ನಿರೀಕ್ಷೆ:** ಇನ್ನೊಂದೆಡೆ, ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರಿಗೂ ಸರ್ಕಾರದ ಮಟ್ಟದಲ್ಲಿ ಮಹತ್ವದ ಜವಾಬ್ದಾರಿ ನೀಡುವ ಸಾಧ್ಯತೆಗಳ ಬಗ್ಗೆ ಕಾಂಗ್ರೆಸ್ ವಲಯದಲ್ಲಿ ಚರ್ಚೆಗಳು ಜೋರಾಗಿವೆ. ನಿಗಮ?ಮಂಡಳಿ ಅಧ್ಯಕ್ಷ ಸ್ಥಾನ ಅಥವಾ ಸರ್ಕಾರದ ಸಮಾನ ಹುದ್ದೆಗೆ ಅವರನ್ನು ಪರಿಗಣಿಸುವ ಸಾಧ್ಯತೆ ಇದೆ ಎಂಬ ಮಾತುಗಳು ಕೇಳಿಬರುತ್ತಿವೆ. ಇದರಿಂದ ಬಳ್ಳಾರಿ ಜಿಲ್ಲೆಯ ಕಾಂಗ್ರೆಸ್ ನಾಯಕರಿಗೆ ಹೆಚ್ಚಿನ ರಾಜಕೀಯ ಪ್ರಾತಿನಿಧ್ಯ ಸಿಗುವ ನಿರೀಕ್ಷೆ ವ್ಯಕ್ತವಾಗುತ್ತಿದೆ.





### ನಾಗೇಂದ್ರ ಅವರಿಗೆ ಮಂತ್ರಿ ಭಾಗ್ಯ?

ಸಚಿವ ಸಂಪುಟ ವಿಸ್ತರಣೆ ವೇಳೆ ಬಳ್ಳಾರಿ ಜಿಲ್ಲೆಗೆ ಯಾವ ಮಟ್ಟದ ರಾಜಕೀಯ ಪ್ರತಿನಿಧಿತ್ವ ದೊರೆಯಲಿದೆ ಎಂಬುದು ಸ್ಪಷ್ಟವಾಗಲಿದೆ. ಗಡಿ ಜಿಲ್ಲೆಗೆ ಮತ್ತೆ ಸಚಿವ ಸ್ಥಾನ ಸಿಗುತ್ತದೆ–ಯೇ? ಬಿ. ನಾಗೇಂದ್ರಗೆ ಮತ್ತೊಮ್ಮೆ ಅವಕಾಶ ದೊರೆ–ಯುತ್ತದೆಯೇ? ನಾರಾ ಭರತ್ ರೆಡ್ಡಿಗೆ ಸರ್ಕಾರದಲ್ಲಿ ಪ್ರಮುಖ ಜವಾಬ್ದಾರಿ ಸಿಗುತ್ತದೆಯೇ? ಎಂಬ ಪ್ರಶ್ನೆಗಳಿಗೆ ಅಧಿಕೃತ ಘೋಷಣೆಯೊಂದೇ ಉತ್ತರ ನೀಡಬೇಕಿದೆ.

### ಪ್ರಗತಿ ವಿಚಾರಗಳಲ್ಲಿ ಅಸಮಾಧಾನ

ಇತ್ತೀಚೆಗೆ ಬಳ್ಳಾರಿ ಜಿಲ್ಲೆಯಲ್ಲಿ ಕಾಂಗ್ರೆಸ್ ಶಾಸಕರ ನಡುವೆ ರಾಜಕೀಯ ಹಾಗೂ ಅಭಿವೃದ್ಧಿ ವಿಚಾರಗಳಲ್ಲಿ ಅಸಮಾಧಾನ ವ್ಯಕ್ತವಾಗುತ್ತಿದೆ ಎಂಬ ಚರ್ಚೆಗಳೂ ನಡೆಯುತ್ತಿವೆ. ಜಿಲ್ಲೆಯ ಅಭಿವೃದ್ಧಿ ಯೋಜನೆಗಳಿಗೆ ವೇಗ ನೀಡಲು ಹಾಗೂ ಕಾರ್ಯಕರ್ತರಲ್ಲಿ ವಿಶ್ವಾಸ ತುಂಬಲು ಬಳ್ಳಾರಿಗೆ ಸಚಿವ ಸ್ಥಾನ ನೀಡಬೇಕು ಎಂಬ ಒತ್ತಾಯವನ್ನು ಸ್ಥಳೀಯ ನಾಯಕರು ಮತ್ತು ಕಾರ್ಯಕರ್ತರು ನಿರಂತರವಾಗಿ ಮುಂದಿರಿಸುತ್ತಿದ್ದಾರೆ.

### ಸಚಿವ ಸ್ಥಾನವೋ, ನಿಗಮವೋ..?

ರಾಜ್ಯ ಸರ್ಕಾರ ಅಥವಾ ಕಾಂಗ್ರೆಸ್ ಹೈಕಮಾಂಡ್ ಇದುವರೆಗೆ ಸಚಿವ ಸಂಪುಟ ವಿಸ್ತರಣೆ ಅಥವಾ ನಿಗಮ ಮಂಡಳಿಗಳ ನೇಮಕಾತಿ ಕುರಿತು ಯಾವುದೇ ಅಧಿಕೃತ ಘೋಷಣೆ ಮಾಡಿಲ್ಲ. ಹೀಗಾಗಿ ಬಿ. ನಾಗೇಂದ್ರ ಅವರಿಗೆ ಸಚಿವ ಸ್ಥಾನ ಹಾಗೂ ನಾರಾ ಭರತ್ ರೆಡ್ಡಿಗೆ ನಿಗಮಮಂಡಳಿ ಅಧ್ಯಕ್ಷ ಸ್ಥಾನ ಸಿಗಲಿದೆ ಎನ್ನುವ ಎಲ್ಲಾ ಮಾಹಿತಿಗಳು ಸದ್ಯ ರಾಜಕೀಯ ಚರ್ಚೆ ಮತ್ತು ಊಹಾಪೋಹಗಳ ಮಟ್ಟದಲ್ಲೇ ಇವೆ.

## ಕಳ್ಳ ಮತದಾರರ ಒಂದು ಕಡೆ ಕೂರಿಸಿ SIR ಮಾಡುತ್ತಿದ್ದಾರೆ: ಎಚ್‌ಡಿ ಕುಮಾರಸ್ವಾಮಿ

# ವೃದ್ಧರನ್ನು ಮಕ್ಕಳು ಕಡೆಗಣಿಸಬೇಡಿ

ವೃದ್ಧಾಪ್ಯವು ಪ್ರತಿಯೊಬ್ಬರ ಜೀವನದಲ್ಲಿ ಸಹಜವಾಗಿ ಬರುವ ಹಂತವಾಗಿದೆ. ತಮ್ಮ ಜೀವನವನ್ನೇ ಮಕ್ಕಳ ಭವಿಷ್ಯಕ್ಕಾಗಿ ಮುಡಿಪಾಗಿಟ್ಟಿರುವ ತಂದೆ–ತಾಯಿಯನ್ನು ವಯಸ್ಸಾದ ನಂತರ ನಿರ್ಲಕ್ಷಿಸುವುದು ಮಾನವೀಯತೆಗೆ ವಿರುದ್ಧವಾದ ನಡೆ. ಇತ್ತೀಚಿನ ದಿನಗಳಲ್ಲಿ ಕೆಲ ಕುಟುಂಬಗಳಲ್ಲಿ ವೃದ್ಧರನ್ನು ಭಾರವೆಂದು ಭಾವಿಸಿ ಕಡೆಗಣಿಸುವ ಘಟನೆಗಳು ಹೆಚ್ಚುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ.

## ಸಂಪಾದಕೀಯ

**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**



ತಮ್ಮ ಮಕ್ಕಳ ಶಿಕ್ಷಣ, ಆರೋಗ್ಯ, ಜೀವನದ ನೆಲೆಗಾಗಿ ಶ್ರಮಿಸಿದ ಪೋಷಕರು ವೃದ್ಧಾಪ್ಯದಲ್ಲಿ ಪ್ರೀತಿ, ಗೌರವ ಮತ್ತು ಆರೈಕೆಯನ್ನು ಮಾತ್ರ ನಿರೀಕ್ಷಿಸುತ್ತಾರೆ. ಅವರಿಗೆ ಹಣಕ್ಕಿಂತ ಹೆಚ್ಚಾಗಿ ಆತ್ಮೀಯತೆ, ಮಾತುಕತೆ ಮತ್ತು ಜೊತೆಯಾಗಿ ಇರುವಿಕೆ ಮುಖ್ಯವಾಗಿದೆ. ಅವರ ಅನುಭವ ಮತ್ತು ಜೀವನ ಮೌಲ್ಯಗಳು ಕುಟುಂಬದ ಮುಂದಿನ ಪೀಳಿಗೆಗೆ ಮಾರ್ಗದರ್ಶನವಾಗುತ್ತವೆ.

ವೃದ್ಧರನ್ನು ವೃದ್ಧಾಶ್ರಮಗಳಿಗೆ ಕಳುಹಿಸುವ ಬದಲು ಮನೆಯಲ್ಲಿಯೇ ಗೌರವದಿಂದ ನೋಡಿಕೊಳ್ಳುವುದು ಪ್ರತಿಯೊಬ್ಬ ಮಗ–ಮಗಳ ಕರ್ತವ್ಯವಾಗಿದೆ. ಸಮಾಜದಲ್ಲೂ ಹಿರಿಯ ನಾಗರಿಕರ ಬಗ್ಗೆ ಗೌರವ ಮತ್ತು ಕಾಳಜಿಯನ್ನು ಬೆಳೆಸುವ ಸಂಸ್ಕೃತಿ ಬಲವಾಗಬೇಕು. ಸರ್ಕಾರವೂ ಹಿರಿಯ ನಾಗರಿಕರ ಕಲ್ಯಾಣ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಿ, ಅವರ ಸುರಕ್ಷತೆ ಮತ್ತು ಆರೋಗ್ಯದ ಕಡೆ ಹೆಚ್ಚಿನ ಗಮನ ಹರಿಸಬೇಕು.

ವೃದ್ಧರನ್ನು ಗೌರವಿಸುವ ಕುಟುಂಬವೇ ಸುಸಂಸ್ಕೃತ ಕುಟುಂಬ. ಇಂದು ನಾವು ನಮ್ಮ ಹಿರಿಯರನ್ನು ಹೇಗೆ ನೋಡಿಕೊಳ್ಳುತ್ತೇವೆಯೋ, ನಾಳೆ ನಮ್ಮ ಮುಂದಿನ ಪೀಳಿಗೆ ನಮ್ಮನ್ನು ಅದೇ ರೀತಿಯಲ್ಲಿ ನೋಡಿಕೊಳ್ಳುತ್ತದೆ ಎಂಬ ಅರಿವು ಪ್ರತಿಯೊಬ್ಬರಲ್ಲೂ ಇರಬೇಕು. ಆದ್ದರಿಂದ ಮಕ್ಕಳು ತಮ್ಮ ವೃದ್ಧ ತಂದೆ–ತಾಯಿಯನ್ನು ಎಂದಿಗೂ ಕಡೆಗಣಿಸದೆ, ಪ್ರೀತಿ, ಗೌರವದಿಂದ ಕಾಣಬೇಕು.

# ಬಿತ್ತನೆಗೆ ಕ್ರಿಯಾ ಯೋಜನೆ ರೂಪಿಸಿಕೊಳ್ಳಿ: ಪಂಕಜ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಪ್ರಸ್ತುತ ಮುಂಗಾರು ಋತುವಿನಲ್ಲಿ ಇದೂವರೆಗೆ ಬಿತ್ತನೆಗೆ ಪೂರಕವಾಗಿ ಮಳೆ ಬಾರದ ಕಾರಣ ಬರದ ಛಾಯೆ ಆವರಿಸಿದ್ದು, ಮುಂದಿನ ದಿನದಲ್ಲಿ ಮಳೆಯ ಆಶಾಭಾವನೆ ಹೊಂದಿ ಬಿತ್ತನೆಗೆ ಪೂರಕವಾಗಿ ಕ್ರಿಯಾ ಯೋಜನೆ ರೂಪಿಸಿಕೊಳ್ಳುವಂತೆ ಅಧಿಕಾರಿಗಳಿಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಆಡಳಿತ) ಸರ್ಕಾರದ ಕಾರ್ಯದರ್ಶಿ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರ ಕಾರ್ಯದರ್ಶಿ ಪಂಕಜ ಕುಮಾರ ಪಾಂಡೆ ತಿಳಿಸಿದರು.

ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ವಿವಿಧ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಬಿತ್ತನೆಗೆ ಪೂರಕವಾಗಿ ಬೀಜ ಮತ್ತು ರಸಗೊಬ್ಬರ ಕೊರತೆಯಾಗದಂತೆ ಅಧಿಕಾರಿಗಳು ಅಗತ್ಯ ಪ್ರಮಾಣದಲ್ಲಿ ದಾಸ್ತಾನು ಮಾಡಿಕೊಳ್ಳುವಂತೆಯೂ ಸೂಚಿಸಿದರು.

ಕೃಷಿ ಮತ್ತು ತೋಟಗಾರಿಕೆ ಅಧಿಕಾರಿಗಳು ಹಳ್ಳಿಗೆ ಭೇಟಿ ನೀಡಿ ರೈತರ ಅಹವಾಲು ಆಲಿಸಬೇಕು. ಮಳೆ ಇಲ್ಲದ ಕಾರಣ ಕಂಗಾಲಿಗಿರುವ ರೈತರಿಗೆ ಧೈರ್ಯ ತುಂಬುವಂತಹ ಕೆಲಸವಾಗಬೇಕು. ಮಾರುಕಟ್ಟೆಯಲ್ಲಿ ಬೀಜ, ರಸಗೊಬ್ಬರ ಕೃತಕ ಅಭಾವ ಸೃಷ್ಟಿಯಾಗದಂತೆ ನೋಡಿಕೊಳ್ಳಬೇಕು ಎಂದು ಪಂಕಜ್ ಕುಮಾರ ಪಾಂಡೆ ನಿರ್ದೇಶನ ನೀಡಿದರು.

ಜಿಲ್ಲೆಯ ವಿವಿಧ ಜಲಾಶಯಗಳ ಸ್ಥಿತಿಗತಿ ಅವಲೋಕಿಸಿದ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು, ಮುಂದಿನ ದಿನದಲ್ಲಿ ಮಳೆ ಬಾರದೆ ಹೋದಲ್ಲಿ ಕುಡಿಯುವ ನೀರಿಗೆ ಪರ್ಯಾಯ ವ್ಯವಸ್ಥೆ ಸಹ ಮಾಡಿಟ್ಟುಕೊಳ್ಳಬೇಕು. ಬಾವಿ, ಕೊಳವೆ ಬಾವಿ ಜಲಮೂಲಗಳ ನೆರವಿನಿಂದ ನೀರು ಪೂರೈಕೆ ಮಾಡಬೇಕು. ಕಲಬುರಗಿ ನಗರಕ್ಕೆ ನೀರು ಪೂ–ರೈಕೆಗೆ ನಾರಾಯಣಪುರ ಜಲಾಶಯದಿಂದ ನೀರು ಹರಿಸಬೇಕು. ಜನ ಮತ್ತು ಜಾನುವಾರುಗಳಿಗೆ ಯಾವುದೇ ಕಾರಣಕ್ಕೂ ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು. ಜಾನುವಾರುಗಳಿಗೆ ಬೇಕಾದ ಮೇವು ಸಹ ದಾಸ್ತಾನು ಮಾಡಬೇಕು. ಕಲಬುರಗಿ ನಗರದ ಕುಡಿಯುವ ನೀರಿನ ಸಮಸ್ಯೆ ಇದ್ದ ಕಡೆ ಟ್ಯಾಂಕರ್ ಮೂಲಕ ಪೂರೈಸಬೇಕು ಎಂದು ಅಧಿಕಾರಿಗಳಿಗೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಸೂಚನೆ ಕೊಟ್ಟರು.

ಈ ಸಂದರ್ಭದಲ್ಲಿ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ ಮಾತನಾಡಿ ನಗರದ ಜನತೆಗೆ ಕುಡಿಯುವ ನೀರಿನ ಶಾಶ್ವತ ಪರಿಹಾರಕ್ಕೆ ನಾರಾಯಣಪುರ ಜಲಾಶಯದಿಂದ ನೀರು ತರುವ ಪೈಪ್ ಲೈನ್ ಕಾಮಗಾರಿಯ 1,850 ಕೋಟಿ ರೂ. ಮೊತ್ತದ ಯೋಜನೆ ಡಿ.ಪಿ.ಆರ್ ಸಿದ್ಧವಾಗಿದೆ. ಪ್ರಸಕ್ತ ನಗರದಲ್ಲಿ ನೀರಿನ ಸಮಸ್ಯೆ ಇದ್ದ ವಾರ್ಡ್ ನಲ್ಲಿ ಪ್ರತಿ ದಿನ 160 ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡಲಾಗುತ್ತಿದೆ ಎಂದರು.

ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್ ಮಾತನಾಡಿ ಜಿಲ್ಲೆಯಾದ್ಯಂತ 80,840 ಹೆಕ್ಟೇರ್ ನೀರಾವರಿ ಮತ್ತು 8,09,793 ಹೆಕ್ಟೇರ್ ಮಳೆಯಾಶ್ರಿತ ಪ್ರದೇಶದಲ್ಲಿ ಪ್ರಸಕ್ತ ಖಾರೀಫ್ ನಲ್ಲಿ ಬಿತ್ತನೆ ಗುರಿ ಹೊಂದಲಾಗಿದ್ದರು, ಮಳೆ ಕೊರತೆಯಿಂದ ಕೇವಲ ಶೇ.30ರಷ್ಟು ಪ್ರದೇಶದಲ್ಲಿ ಮಾತ್ರ ಬಿತ್ತನೆ ಮಾಡಲಾಗಿದೆ. ಜಿಲ್ಲೆಯ ಹಲವು ತಾಲೂಕಿನಲ್ಲಿ ಬಿತ್ತನೆಗೆ ಬೇಕಾದ ಮಳೆ ಇನ್ನು ಬಂದಿಲ್ಲ. ಭತ್ತ, ಉದ್ದು, ತೊಗರಿ, ಹೆಸರು, ಸೋಯಾ ಅವರೆ, ಮೆಕ್ಕೆಜೋಳ, ಸಜ್ಜೆ, ಸೂರ್ಯಕಾಂತಿ ಬೆಳೆಗಳ ಬಿತ್ತನೆಗೆ ಈಗಾಗಲೆ 20,301 ಕ್ವಿಂಟಾಲ್ ವಿತರಿಸಿದ್ದು, ಇನ್ನು 6,395 ಕ್ವಿಂಟಾಲ್ ದಾಸ್ತಾನಿದೆ. ಅದೇ ರೀತಿ 45,935 ಮೆಟ್ರಿಕ್ ಟನ್ ರಸಗೊಬ್ಬರ ವಿತರಿಸಿದ್ದು, 33,725 ಮೆ.ಟನ್ ಇನ್ನು ಸ್ಟಾಕ್ ಇದೆ ಎಂದರು.

ಇನ್ನು ಡಿ.ಎ.ಪಿ ಸೇರಿದಂತೆ ಎಲ್ಲಾ ರೀತಿಯ ರಸಗೊಬ್ಬರ ಅನ್ಯ ರಾಜ್ಯಕ್ಕೆ ಮಾರಾಟವಾಗದಂತೆ ಜಿಲ್ಲೆಯ ಗಡಿ ಚೆಕ್ ಪೋಸ್ಟ್ ನಲ್ಲಿಯೂ ನಿಗಾ ವಹಿಸಿದೆ. ಮಾರುಕಟ್ಟೆಯಲ್ಲಿ ರೈತರಿಗೆ ಹೆಚ್ಚಿನ ದರಕ್ಕೆ ರಸಗೊಬ್ಬರ ಮಾರಾಟವಾಗದಂತೆ ಅಧಿಕಾರಿಗಳ ತಂಡ ಸತತವಾಗಿ ಕೃಷಿ ಪರಿಕರ ಅಂಗಡಿಗಳ ಮೇಲೆ ದಾಳಿ ಮಾಡಿ ಪರಿಶೀಲಿಸಲಾಗುತ್ತಿದೆ. ಇದೂವರೆಗೆ 168 ಅಂಗಡಿಗಳ ಮೇಲೆ ದಾಳಿ ಮಾಡಿ 51 ಅಂಗಡಿಗೆ ನೋಟಿಸ್ ನೀಡಿದಲ್ಲದೆ ನಿಯಮ ಉಲ್ಲಂಘಿಸಿದ 4 ಅಂಗಡಿಗಳ ಪರವಾನಿಗೆ ರದ್ದುಪಡಿಸಿದೆ ಎಂದರು.

ಕಲಬುರಗಿ ಜಿಲ್ಲೆಯಲ್ಲಿ ರಾಷ್ಟ್ರೀಯ ಹೆದ್ದಾರಿಗಳಿರುವುದರಿಂದ ಇದರ ಪ್ರಯೋಜನ ಪಡೆದುಕೊಂಡು ಹೆಚ್ಚಿನ ಕೈಗಾರಿಕೆ ಹೂಡಿಕೆಗೆ ಲ್ಯಾಂಡ್ ಬ್ಯಾಂಕ್ ಗುರುತಿಸಿಡಬೇಕು. ಇಲ್ಲಿ ವಿಮಾನ ನಿಲ್ದಾಣ ಇದೆ, ಸೂರತ್–ಚೆನ್ನೈ ಕಾರಿಡಾರ್ ಬರುತ್ತಿದೆ. ಎನ್.ಹೆಚ್ ಗಳಿವೆ. ಇವೆಲ್ಲದರ ಪ್ರಯೋಜನ ಪಡೆಯಬೇಕು. ಇನ್ನು ಕೈಗಾರಿಕೆಗಳಿಗೆ ಸಂಸ್ಕರಣ ನೀರು ಬಳಸಿದಲ್ಲಿ ಕೈಗಾರಿಕೆಗಳಿಗೆ ನೀರಿನ ಮಸ್ಯೆ ಸಹ ತಲೆದೋರದು ಎಂದರು.

# ಶಾಲಾ ನೌಕರರ ಬೇಡಿಕೆಗಳನ್ನು ನೆರವೇರಿಸುವಂತೆ ಆಗ್ರಹಿಸಿ ಪ್ರತಿಭಟನೆ



**ಕಲಘಟಗಿ:** ಸಂಧ್ಯಾ ಕಾಲದಲ್ಲಿ ನೆಮ್ಮದಿ ಜೀವನ ನಡೆಸಲು ಸಾಧ್ಯವಾಗದೆ ಬೀದಿ ಪಾಲಾಗುವ ಪರಿಸ್ಥಿತಿ ನಿರ್ಮಾಣವಾಗಿದ್ದು ನಾವು ಕೂಡ ಸರಕಾರದ ಅವಿಬಾಜ್ಯ ಅಂಗವಾಗಿದ್ದು ನಮಗೂ ಪಿಂಚಣಿ ಸೌಲಬ್ಯ ಸರಕಾರ ಒದಗಿಸಿಕೊಡಬೇಕೆಂದು ಆಘ್ರಹಿಸಿ ತಾಲೂಕಾ ಅನುದಾನಿತ ಶಾಲಾ ನೌಕರರ ಸಂಘದ ವತಿಯಿಂದ ಗ್ರೇಡ 2 ತಹಶಿಲ್ದಾರ ಬಸವರಾಜ ಅಂಗಡಿ ಇವರಿಗೆ ಮನವಿ ಸಲ್ಲಿಸಿದರು.

ಅವರು ಪಟ್ಟಣದ ತಹಶಿಲ್ದಾರ ಕಾರ್ಯಾಲಯದ ಆವರಣದಲ್ಲಿ ಸಂಘದ ಸದಸ್ಯರೊಂದಿಗೆ ಘೋಷಣೆ ಕೂಗುತ್ತ ಅಧ್ಯಕ್ಷರಾದ ವಿ.ಎಸ್ ರೇಶ್ಮಿ ಮಾತನಾಡಿ 2026 ರ ಕೇಂದ್ರ ಸಮಿತಿ ತೆಗೆದುಕೊಂಡ ತೀರ್ಮಾನದಂತೆ 2006 ನಂತರ ಪೂರ್ವದಲ್ಲಿ ನೇಮಕವಾಗಿ ನಂತರ ಅನುದಾನಕ್ಕೆ ಒಳಪಟ್ಟ ನೌಕರರಿಗೂ ಪಿಂಚಣಿ ಸೌಲಬ್ಯ ಒದಗಿಸಬೇಕು ಅಲ್ಲದೆ ಖಾಲಿ ಹುದ್ದೆಗಳಾದ ಶಿಕ್ಷಕ ಶಿಕ್ಷಕೇತರ ಹುದ್ದೆಗಳನ್ನು ಭರ್ತಿ ಮಾಡಬೇಕು ಶಿಕ್ಷಕರಿಗೆ ಭೋಧನಾ ಕಾರ್ಯವನ್ನು ಹೊರತುಪಡಿಸಿ ಇತರೆ ಕಾರ್ಯಗಳನ್ನು ವಹಿಸಕೂಡದು ಸರಕಾರದಿಂದ ಲಬ್ಯವಾಗುವ ಸೌಲಬ್ಯಗಳನ್ನು ಶಿಕ್ಷಕ ಹಾಗೂ ವಿದ್ಯಾರ್ಥಿಗಳಿಗೂ ನೀಡಬೇಕು ಎಂದು ಮಾತನಾಡಿದರು.

ಇ ಸಂಧರ್ಬದಲ್ಲಿ ಎಂ.ಎ ಗಾಣಿಗೇರ, ಎಲ.ಪಿ ಗಾರವಾಡ, ಆರ್.ಜೆ ಲಮಾಣಿ, ಎಸ್.ಎಸ್ ವಿಜಾಪೂರ, ಸಿ.ಬಿ ಗುಡಿಮನಿ.ಎನ.ಎ ಕಿಳ್ಳಕೇತರ, ಎಂ.ಡಿ ನೇಮಣ್ಣವರ, ಪಿ.ಆಯ್ ಕುಂಬಾರ, ಜಿ.ಆಯ್ ಪಟ್ಟೇದ, ಜಿ.ಆರ್ ನಾಯಕ, ಕೆ.ಪಿ.ಖಟಾವಕರ, ಎಸ.ಎ ಕಲಾದಗಿ, ಎಸ.ಎಸ್ ಬಂದಮ್ಮನವರ, ಬಿ.ಬಿ ಹಾದಿಮನಿ, ಸಿ.ಬಿ ದೇವರಮನಿ, ಇದ್ದರು.

# ಕಾನೂನು ಅರಿವು ಹಾಗೂ ಸಂಚಾರ ಸುರಕ್ಷತೆ ಕುರಿತು ಜಾಗೃತಿ



**ಗೌರಿಬಿದನೂರು:** ನಗರದ ಲೀಡರ್ಸ್ ಅಂತರರಾಷ್ಟ್ರೀಯ ಶಾಲೆಯಲ್ಲಿ ನಗರ ಪೊಲೀಸ್ ಠಾಣೆಯ ಅಪರಾಧ ವಿಭಾಗದ ಪಿಎಸ್ಐ ಲಲಿತಮ್ಮ ಹಾಗೂ ಪೊಲೀಸ್ ಸಿಬ್ಬಂದಿಯವರು ವಿದ್ಯಾರ್ಥಿಗಳಿಗೆ ಕಾನೂನು ಅರಿವು ಮತ್ತು ಸಂಚಾರ ಸುರಕ್ಷತೆ ಕುರಿತು ಜಾಗೃತಿ ಕಾರ್ಯಕ್ರಮ ನಡೆಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಪಿಎಸ್ಐ ಲಲಿತಮ್ಮ ಅವರು, ಸಂಚಾರ ನಿಯಮಗಳನ್ನು ಪ್ರತಿಯೊಬ್ಬರೂ ಕಡ್ಡಾಯವಾಗಿ ಪಾಲಿಸಬೇಕು, ದ್ವಿಚಕ್ರ ವಾಹನ ಸವಾರರು ಹೆಲ್ಮೆಟ್ ಧರಿಸುವುದು ಕಡ್ಡಾಯವಾಗಿದ್ದು, 18 ವರ್ಷಕ್ಕಿಂತ ಕಡಿಮೆ ವಯಸ್ಸಿನವರು ಯಾವುದೇ ರೀತಿಯ ವಾಹನವನ್ನು ಚಲಾಯಿಸಬಾರದು ಎಂದು ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿಕೊಟ್ಟರು. ಬಾಲ್ಯ ವಿವಾಹ ನಿಷೇಧ ಕಾಯ್ದೆ, ಪೋಕ್ಸೋ ಕಾಯ್ದೆ, ಬಾಲನ್ಯಾಯ ಕಾಯ್ದೆ, ಬಾಲ ಕಾರ್ಮಿಕ ನಿಷೇಧ ಕಾಯ್ದೆ, ವರದಕ್ಷಿಣೆ ನಿಷೇಧ ಕಾಯ್ದೆ ಸೇರಿದಂತೆ ಮಕ್ಕಳ ಹಾಗೂ ಮಹಿಳೆಯರ ರಕ್ಷಣೆಗಾಗಿ ಜಾರಿಯಲ್ಲಿರುವ ವಿವಿಧ ಕಾನೂನುಗಳ ಬಗ್ಗೆ ತಿಳಿಸಿದರು. ಇದೇ ವೇಳೆ ಮಾದಕ ವಸ್ತುಗಳ ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳು, ಯುವಜನರ ಭವಿಷ್ಯದ ಮೇಲೆ ಅದರ ಪರಿಣಾಮ ಹಾಗೂ ಅಂತಹ ದುಶ್ಚಟಗಳಿಂದ ದೂರವಿರುವಂತೆ ವಿದ್ಯಾರ್ಥಿಗಳಿಗೆ ಸಲಹೆ ನೀಡಲಾಯಿತು. ಸೈಬರ್ ವಂಚನೆಗಳ ಕುರಿತು ಎಚ್ಚರಿಕೆ ವಹಿಸುವುದು, ಅಪರಿಚಿತರೊಂದಿಗೆ ವೈಯಕ್ತಿಕ ಮಾಹಿತಿ, ಬ್ಯಾಂಕ್ ವಿವರಗಳು ಅಥವಾ ಒಟಿಪಿ ಹಂಚಿಕೊಳ್ಳಬಾರದು ಎಂಬುದರ ಕುರಿತು ಅರಿವು ಮೂಡಿಸಲಾಯಿತು. ತುರ್ತು ಸಂದರ್ಭಗಳಲ್ಲಿ ಮಕ್ಕಳ ಸಹಾಯವಾಣಿ 1098, ತುರ್ತು ಸೇವೆಗಳಿಗಾಗಿ 112 ಹಾಗೂ ಸೈಬರ್ ವಂಚನೆಗಳಿಗೆ ಸಂಬಂಧಿಸಿದ ದೂರು ಸಲ್ಲಿಸಲು 1930 ಸಹಾಯವಾಣಿ ಸಂಖ್ಯೆಗಳ ಉಪಯೋಗದ ಕುರಿತು ಮಾಹಿತಿ ನೀಡಲಾಯಿತು.

# ಪಾರದರ್ಶಕವೇ ಸಹಕಾರ ಕ್ಷೇತ್ರದ ಜೀವಾಳ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು




ಸಹಕಾರ ಕ್ಷೇತ್ರದ ಅಭಿವೃದ್ಧಿಗಾಗಿ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತದ ವತಿಯಿಂದ ನಗರದ ಕನಕದಾಸ ಕಲ್ಯಾಣ ಮಂಟಪದಲ್ಲಿ ರಾಯಚೂರು ಜಿಲ್ಲೆಯ ಸೌಹಾರ್ದ ಸಹಕಾರ ಸಂಘಗಳ ಪದಾಧಿಕಾರಿಗಳಿಗಾಗಿ ವಿಶೇಷ ಸಂಪರ್ಕ ಸಭೆ ನಡೆಯಿತು.

ಸಂಸ್ಥೆಯ ಅಧ್ಯಕ್ಷ ಜಿ.ನಂಜನಗೌಡ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಆರ್. ತಿಮ್ಮಯ್ಯ ಶೆಟ್ಟಿ ಅಧ್ಯಕ್ಷತೆ ವಹಿಸಿದ್ದರು. ಸಭೆಯಲ್ಲಿ ಪ್ರಾಂತೀಯ ವ್ಯವಸ್ಥಾಪಕ ಸಂಜಯ್ ಕೊರಟಕರ ಮಾತನಾಡಿ, ಸಂಘಗಳ ಬಲವರ್ಧನೆಗೆ ಪಾರದರ್ಶಕ ಆಡಳಿತ, ಆರ್ಥಿಕ ಶಿಸ್ತು ಮತ್ತು ಆಧುನಿಕ ತಂತ್ರಜ್ಞಾನದ ಅಗತ್ಯದ ಬಗ್ಗೆ ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಎಚ್.ಜಿ. ಹನುಮಂತಯ್ಯ ಶೆಟ್ಟಿ, ಎಂ. ದೊಡ್ಡಬಸವರಾಜ, ಮಂಜುಳ ಪಾಟೀಲ, ಕೆ. ವಿರೂಪಾಕ್ಷಪ್ಪ, ಸೋಮನಗೌಡ ಬಾದರ್ಲಿ ಹಾಗೂ ರಾಜಶೇಖರ್ ಬಿ. ಸೇರಿದಂತೆ ಹಲವು ಗಣ್ಯರು ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ಸೌಹಾರ್ದ ಅಭಿವೃದ್ಧಿ ಅಧಿಕಾರಿ ನಟರಾಜ, ರಾಯಚೂರು ಸೌಹಾರ್ದ ಒಕ್ಕೂಟದ ಪ್ರಭಾರಿ ಸಿಇಒ ಹುಸೇನ್ ಬಾಷಾ, ಶ್ರೀಮತಿ ಪುಷ್ಪಾ, ರಾಯಚೂರು ಜಿಲ್ಲೆಯಾದ್ಯಂತದ ವಿವಿಧ ಸೌಹಾರ್ದ ಸಹಕಾರ ಸಂಘಗಳ ಅಧ್ಯಕ್ಷರು, ಉಪಾಧ್ಯಕ್ಷರು, ನಿರ್ದೇಶಕರು, ಸಿಇಒಗಳು ಹಾಗೂ ಸಿಬ್ಬಂದಿ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದರು.

# ಸಚಿವರಿಂದ ಪೋಸ್ಟರ್ ಬಿಡುಗಡೆ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು



ರಾಯಚೂರು ಪ್ರಕೃತಿ ವಿಕೋಪ ನಿರ್ವಹಣೆಯ ಮೇಲುಸ್ತುವಾರಿ ಆಗಿರುವ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಜುಲೈ 03ರ ಶುಕ್ರವಾರದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಕೃಷಿ ಇಲಾಖೆಯ ವತಿಯಿಂದ ಪ್ರಸ್ತುತ ಸಾಲಿನ ಮುಂಗಾರು ಹಂಗಾಮಿನಲ್ಲಿ ಪ್ರಧಾನ ಮಂತ್ರಿ ಫಸಲ ಬಿಮಾ (ವಿಮೆ) ಯೋಜನೆಯ ಹಾಗೂ ವಿವಿಧ ರಸಗೊಬ್ಬರ ದರಗಳ ಪಟ್ಟಿ ಕುರಿತು ಪೋಸ್ಟರ್ ಬಿಡುಗಡೆ ಮಾಡಿದರು.

ಇದೇ ಸಂದರ್ಭದಲ್ಲಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ, ವಿಧಾನ ಪರಿಷತ್ ಶಾಸಕರಾದ ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರಕುಮಾರ್ ಕಾಂದೂ, ಅರುಣಾಂಗ್ಶುಗಿರಿ., ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ಡಾ.ಹಂಪಣ್ಣ ಸಜ್ಜನ್, ಹಾಲಸಿದ್ದಪ್ಪ ಪೂಜಾರಿ, ಪ್ರಕಾಶ್ ಚೌವಾಣ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಕೃಷಿ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಇದ್ದರು.

# ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಮುತ್ತಿಗೆ..!

• ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ



ದೇಶಾದ್ಯಂತ ಸ್ಕೀಮ್ ನೌಕರರ ಕರಾಳ ದಿನಾಚರಣೆ ಅಂಗವಾಗಿ ಅಂಗನವಾಡಿ ನೌಕರರ ಗೌರವಧನ ಹೆಚ್ಚಳ, ಅಂಗನವಾಡಿಗಳಲ್ಲೇ ಎಲ್‌ಕೆಜಿ–ಯುಕೆಜಿ ಆರಂಭ, ಚುನಾವಣೆ ಹಾಗೂ ಇತರೆ ಹೆಚ್ಚುವರಿ ಕೆಲಸಗಳಿಂದ ಮುಕ್ತಿಗೊಳಿಸುವುದು ಸೇರಿದಂತೆ ಹಲವು ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಜುಲೈ 10ರಂದು ಜಿಲ್ಲಾಧಿಕಾರಿಗಳ ಕಚೇರಿ ಮುತ್ತಿಗೆ ಹಾಗೂ ಕೆಲಸ ಸ್ಥಗಿತಗೊಳಿಸಿ ಪ್ರತಿಭಟನೆ ನಡೆಸಲಾಗುವುದು ಎಂದು ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘದ ಜಿಲ್ಲಾಧ್ಯಕ್ಷೆ ಜಿ.ಎಂ.ಲಕ್ಷ್ಮೀದೇವಮ್ಮ ತಿಳಿಸಿದರು.

ಶನಿವಾರ ನಗರದ ಅಂಬೇಡ್ಕರ್ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರ ಸರಕಾರ ಐಸಿಡಿಎಸ್ ಯೋಜನೆಗೆ ನೀಡುತ್ತಿರುವ ಅನುದಾನವನ್ನು ಬೆಲೆ ಏರಿಕೆಗೆ ಅನುಗುಣವಾಗಿ ಹೆಚ್ಚಿಸದೆ ನಿರಂತರವಾಗಿ ಕಡಿತಗೊಳಿಸುತ್ತಿದೆ. 2017ರಿಂದ ಪೌಷ್ಟಿಕ ಆಹಾರದ ಘಟಕ ವೆಚ್ಚವನ್ನೂ ಹೆಚ್ಚಿಸದ ಪರಿಣಾಮ ಅಂಗನವಾಡಿ ವ್ಯವಸ್ಥೆ ದುರ್ಬಲವಾಗುತ್ತಿದೆ ಎಂದು ಆರೋಪಿಸಿದರು. ರಾಷ್ಟ್ರೀಯ ಶಿಕ್ಷಣ ನೀತಿ–2020 ಜಾರಿಯಿಂದ 3ರಿಂದ 6 ವರ್ಷದ ಮಕ್ಕಳನ್ನು ಅಂಗನವಾಡಿಗಳಿಂದ ದೂರವಿಟ್ಟು ಸರಕಾರಿ ಶಾಲೆಗಳಲ್ಲಿ ಎಲ್‌ಕೆಜಿ–ಯುಕೆಜಿ ಆರಂಭಿಸುವ ಕ್ರಮ ಕೈಗೊಳ್ಳಲಾಗುತ್ತಿದೆ. ಇದರಿಂದ ಅಂಗನವಾಡಿ ಕೇಂದ್ರಗಳಲ್ಲಿನ ಫಲಾನುಭವಿಗಳ ಸಂಖ್ಯೆ ಗಣನೀಯವಾಗಿ ಕುಸಿಯುವ ಆತಂಕ ಎದುರಾಗಿದೆ. ರಾಜ್ಯದಲ್ಲಿ 10 ಸಾವಿರ ಅಂಗನವಾಡಿ ಕೇಂದ್ರಗಳಲ್ಲಿ ಎಲ್‌ಕೆಜಿ–ಯುಕೆಜಿ ಆರಂಭಿಸುವುದಾಗಿ ಘೋಷಿಸಿದ್ದರೂ, ಅದಕ್ಕೆ ಅಗತ್ಯ ಅನುದಾನ ಬಿಡುಗಡೆ ಮಾಡಿಲ್ಲ ಎಂದು ದೂರಿದರು.

ಅಂಗನವಾಡಿ ವ್ಯವಸ್ಥೆಯನ್ನು ಶಾಲಾಪೂರ್ವ ಶಿಕ್ಷಣದ ಹೆಸರಿನಲ್ಲಿ ಖಾಸಗೀಕರಣದತ್ತ ಕೊಂಡೊಯ್ಯುವ ಪ್ರಯತ್ನ ನಡೆಯುತ್ತಿದೆ. ಸ್ಥಳೀಯ ತಾಜಾ ಆಹಾರದ ಬದಲಿಗೆ ಪ್ಯಾಕೆಟ್ ಆಹಾರ, ನಗದು ವರ್ಗಾವಣೆ, ಕೇಂದ್ರೀಕೃತ ಕಾರ್ಪೊರೇಟ್ ಅಡುಗೆಮನೆ ಹಾಗೂ ಸಿಎಸ್‌ಆರ್ ಯೋಜನೆಗಳ ಮೂಲಕ ಐಸಿಡಿಎಸ್‌ನ ಮೂಲ ಉದ್ದೇಶಕ್ಕೆ ಧಕ್ಕೆಯಾಗುತ್ತಿದೆ ಎಂದು ಅವರು ಹೇಳಿದರು. ಜುಲೈ 10ರಂದು ದೇಶಾದ್ಯಂತ ಕೆಲಸ ಸ್ಥಗಿತಗೊಳಿಸಿ ಕರಾಳ ದಿನಾಚರಣೆ ನಡೆಸುವ ಮೂಲಕ ಹಕ್ಕುಗಳ ರಕ್ಷಣೆ ಹಾಗೂ ಸಾಮಾಜಿಕ ಭದ್ರತೆಗಾಗಿ ಹೋರಾಟ ತೀವ್ರಗೊಳಿಸಲಾಗುವುದು ಎಂದು ಅವರು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಸಂಘದ ಜಿಲ್ಲಾ ಕಾರ್ಯದರ್ಶಿ ರತ್ನಮ್ಮ, ಖಜಾಂಚಿ ವೆಂಕಟಲಕ್ಷ್ಮಿ, ಪದಾಧಿಕಾರಿಗಳಾದ, ಶಿಲ್ಪ, ಭಾಗ್ಯಮ್ಮ, ಮಂಜುಳಾ ಬಿಸಿ ಊಟ ಸಂಘದ ಜಿಲ್ಲಾ ಉಪಾಧ್ಯಕ್ಷ ಮುಸ್ತಫ ಇದ್ದರು.

# ಕಾನೂನು ನೆರವು ಕೇಂದ್ರದ ಬಗ್ಗೆ ಜಾಗೃತಿ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಕಾಲೇಜುಗಳಲ್ಲಿ ಕಾನೂನು ನೆರವು ಕೇಂದ್ರಗಳನ್ನು ಸ್ಥಾಪಿಸಿ, ವಿದ್ಯಾರ್ಥಿಗಳಿಂದಲೇ ಸಾರ್ವಜನಿಕರಿಗೆ ಉಚಿತ ಕಾನೂನು ಸೇವೆ ಹಾಗೂ ನೆರವು ಒದಗಿಸುವ ಪ್ರವೃತ್ತಿ ಬೆಳೆಸುವ ಉದ್ದೇಶದಿಂದ ನಗರದಲ್ಲಿ ಇದೇ ಜುಲೈ 6 ರಂದು 5ನೇ ವಿಭಾಗೀಯ ಮಟ್ಟದ ಕಾನೂನು ಕಾರ್ಯಗಾರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶ್ರೀನಿವಾಸ ನವಲೆ ತಿಳಿಸಿದರು.

ಶನಿವಾರ ಇಲ್ಲಿನ ಜಿಲ್ಲಾ ನ್ಯಾಯಾಲಯದ ಆವರಣದ ಎ.ಡಿ.ಆರ್ ಕಟ್ಟಡದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾನೂನು ವಿಶ್ವವಿದ್ಯಾಲಯ ಹಾಗೂ ಈ ವಿಭಾಗದ 25 ಕಾನೂನು ವಿದ್ಯಾಲಯಗಳ ಸಂಯುಕ್ತಾಶ್ರಯದಲ್ಲಿ "ತರಗತಿಯಿಂದ ನ್ಯಾಯಾಲಯದವರೆಗೆ: ಸಾಮಾಜಿಕ ನ್ಯಾಯದ ವೇಗವರ್ಧಕರಾಗಿ ಕಾನೂನು ವಿದ್ಯಾರ್ಥಿಗಳು" (From Classroom to Courtroom: Law Students as Catalysts for Social Justice) ಎಂಬ ವಿಷಯದ ಕುರಿತು ವಲಯ ಮಟ್ಟದ ತರಬೇತಿ ಕಾರ್ಯಗಾರವನ್ನು ಆಯೋಜಿಸಲಾಗಿದೆ.

ನಗರದ ಪಿ.ಡಿ.ಎ. ಎಂಜಿನಿಯರಿಂಗ್ ಕಾಲೇಜ್ ಸಭಾಂಗಣದಲ್ಲಿ ಜುಲೈ 06 ರಂದು ಬೆಳಿಗ್ಗೆ 9.30 ಕ್ಕೆ ಕಾರ್ಯಕ್ರಮ ಉದ್ಘಾಟನೆಗೊಳ್ಳಲಿದೆ ಎಂದರು.

ಕರ್ನಾಟಕ ಹೈಕೋರ್ಟ್ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಮುಖ್ಯ ಪೋಷಕರಾದ ಗೌರವಾನ್ವಿತ ಮುಖ್ಯ ನ್ಯಾಯಮೂರ್ತಿ ವಿಭು ಬಾಖ್ರು ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಬೆಂಗಳೂರು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಕಾರ್ಯನಿರ್ವಾಹಕ ಅಧ್ಯಕ್ಷರು ಗೌರವಾನ್ವಿತ ನ್ಯಾಯಮೂರ್ತಿ ಶ್ರೀಮತಿ ಅನು ಶಿವರಾಮನ್ ಉಪಸ್ಥಿತಿ ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯ ಮತ್ತು ಅಧ್ಯಕ್ಷರು ಉಚ್ಚ ನ್ಯಾಯಾಲಯ ಕಾನೂನು ಸೇವೆಗಳ ಸಮಿತಿ ನ್ಯಾಯಮೂರ್ತಿ ಆರ್. ದೇವದಾಸ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಅಧ್ಯಕ್ಷರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಜಿ..ಎಲ್. ಲಕ್ಷ್ಮೀನಾರಾಯಣ, ಬೆಂಗಳೂರು ಕರ್ನಾಟಕ ಉಚ್ಚನ್ಯಾಯಾಲಯ ರಜಿಸ್ಟಾರ್ ಜನರಲ್ ಶ್ರೀ ಎಂ. ಚಂದ್ರಶೇಖರ ರೆಡ್ಡಿ, ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ ಹುಬಳ್ಳಿ ಕುಲಪತಿಗಳಾದ ಪ್ರೋ. (ಡಾ) ಸಿ. ಬಸವರಾಜು. ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿಗಳಾದ ಹೆಚ್. ಶಶೀಧರ ಶೆಟ್ಟಿ, ಕಾನೂನು ಸಹಾಯಕರಾದ ಹೆಚ್.ಕೆ.ಇ. ಸೊಸೈಟಿ ಅಧ್ಯಕ್ಷರು ರಾಜಕುಮಾರ ಕಡಗಂಚಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಶ್ರೀನಿವಾಸ ನವಲೆ ವಹಿಸಲಿದ್ದಾರೆ.

ಈ ಕಾರ್ಯಗಾರದಲ್ಲಿ ಕಲಬುರಗಿ, ಬೀದರ್, ಯಾದಗಿರಿ, ರಾಯಚೂರು, ಬಳ್ಳಾರಿ, ಕೊಪ್ಪಳ ಹಾಗೂ ಗಂಗಾವತಿಯ ಒಟ್ಟು 25 ಕಾಲೇಜುಗಳಿಂದ ಸುಮಾರು 1,000 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಮತ್ತು ಪ್ರಾಧ್ಯಾಪಕರು ಭಾಗವಹಿಸಲಿದ್ದಾರೆ. ಪ್ರತಿ ಕಾಲೇಜಿನಿಂದ ತಲಾ 40 ವಿದ್ಯಾರ್ಥಿಗಳನ್ನು ಕಳುಹಿಸಲು ಸೂಚಿಸಲಾಗಿದೆ. ಈಗಾಗಲೇ ನೋಂದಾಯಿಸಿಕೊಂಡಿರುವ ವಿದ್ಯಾರ್ಥಿಗಳಿಗೆ ಅಂದು ಸ್ಥಳದಲ್ಲಿಯೇ ಮರುನೋಂದಣಿ ಪ್ರಕ್ರಿಯೆ ನಡೆಯಲಿದೆ ಎಂದರು.

ತರಬೇತಿಯ ಪ್ರತಿ ಕಾರ್ಯಗಾರಕ್ಕೆ ಪ್ರತ್ಯೇಕ ಸಂಪನ್ಮೂಲ ವ್ಯಕ್ತಿಗಳು ಆಗಮಿಸಿ, ನಿಗದಿಪಡಿಸಿದ ವಿಷಯಗಳ ಕುರಿತು ತಲಾ 45 ನಿಮಿಷಗಳ ಕಾಲ ಮಾಹಿತಿ ನೀಡಲಿದ್ದಾರೆ. ತರಗತಿಯ ಜ್ಞಾನವನ್ನು ಪ್ರಾಯೋಗಿಕವಾಗಿ ನ್ಯಾಯಾಲಯದಲ್ಲಿ ಹೇಗೆ ಬಳಸಬೇಕು ಮತ್ತು ಸಾಮಾಜಿಕ ನ್ಯಾಯಕ್ಕಾಗಿ ವಿದ್ಯಾರ್ಥಿಗಳು ಹೇಗೆ ಶ್ರಮಿಸಬೇಕು ಎಂಬ ಕುರಿತು ಗಂಭೀರ ಚರ್ಚೆ ನಡೆಯಲಿದೆ. ಕೊನೆಯಲ್ಲಿ ವಿದ್ಯಾರ್ಥಿಗಳ ಸಂಶಯ ನಿವಾರಣೆಗಾಗಿ ವಿಶೇಷ ಸಂವಾದ ಕೂಡ ಇರಲಿದೆ ಎಂದು ಶ್ರೀನಿವಾಸ ನವಲೆ ವಿವರಿಸಿದರು.

ಈ ಒಂದು ದಿನದ ವಿಭಾಗೀಯ ಕಾರ್ಯಗಾರದಲ್ಲಿ ವಿದ್ಯಾರ್ಥಿಗಳ ಪ್ರಾಯೋಗಿಕ ಕಲಿಕೆಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಪ್ರತಿ ವಿಷಯದ ಕುರಿತು ತಜ್ಞ–ರಿಂದ 45 ನಿಮಿಷಗಳ ಕಾಲ ವಿಶೇಷ ಉಪನ್ಯಾಸ ನಡೆಯಲಿದೆ. ಕಾರ್ಯಕ್ರಮದ ಕೊನೆಯ ಅವಧಿಯಲ್ಲಿ ವಿದ್ಯಾರ್ಥಿಗಳಲ್ಲಿ ಮೂಡುವ ಕಾನೂನಾತ್ಮಕ ಗೊಂದಲ ಹಾಗೂ ಸಂಶಯಗಳನ್ನು ನಿವಾರಿಸಲು ಹಿರಿಯ ನ್ಯಾಯಮೂರ್ತಿಗಳು ಮತ್ತು ಕಾನೂನು ತಜ್ಞರೊಂದಿಗೆ ಮುಖಾಮುಖಿ ಸಂವಾದಕ್ಕೆ ವಿಶೇಷ ಅವಕಾಶ ಕಲ್ಪಿಸಲಾಗಿದೆ ಎಂದರು.

## ಧರಿನಾಡು ಸೌಹಾರ್ದ ಸಹಕಾರಿ ಸಂಘ ನಿ.,ಬೀದರ

**ಮುದ್ದಾ ನಿವಾಸ್ ಶರಣ ನಗರ, ನ್ಯಾಷನಲ್ ಕಾಲೇಜ್ ಹತ್ತಿರ, ಬೀದರ-585401**

3ನೇ ವರ್ಷದ ಸಾಮನ್ಯ ಸಭೆಯ ನೋಟಿಸ್

ಆತ್ಮೀಯ ಸಹಕಾರಿ ಬಂಧುಗಳೇ, ದಿನಾಂಕ 11-07-2026 ಶನಿವಾರ ರಂದು ಸಹಕಾರಿಯ ಸಾಮನ್ಯ ಸಭೆಯನ್ನು ಸಹಕಾರಿಯ ಅಧ್ಯಕ್ಷರಾದ ಶ್ರೀ ಶಿವಶಂಕರ ಬೆಮಳಗಿ ಇವರ ಅಧ್ಯಕ್ಷತೆಯಲ್ಲಿ ಸ್ಥಳ ಸಹಕಾರಿಯ ಕಛೇರಿ ಸಭೆಯ ಆವರಣದಲ್ಲಿ ಸಮಯ ಬೆಳಿಗ್ಗೆ 11:30 ಗಂಟೆಗೆ ಕರೆಯಲಾಗಿದೆ. ಕೆಳಕಂಡ ವಿಷಗಳ ಕುರಿತು ಚರ್ಚಿಸಿ ನಿರ್ಣಯಗಳನ್ನು ಕೈಗೊಳ್ಳಲು ತಾವು ತಪ್ಪದೆ ಸಭೆಗೆ ಹಾಜರಾಗಿ ತಮ್ಮ ಅಮೂಲ್ಯ ಸಲಹೆ ಸೂಚನೆಗಳನ್ನು ನೀಡಲು ವಿನಂತಿ.

•ಸಭೆಯಲ್ಲಿ ಚರ್ಚಿಸುವ ವಿಷಯಗಳು:-

1) ಸಭೆಯ ನೋಟಿಸ್ ಓದಿ ದಾಖಲಿಸುವುದು.
2) ಹಿಂದಿನ ಸಭೆಯ ನಡಾವಳಿಯನ್ನು ಓದಿ ಅನುಮೊದಿಸುವು.
3) 2025-26ನೇ ಸಾಲಿನ ವಾರ್ಷಿಕ ವರದಿ ಮಂಡನೆ
4) 2025-26ನೇ ಸಾಲಿನ ಲೆಕ್ಕ ಪರಿಶೋಧನೆ ವರದಿಯನ್ನು ಅಂಗೀಕರಿಸುವುದು.
5) 2026-27 ನೇ ಸಾಲಿನ ಕ್ರೀಯಾ ಯೋಜನೆಯನ್ನು ಅನುಮೂದಿಸುವುದು.
6) 2026-27ನೇ ಸಾಲಿನ ಅಂದಾಜು ಆಯ ವ್ಯಯವನ್ನು ಮಂಜುರು ಮಾಡುವುದು.
7) 2024-25ನೇ ಸಾಲಿಗೆ ಲೆಕ್ಕ ಪರಿಶೋಧಕರ ನೇಮಕಾತಿ.
8) 2023-24ನೇ ಸಾಲಿನ ಲಾಭ ವಿಂಗಡನೆ ಮಾಡುವ ಬಗ್ಗೆ
9) ಸಹಕಾರಿಯ ಉಪವಿಧಿ (ಬೈಲಾ) ತಿದ್ದುಪಡಿ ಮಾಡುವ ಬಗ್ಗೆ.
10) ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು.

ವಂದನೆಗಳೊಂದಿಗೆ
ಸ್ಥಳ:-ಬೀದರ
ದಿನಾಂಕ:-15-06-2026

ಆಡಳಿತ ಮಂಡಳಿಯ ಅಪ್ಪಣೆ ಮೇರೆಗೆ
ಸಹಿ/-
ಮುಖ್ಯ ಕಾರ್ಯನಿರ್ವಾಹಕರು


# ಗಡಿ ಗ್ರಾಮದ ವಿದ್ಯಾರ್ಥಿಗಳ ಪರದಾಟ : ಲೋಕಲ್ ಬಸ್ ಆರಂಭಕ್ಕೆ ಆಗ್ರಹ

ನಾಗರಾಜ ಮಂಜಗುಣಿ

• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ





ದೇಶಕ್ಕೆಸ್ವಾತಂತ್ರ್ಯದೊರೆತು 70 ವರ್ಷಗಳೇ ಕಳೆದರೂ ಗಡಿ ಭಾಗದಗ್ರಾಮದವರು ಇಂದಿಗೂ ಸಂಕಷ್ಟಅನುಭವಿಸುತ್ತಿದ್ದಾರೆ. ಅಂಕೋಲಾ-ಯಲ್ಲಾಪುರಗಡಿಭಾಗದ ಶಾಲಾ ಕಾಲೇಜು ವಿದ್ಯಾರ್ಥಿಗಳು ಹಾಗೂ ಪ್ರಯಾಣಿಕರು ಸರಿಯಾದ ಬಸ್ ಸೌಲಭ್ಯವಿಲ್ಲದೇ ಹೈರಾಣಾಗುತ್ತಿದ್ದಾರೆ.

ವಿದ್ಯಾರ್ಥಿಗಳಿಗೆಸರಕಾರಬಸ್ ಸೌಲಭ್ಯಉಚಿತವಾಗಿನೀಡಿದೆ. ಆದರೆ ಸರಿಯಾದ ಸಮಯಕ್ಕೆ ಬಸ್ ಬಾರದಿರುವುದು ಮತ್ತು ಲೋಕಲ್ ಬಸ್ ಇಲ್ಲದಿರುವುದರಿಂದಾಗಿ ವಿದ್ಯಾರ್ಥಿಗಳು ತಮ್ಮ ಭಾಗದಿಂದ ಸಂಚರಿಸುವ ಲಾರಿ, ಪಿಕಪ್, ಆಟೋರಿಕ್ಷಾಏರಿ ಪ್ರಯಾಣಿಸುವ ಸನ್ನಿವೇಷ ಪ್ರತಿನಿತ್ಯಕಣ್ಣಿಗೆಕಾಣುವಂತಾಗಿದೆ.

ತಾಲೂಕಿನ ಮಾಸ್ತಿಕಟ್ಟಾ, ಹೆಬ್ಬುಳ, ಮೂಲೆಮನೆ, ಸಬಗುಳಿ, ಆಲದಕೋಣ ಹಾಗೂ ವಜ್ರಳ್ಳಿ ಸೇರಿದಂತೆ ಹಲವು ಭಾಗಗಳ ವಿದ್ಯಾರ್ಥಿಗಳು ಪ್ರತಿನಿತ್ಯಯಲ್ಲಾಪುರಕ್ಕೆ ಶಾಲಾ ಕಾಲೇಜುಗಳಿಗೆ ತೆರಳಬೇಕು. ಆದರೆಒಂದೇಒಂದು ಲೋಕಲ್ ಬಸ್ ಇಲ್ಲದಿರುವುದರಿಂದಾಗಿಇತರೆ ವಾಹನವನ್ನು ಹತ್ತಿ ತೆರಳಬೇಕಾಗಿದೆ.ಹೀಗಾಗಿ ಸರಿಯಾದ ಸಮಯಕ್ಕೆ ಶಾಲಾ ಕಾಲೇಜುಗಳಿಗೆ ತೆರಳಲಾಗದೇ ವಿದ್ಯಾರ್ಥಿಗಳು ಸಮಸ್ಯೆಅನುಭವಿಸುತ್ತಿದ್ದಾರೆ. ಹಾಗೇ ಯಲ್ಲಾಪುರದಿಂದ ವಾಪಸ್ ಬರುವಾಗಲೂಕೂಡಇದೇ ಪರಿಸ್ಥಿತಿ ಇದ್ದು, ಈ ಬಗ್ಗೆ ಸಾರಿಗೆ ಸಂಸ್ಥೆಯ ಅಧಿಕಾರಿಗಳು ಗಮನಕ್ಕೂ ತಮದರೂಯಾವುದೇ ಪ್ರಯೋಜನವಾಗುತ್ತಿಲ್ಲಎನ್ನುವುದು ಪಾಲಕರಆರೋಪವಾಗಿದೆ.

ಒತ್ತಾಯ :ಅಂಕೋಲಾದಿಂದಯಲ್ಲಾಪುರಕ್ಕೆ ಬೆಳಿಗ್ಗೆ 8 ಗಂಟೆಗೆ ಮತ್ತುಯಲ್ಲಾಪುರದಿಂದ ಅಂಕೋಲಾಕ್ಕೆ ಬೆಳಿಗ್ಗೆ 7.45 ಕ್ಕೆ ಲೋಕಲ್ ಬಸ್ ಬಿಡುವ ವ್ಯವಸ್ಥೆ ಮಾಡಬೇಕು. ಹಾಗೇ ಸಂಜೆ 4 ಗಂಟೆಗೆಯಲ್ಲಾಪುರದಿಂದ ಅಂಕೋಲಾಕ್ಕೆ ಮತ್ತುಅಂಕೋಲಾದಿಂದಯಲ್ಲಾಪುರಕ್ಕೆ 4.15 ಕ್ಕೆ ಲೋಕಲ್ ಬಸ್ ಬಿಡುವ ವ್ಯವಸ್ಥೆ ಆಗಬೇಕು. ಈ ವ್ಯವಸ್ಥೆಆದರೆ ಶಾಲಾ ಕಾಲೇಜುಗಳಿಗೆ ತೆರಳುವ ವಿದ್ಯಾರ್ಥಿಗಳ ಜತೆಗೆಇತರೆ ಪ್ರಯಾಣಿಕರಿಗೂ ಅನುಕೂಲವಾಗಲಿದೆಎಂದು ಸ್ಥಳೀಯರು ಆಗ್ರಹಿಸಿದ್ದಾರೆ.

ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಲೋಕಲ್ ಬಸ್ ಬಿಡುವ ಅನಿವಾರ್ಯತೆಯಿದೆ. ಇಲ್ಲದಿದ್ದರೆ ವಿದ್ಯಾರ್ಥಿಗಳು ಯಾವುದೋಅಪರಿಚಿತ ವಾಹನ ಹತ್ತಿ ನಂತರ ಬಹುದೊಡ್ಡ ಸಮಸ್ಯೆಎದುರಿಸಬೇಕಾದ ಪರಿಸ್ಥಿತಿಯೂ ಇರುವುದರಿಂದ ಈ ಬಗ್ಗೆ ಅಧಿಕಾರಿಗಳು ಜಾಗೃತರಾಗಬೇಕು. ಹೆಣ್ಣುಮಕ್ಕಳು ಕೂಡ ಹೆಚ್ಚಿನ ಸಂಖ್ಯೆಯಲ್ಲಿಕಾಲೇಜಿಗೆ ಹೋಗುವುದರಿಂದಅವರ ಸುರಕ್ಷತೆಯದೃಷ್ಟಿಯಿಂದ ಲೋಕಲ್ ಬಸ್ ಆರಂಭಿಸಬೇಕು. ಇಲ್ಲದಿದ್ದರೆ ಮುಂದಾಗುವ ಅನಾಹುತಗಳಿಗೆ ಅಧಿಕಾರಿಗಳು ಜವಾಬ್ದಾರರಾಗಲಿದ್ದಾರೆ.

-ಮನೋಹರ ನಾಯ್ಕ ಸ್ಥಳೀಯರು

# ಲಾಯನ್ಸ್ ಕ್ಲಬ್ ಅಧ್ಯಕ್ಷರಾಗಿ ಜಿ.ಆರ್. ತಾಂಡೇಲ ಆಯ್ಕೆ

• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ



ಲಾಯನ್ಸ್‌ಕ್ಲಬ್ ಅಂಕೋಲಾ ಕರಾವಳಿ ಇದರನೂತನಅಧ್ಯಕ್ಷರಾಗಿ ಪಿ.ಎಂ.ಹೈಸ್ಕೂಲಿನ ಶಿಕ್ಷಕ ಎನ್.ಸಿ.ಸಿ. ಕಮಾಂಡರ್ ಜಿ.ಆರ್. ತಾಂಡೇಲ ಮಂಜಗುಣಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಸುಧೀರ ಡಿ. ನಾಯ್ಕ ಕಾರ್ಯದರ್ಶಿಯಾಗಿ, ಸತೀಶ ಆನಂದು ನಾಯ್ಕ ಖಜಾಂಚಿಯಾಗಿ ಆಯ್ಕೆಯಾಗಿದ್ದಾರೆ. ಈ ಆಯ್ಕೆ ಪ್ರಕ್ರಿಯೆಯು ಸಂಘದ ಕಚೇರಿಯಲ್ಲಿ ನಡೆಯಿತು.

# ಅನುದಾನಿತ ಶಾಲಾ ನೌಕರರ ವಿವಿಧ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ಮನವಿ

• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ



ಅನುದಾನಿತ ಶಾಲಾ ನೌಕರರ ವಿವಿಧ ಬೇಡಿಕೆಗಳನ್ನು ಇತ್ಯಾರ್ಥಗೊಳಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘದ ಕಾರವಾರ ಶೈಕ್ಷಣಿಕ ಜಿಲ್ಲಾ ಘಟಕದ ವತಿಯಿಂದ ಶನಿವಾರ ಜೈಹಿಂದ್ ಪ್ರೌಢಶಾಲೆಯಿಂದ ಮೆರವಣಿಗೆಯ ಮೂಲಕ ಆಗಮಿಸಿ ತಹಸೀಲ್ದಾರರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

2006 ಎಪ್ರಿಲ್ ನಂತರ ನೇಮಕಾತಿಯಾದ ಅನುದಾನಿತ ಸಾಲ ಶಿಕ್ಷಣ ಸಂಸ್ಥೆಗಳ ನೌಕರಿಗೆ ಪಿಂಚಣಿ ವ್ಯವಸ್ಥೆ ಶೀಘ್ರ ಇತ್ಯಾರ್ಥ ಪಡಿಸಬೇಕು. ಹಾಗೇ ಹಳೆಯ ಪಿಂಚಣಿ ವ್ಯವಸ್ಥೆಯನ್ನು ಪುನಃ ಜಾರಿಗೆ ತರಬೇಕು. 2006 ಎಪ್ರಿಲ್ ಮುಂಚಿತವಾಗಿ ನೇಮಕಗೊಂಡು ತದನಂತರದಲ್ಲಿ ಅನುಮೋದನೆಗೊಂಡ ಶಿಕ್ಷಕರಿಗೆ ಸರಕಾರಿ ನೌಕರರಿಗೆ ನೀಡಿದಂತೆ ಪಿಂಚಣಿ ವ್ಯವಸ್ಥೆ ಜಾರಿಗೊಳಿಸಬೇಕು. ಕಾಲ್ಪನಿಕ ವೇತನ ವರದಿ ಯಥಾವತ್ತಾಗಿ ಜಾರಿಗೊಳಿಸಬೇಕು. ಖಾಲಿಯಾದ ಹುದ್ದೆಯನ್ನು ಹುದ್ದೆ ಖಾಲಿಯಾದ ದಿನಾಂಕದಿಂದಲೇ ಭರ್ತಿ ಮಾಡಿಕೊಳ್ಳುವ ವ್ಯವಸ್ಥೆ ಜಾರಿಗೆ ಬರಬೇಕು. ಪ್ರಸ್ತುತ 2015ರ ನಂತರ ಖಾಲಿಯಾದ ಎಲ್ಲಾ ಹುದ್ದೆಗಳನ್ನು ಭರ್ತಿಮಾಡಿಕೊಳ್ಳಲು ಸರಕಾರವು ಆದೇಶಿಸಬೇಕು.

ಕೆ.ಪಿ.ಎಸ್. ಹಾಗೂ ಪಿ.ಎಂ.ಶ್ರೀ ಶಾಲೆಗಳನ್ನು ಅನುದಾನಿತ ಪ್ರೌಢಶಾಲೆಗಳಿಂದ 3 ಕಿ.ಮೀ. ವ್ಯಾಪ್ತಿಯ ಹೊರಗೆ ಆರಂಭಿಸಬೇಕು. ಸರಕಾರಿ ಶಾಲೆಗಳ ವಿದ್ಯಾರ್ಥಿಗಳಿಗೆ ನೀಡುವ ಎಲ್ಲಾ ಸೌಲಭ್ಯಗಳನ್ನು ಅನುದಾನಿತ ಶಾಲಾ ವಿದ್ಯಾರ್ಥಿಗಳಿಗೆ ಒಂದೇ ಆದೇಶದಲ್ಲಿ ಸಿಗುವಂತೆ ಮಾಡಬೇಕು. ದ್ವಿಭಾಷಾ ಪದ್ದತಿಯನ್ನು ಅನುಸರಿಸುತ್ತಿರುವ ಸರಕಾರಿ ಆದೇಶಗಳ ಪ್ರತಿ ಆದೇಶವು ಅನುದಾನಿತ ಶಾಲೆಗಳಿಗೂ ಅನ್ವಯಿಸುವಂತೆ ಮಾಡಬೇಕು. ಸರಕಾರಿ ಶಾಲೆಯ ಶಿಕ್ಷಕರಿಗೆ ನೀಡುವ ಎಲ್ಲಾ ಸೌಲಭ್ಯಗಳನ್ನು ಒಂದೇ ಆದೇಶದಲ್ಲಿ ಅನುದಾನಿತ ಶಿಕ್ಷಕರಿಗೆ ಸಿಗುವಂತೆ ಮಾಡಬೇಕು. ಬಹಳ ವರ್ಷಗಳಿಂದ ನೇಮಕಾತಿಯಾಗದೇ ಖಾಲಿ ಉಳಿದ ಬೋಧಕೇತರ ಸಿಬ್ಬಂಧಿಗಳ ನೇಮಕ ಕೈಗೊಳ್ಳಬೇಕು ಎಂದು ಅವರು ಸಲ್ಲಿಸಿದ ಮನವಿಯಲ್ಲಿ ತಿಳಿಸಿದ್ದಾರೆ.ನೌಕರರ ಸಂಘದ ಜಿಲ್ಲಾಧ್ಯಕ್ಷ ಪ್ರಭಾಕರ ಬಿ. ಬಂಟ ಮಾತನಾಡಿದರು. ಶಿರಸ್ತೆದಾರ ಗಿರೀಶ ಜಾಂಬಾವಳಿಕರ ಮನವಿ ಸ್ವಿಕರಿಸಿದರು. ಕಾರ್ಯದರ್ಶಿ ಎಲ್. ಎಂ. ಹೆಗಡೆ, ಸಂಘದ ತಾಲೂಕು ಅಧ್ಯಕ್ಷ ಜಿ. ಆರ್. ನಾಯಕ, ಉಪಾಧ್ಯಕ್ಷ ಜಿ.ಆರ್. ತಾಂಡೇಲ್, ಕಾರ್ಯದರ್ಶಿ ಚಂದ್ರಕಾಂತ ಲಮಾಣಿ, ಗೌರವಾಧ್ಯಕ್ಷ ಎನ್.ವಿ. ರಾಠೋಡ, ಪ್ರಮುಖರಾದ ಮನೋಜ ಗುರವ, ಪ್ರಶಾಂತ ನಾಯ್ಕ, ದೀಪಾ ನಾಯಕ, ಅರುಣ ನಾಯ್ಕ, ಮಧುಕೇಶ್ವರ ನಾಯ್ಕ, ಸಚಿನ ನಾಯಕ, ರಾಜೇಶ ಬಾನಾವಳಿಕರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಮನಸ್ಸು ಮತ್ತು ಮನುಷ್ಯರನ್ನು ಪರಿವರ್ತಿಸುವ ಶಕ್ತಿ ಉತ್ತಮ ಪುಸ್ತಕಗಳಿಗಿದೆ: ಪಟ್ಟದ್ದೇವರು



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಉತ್ತಮ ಪುಸ್ತಕಗಳಿಗೆ ಮನಸ್ಸು ಮತ್ತು ಮನುಷ್ಯರನ್ನು ಪರಿವರ್ತಿಸುವ ಅಗಾಧ ಶಕ್ತಿ ಇರುತ್ತದೆ ಎಂದು ಬಸವಕಲ್ಯಾಣ ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷ ಬಸವಲಿಂಗ ಪಟ್ಟದ್ದೇವರು ಹೇಳಿದರು.

ತಾಲ್ಲೂಕಿನ ಕರಡ್ಯಾಳದ ಶ್ರೀ ಚನ್ನಬಸವೇಶ್ವರ ಗುರುಕುಲ ಸಭಾ ಭವನದಲ್ಲಿ ಶನಿವಾರ ಆಲೂರು ವೆಂಕಟರಾವ್ ರಾಷ್ಟ್ರೀಯ ಸ್ಮಾರಕ ಟ್ರಸ್ಟ್ ಧಾರವಾಡ, ಚನ್ನಬಸವೇಶ್ವರ ಗುರುಕುಲ ಕರಡ್ಯಾಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಕರ್ನಾಟಕ ಏಕೀಕರಣ ಹೋರಾಟಗಾರರ ವ್ಯಕ್ತಿಚಿತ್ರ ಮಾಲೆ ಚನ್ನಬಸವ ಪಟ್ಟದ್ದೇವರ ಹಾಗೂ ಪ್ರಭುರಾವ್ ಕಂಬಳಿವಾಲೆ ಅವರ ಪುಸ್ತಕ ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

ಮಹಾತ್ಮರ ಕುರಿತಾದ ಪುಸ್ತಕಗಳಲ್ಲಿ ಅಡಗಿರುವ ಜೀವನ ಸಂದೇಶ, ಅನುಭವ ಓದುಗರ ಜೀವನದಲ್ಲಿ ಬಹುದೊಡ್ಡ ಪರಿವರ್ತನೆ ತರುತ್ತವೆ. ಆ ಮೂಲಕ ಸುಂದರ ಸಮಾಜ ನಿರ್ಮಿಸಲು ಪ್ರೇರಣೆ ನೀಡುತ್ತದೆ ಎಂದು ತಿಳಿಸಿದರು.

ಉತ್ತಮ ಸಾಹಿತ್ಯಕ್ಕೆ ಓದುಗರನ್ನು ತನ್ನತ್ತ ಆಕರ್ಷಿಸುವ ಅದ್ಭುತ ಶಕ್ತಿ ಇರುತ್ತದೆ. ಚನ್ನಬಸವ ಪಟ್ಟದ್ದೇವರ ಹಾಗೂ ಪ್ರಭುರಾವ್ ಕಂಬಳಿವಾಲೆ ಅವರ ಪುಸ್ತಕಗಳು ನಾಡು, ನುಡಿ, ಭಾಷೆ, ಇತಿಹಾಸ ಹಾಗೂ ಆಧ್ಯಾತ್ಮದ ಚಿಂತನೆಗಳನ್ನು ಇಂದಿನ ಪೀಳಿಗೆಗೆ ಪರಿಚಯಿಸುವ ಅತ್ಯಮೂಲ್ಯ ಗ್ರಂಥಗಳಾಗಿವೆ ಎಂದು ಹೇಳಿದರು.

ಆಲೂರು ವೆಂಕಟರಾವ್ ರಾಷ್ಟ್ರೀಯ ಸ್ಮಾರಕ ಟ್ರಸ್ಟ್ ಧಾರವಾಡದ ಅಧ್ಯಕ್ಷ ರಂಜಾನ್ ದುರ್ಗಾ ಮಾತನಾಡಿ, ಚನ್ನಬಸವ ಪಟ್ಟದೇವರು ಗುರುಗಳಲ್ಲಿಯೇ ಶ್ರೇಷ್ಠ, ಮಾದರಿ ಗುರುವಾಗಿದ್ದರು. ಪ್ರಭುರಾವ್ ಕಂಬಳಿವಾಲೆ ಅವರು ಸಾಮಾಜಿಕ ಸೇವೆ ಸಲ್ಲಿಸಿದವರಲ್ಲಿ ಹೆಸರು ವಾಸಿಯಾಗಿದ್ದಾರೆ. ಈ ಇಬ್ಬರು ಮಹನೀಯರ ಪುಸ್ತಕ ಲೋಕಾರ್ಪಣೆ ಆಗುತ್ತಿರುವುದು ತುಂಬಾ ಸಂತೋಷದ ಸಂಗತಿ ಎಂದು ಹೇಳಿದರು.

ನಮ್ಮ ಟ್ರಸ್ಟ್ ವತಿಯಿಂದ ಕರ್ನಾಟಕ ಏಕೀಕರಣಕ್ಕಾಗಿ ದುಡಿದ ಸುಮಾರು 250 ಜನ ಮಹನೀಯರ ವ್ಯಕ್ತಿ ಚಿತ್ರಗಳು ಹೊರ ತರುವ ಯೋಜನೆ ಇದೆ. ಇಂದಿನ ಯುವಜನತೆ ಕರ್ನಾಟಕ ಏಕೀಕರಣ-ಕ್ಕಾಗಿ ಹೋರಾಡಿದ ಮಹನೀಯರ ಕುರಿತು ತಿಳಿದುಕೊಳ್ಳುವುದು ಅತ್ಯವಶ್ಯಕವಾಗಿದೆ ಎಂದು ತಿಳಿಸಿದರು.

ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಶಂಭುಲಿಂಗ ಕಾಮಣ್ಣ ಪುಸ್ತಕಗಳ ಪರಿಚಯ ಮಾಡಿಕೊಟ್ಟರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಸಿದ್ರಾಮ ಶಿಂಧೆ, ಚನ್ನಬಸವ ಪಟ್ಟದ್ದೇವರು ಪುಸ್ತಕ ರಚಿಸಿದ ಸಾಹಿತಿ ಸೋಮನಾಥ ನುಚ್ಚಾ, ಪ್ರಭುರಾವ್ ಕಂಬಳಿವಾಲೆ ಪುಸ್ತಕ ರಚಿಸಿದ ಸಾಹಿತಿ ಜಯಶ್ರೀ ಸುಕಾಲೆ ಮಾತನಾಡಿದರು.

ಪ್ರಾಚಾರ್ಯ ಬಸವರಾಜ ಮೊಳಕೀರೆ ಸ್ವಾಗತಿಸಿದರು. ಲಕ್ಷ್ಮಣ ಮೇತ್ರೆ ನಿರೂಪಿಸಿದರು.

# ಕಮಲನಗರದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣಾ ಜಾಥಾ: ಸಿಇಒ ಡಾ. ಗಿರೀಶ್ ಬದೋಲೆ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ



ಅರ್ಹ ಮತದಾರರನ್ನು ಪ್ರಜಾಪ್ರಭುತ್ವದ ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ಜಿಲ್ಲಾಡಳಿತ ಹಾಗೂ ಸ್ವೀಪ್ ಸಮಿತಿಯ ಜಂಟಿ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ 'ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಹಾಗೂ ಎಸ್ಐಆರ್ ಜಾಗೃತಿ ಜಾಥಾ' ಕಾರ್ಯಕ್ರಮಕ್ಕೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ (ಸಿಇಒ) ಡಾ. ಗಿರೀಶ್ ಬದೋಲೆ ಅವರು ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.ತಾಲೂಕಿನ ಶ್ರೀ ಗುರುಪ್ಪ ಟೊಣ್ಣೆ ಪ್ರಾಥಮಿಕ ಶಾಲೆಯಿಂದ ಪ್ರಾರಂಭವಾದ ಈ ಬೃಹತ್ ಜನಜಾಗೃತಿ ಜಾಥಾವು ನಗರದ ಪ್ರಮುಖ ಬೀದಿ ಹಾಗೂ ಗಲ್ಲಿಗಳಲ್ಲಿ ಸಂಚರಿಸಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿತು. ಬಳಿಕ ತಹಶೀಲ್ದಾರ್ ಕಚೇರಿಯಆವರಣದಲ್ಲಿ ಸಮಾರೋಪಗೊಂಡಿತು. ಶಾಲಾ ವಿದ್ಯಾರ್ಥಿಗಳು ಘೋಷಣೆಗಳು ಹಾಗೂ ವಾದ್ಯವೃಂದದೊಂದಿಗೆ ಸಾಗಿ ಗಮನ ಸೆಳೆದರು.ದೋಷರಹಿತ ಮತದಾರರ ಪಟ್ಟಿಯೇ ಸದೃಢ ಪ್ರಜಾಪ್ರಭುತ್ವದ ತಳಪಾಯ: ಸಿಇಒ

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿ ಮಾತನಾಡಿದ ಜಿಲ್ಲಾ ಪಂಚಾಯತ್ ಸಿಇಒ ಡಾ. ಗಿರೀಶ್ ಬದೋಲೆ ಅವರು ಈ ಕೆಳಗಿನ ಪ್ರಮುಖ ಅಂಶಗಳನ್ನು ಹಂಚಿಕೊಂಡರು:ಮತದಾನದ ಹಕ್ಕು: ಯಾವುದೇ ಒಬ್ಬ ಅರ್ಹ ಮತದಾರನೂ ಕೂಡ ಮತದಾನದ ಹಕ್ಕಿನಿಂದ ವಂಚಿತನಾಗಬಾರದು ಎನ್ನುವುದೇ ಈ ಅಭಿಯಾನದ ಮುಖ್ಯ ಉದ್ದೇಶವಾಗಿದೆ.ಅವಕಾಶಗಳು: 18 ವರ್ಷ ತುಂಬಿದ ಪ್ರತಿಯೊಬ್ಬ ಯುವಕ-ಯುವತಿಯರು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ನೋಂದಾಯಿಸಿಕೊಳ್ಳಬಹುದು. ಜೊತೆಗೆ ವಿಳಾಸ ಬದಲಾವಣೆ ಹಾಗೂ ಇತ್ತೀಚಿನ ಭಾವಚಿತ್ರವನ್ನು ನವೀಕರಿಸಲು ಮುಕ್ತ ಅವಕಾಶವಿದೆ.

ಅಭಿಯಾನದ ಅವಧಿ: ಈ ವಿಶೇಷ ಅಭಿಯಾನವು ಜುಲೈ 29 ರವರೆಗೆ ಚಾಲ್ತಿಯಲ್ಲಿರಲಿದ್ದು, ಸಾರ್ವಜನಿಕರು ಇದರ ಸದ್ಬಳಕೆ ಮಾಡಿಕೊಳ್ಳಬೇಕು.

ಮಾಹಿತಿ ಕೇಂದ್ರಗಳು: ಸಾರ್ವಜನಿಕರ ಅನುಕೂಲಕ್ಕಾಗಿ ವಿಶೇಷವಾಗಿ ಎಲ್ಲಾ ಗ್ರಾಮ ಪಂಚಾಯತಿ ಕೇಂದ್ರಗಳಲ್ಲಿ ಮಾಹಿತಿಕೇಂದ್ರಗಳನ್ನುಸ್ಥಾಪಿಸಲಾಗಿದೆ. ಗ್ರಾಮೀಣ ಭಾಗದ ಜನತೆ ಇದರ ಸದುಪಯೋಗ ಪಡೆದುಕೊಳ್ಳಬೇಕು.

ಸಾರ್ವಜನಿಕರ ಸಹಕಾರ: ಎಸ್ಐಆರ್ ಕಾರ್ಯಕ್ಕೆ ನಿಯೋಜನೆಗೊಂಡಿರುವ ಬಿಎಲ್‌ಒ (ಃಐಔ) ಗಳು ಮನೆ ಮನೆಗೆ ಭೇಟಿ ನೀಡಿದಾಗ ಸಾರ್ವಜನಿಕರು ಸರಿಯಾದ ಮಾಹಿತಿ ನೀಡಿ ಸಹಕರಿಸಬೇಕು ಎಂದು ಕರೆ ನೀಡಿದರು.ಸ್ಥಳದಲ್ಲೇ ಅರ್ಜಿ ಸಲ್ಲಿಕೆಕಾರ್ಯಕ್ರಮದ ಅಂಗವಾಗಿ ಬಿಎಲ್‌ಒ ಸುಶೀಲಾಬಾಯಿ ಅವರು ನಗರದ ನಿವಾಸಿಗಳಾದ ನೀಲಕಂಠ ರೇಖಾ ಮತ್ತು ನಾಗೇಶ್ವರಿ ಅವರ ಮತದಾರರ ಪರೀಕ್ಷರಣೆ ಪಟ್ಟಿಯ ಅರ್ಜಿಯನ್ನು ಸ್ಥಳದಲ್ಲೇ ಭರ್ತಿ ಮಾಡಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸಲ್ಲಿಸಿದರು.ಈ ಸಂದರ್ಭದಲ್ಲಿ ತಹಶೀಲ್ದಾರ್ ಗ್ರೇಡ್-2 ಶ್ರೀ ರಮೇಶ್ ಪೆದ್ದೆ, ವಿವಿಧ ಇಲಾಖೆಯ ಅಧಿಕಾರಿಗಳು, ತಹಶೀಲ್ದಾರ್ ಕಚೇರಿ ಹಾಗೂ ತಾಲ್ಲೂಕು ಪಂಚಾಯತಿ ಸಿಬ್ಬಂದಿಗಳಾದ ಸೋಮಶೇಖರ, ಆದಿತ್ಯ, ಗಣೇಶ, ಮಾರುತಿ, ಅಮರ ಬಿರಾದಾರ, ತಲಹಾ, ಅರ್ಜುನ, ವಿನೋದ, ರಾಘವೇಂದ್ರ ಡೊಳ್ಳೆ, ರಾಘವೇಂದ್ರ ಪಾಟೀಲ, ಆನಂದ, ಅಮರ ಕೋಟೆ, ಸಂಗಮೇಶ, ಸವಿತಾ ನಾಗೇಶ, ಕವಿತಾ, ಪೂಜಾ, ಮಲ್ಲೇಶ ಸೇರಿದಂತೆ ಶಾಲಾ ಶಿಕ್ಷಕರು, ನೂರಾರು ವಿದ್ಯಾರ್ಥಿಗಳು ಹಾಗೂ ಬಿಎಲ್‌ಒಗಳು ಉಪಸ್ಥಿತರಿದ್ದರು.

# ವಿದ್ಯುತ್ ಗುತ್ತಿಗೆದಾರರ ಸಂಘಕ್ಕೆ ಆಯ್ಕೆ




• ಮಲ್ಲಮ್ಮ ನುಡಿ ವಾರ್ತೆ ಇಂಡಿ

ಕರ್ನಾಟಕ ರಾಜ್ಯ ಅನುಮತಿ ಪಡೆದ ವಿದ್ಯುತ್ ಗುತ್ತಿಗೆದಾರರ ಸಂಘ ತಾಲೂಕ ಸಮಿತಿ ಇಂಡಿ ಘಟಕಕ್ಕೆ ಪದಾಧಿಕಾರಿಗಳು ಅವಿರೋಧವಾಗಿ ಆಯ್ಕೆಮಾಡಲಾಯಿತು. ಅಧ್ಯಕ್ಷರಾಗಿ ಶಂಕರ್ ಲಾಳಸಂಗಿ, ಗೌರವಾಧ್ಯಕ್ಷರಾಗಿ ಬಿರೇಶ ನಿಂಬಾಳ, ಉಪಾಧ್ಯಕ್ಷರಾಗಿ ಗಂಗಾಧರ್ ನಿಂಬಾಳ ಹಾಗೂ ಉಮೇಶ್ ಕೊಂಕಣಗಾಂವ್, ಕಾರ್ಯದರ್ಶಿಯಾಗಿ ಸಂತೋಷ ಪೂಜಾರಿ, ಸಹ ಕಾರ್ಯದರ್ಶಿಯಾಗಿ ಮಾದೇವ ಅಂಗಡಿ, ಖಜಾಂಚಿಯಾಗಿ ಶ್ರೀಕಾಂತ ಗಲಗಲಿ, ಸಂಘಟನಾ ಕಾರ್ಯದರ್ಶಿಯಾಗಿ ಚಿನ್ನಪ್ಪ ಮಸಳಿ, ಸಾಮಾಜಿಕ ಜಾಲತಾಣ ಅಧ್ಯಕ್ಷರಾಗಿ ರವಿ ಕಾಳೆ, ಕಾನೂನು ಸಲಹೆಗಾರರಾಗಿ ಬಸವರಾಜ ದೇವರ, ಸಲಹಾ ಸಮೀತಿ ಸದಸ್ಯರಾಗಿ ಸುರೇಶ ಕಾಂಬಳೆ ಅವರನ್ನು ತಾಲೂಕಿನ ಎಲ್ಲಾ ಸರ್ವ ಸದಸ್ಯರು ಸೇರಿ ಒಮ್ಮತದಿಂದ ಆಯ್ಕೆಮಾಡಲಾಯಿತು.

# ಛಂದೋಬದ್ಧ ಸಾಹಿತ್ಯ ಉಳಿಯಬೇಕು: ವೆಂಕನಗೌಡ ಪಾಟೀಲ

• ಮಲ್ಲಮ್ಮ ನುಡಿ ವಾರ್ತೆ ಹುಣಸಗಿ



ಜು.4: ಕನ್ನಡ ಸಾಹಿತ್ಯದಲ್ಲಿ ಛಂದೋಬದ್ಧ ಕಾವ್ಯ ಪರಂಪರೆ ನಿಧಾನವಾಗಿ ಕಣ್ಮರೆಯಾಗುತ್ತಿರುವುದು ಬೇಸರದ ಸಂಗತಿ ಎಂದು ರಾಜನಕೋಳೂರಿನ ಹಿರಿಯ ವೆಂಕನಗೌಡ ಪಾಟೀಲ ಹೇಳಿದರು.ಪಟ್ಟಣದ ಶಾಖಾ ಗ್ರಂಥಾಲಯದಲ್ಲಿ ವಿಕ್ರಮಪುರ ಓದುಗರ ಬಳಗ ಆಯೋಜಿಸಿದ್ದ ದಿವಂಗತ ಬಿ.ಎಂ. ಪಾಟೀಲ ಅವರ ಕೃತಿಗಳ ಪರಿಚಯ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.ಶಿವರಾಜ ಬಿರಾದಾರ ಮಾತನಾಡಿ, ಬಿ.ಎಂ. ಪಾಟೀಲ ಅವರು ಭಗವದ್ಗೀತೆಯನ್ನು ಷಟ್ಪದಿಗಳಲ್ಲಿ ರಚಿಸಿದ್ದು, ಎಂಟು ಕೃತಿಗಳನ್ನು ಸಾಹಿತ್ಯ ಲೋಕಕ್ಕೆ ನೀಡಿದ್ದಾರೆ. ಅವರು ಸ್ಥಾಪಿಸಿದ್ದ ಸತ್ ಚಿಂತನಾಲಯ ಇಂದಿಗೂ ಆಧ್ಯಾತ್ಮಿಕ ಚಿಂತನೆಗೆ ಪ್ರೇರಣೆಯಾಗಿದೆ ಎಂದು ಹೇಳಿದರು.ವಿಕ್ರಮಪುರ ಓದುಗರ ಬಳಗದ ಸಂಚಾಲಕ ಮಹೇಶ್ ಸ್ಥಾವರಮಠ ಮಾತನಾಡಿ, ಅಲಕ್ಷಿತ ಸಾಹಿತಿಗಳ ಸಾಹಿತ್ಯವನ್ನು ಓದುಗರಿಗೆ ಪರಿಚಯಿಸುವ ಉದ್ದೇಶದಿಂದ ಪ್ರತಿ ತಿಂಗಳು ಸಾಹಿತ್ಯ ಪರಿಚಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದರು.ಸಹಾಯಕ ಗ್ರಂಥಪಾಲಕ ಬಸನಗೌಡ ಪಾಟೀಲ ಮಾತನಾಡಿ, ಇಂತಹ ಸಾಹಿತ್ಯಿಕ ಕಾರ್ಯಕ್ರಮಗಳಿಗೆ ಗ್ರಂಥಾಲಯ ಇಲಾಖೆ ಸದಾ ಸಹಕಾರ ನೀಡಲಿದೆ ಎಂದು ಹೇಳಿದರು.ಈ ಸಂದರ್ಭದಲ್ಲಿ ಸಂಗಮ್ಮ ಸಜ್ಜನ್ ಅವರು ಚಿ.ಸಿ. ನಿಂಗಣ್ಣ ಅವರ ಜಾನಪದ ಸಾಹಿತ್ಯ ಸಂಗಾತಿ ಕೃತಿಯನ್ನು ಪರಿಚಯಿಸಿದರು. ವಿದ್ಯಾಕುಮಾರ ಬಡಿಗೇರ ಅವರ ನಾಟಕಗಳ ಬಾನುಲಿ ಪ್ರಸಾರದ ಧ್ವನಿಮುದ್ರಣವನ್ನು ಕೇಳಿಸಲಾಯಿತು. ಅಕ್ಕಮಹಾದೇವಿ ದೇಶಮುಖ ಪ್ರಾರ್ಥಿಸಿದರು. ದೇವರಾಜ ಕುಲಕರ್ಣಿ ಬಲಶೆಟ್ಟಿಹಾಳ ಕಾರ್ಯಕ್ರಮ ನಿರೂಪಿಸಿದರು.

## ಹೆಚ್ಚು ಸಹಕಾರ ಸಂಘಗಳಿಂದಲೇ ಡಿಸಿಸಿ ಬ್ಯಾಂಕ್ ಸ್ಥಾಪನೆ ಸಾಧ್ಯ: ಬಸವರಾಜ

• ಮಲ್ಲಮ್ಮ ನುಡಿ ವಾರ್ತೆ ಹುಣಸಗಿ

ಜು.4: ಸಹಕಾರ ಭಾರತಿ ಯಾದಗಿರಿ ಜಿಲ್ಲಾ ಹಾಗೂ ಹುಣಸಗಿ ತಾಲೂಕು ಘಟಕದ ವತಿಯಿಂದ ಪಟ್ಟಣದ ಮಂಕರಂದ ಹೋಟೆಲ್‌ನಲ್ಲಿ ಅಂತರರಾಷ್ಟ್ರೀಯ ಸಹಕಾರ ದಿನ ಹಾಗೂ ಪತ್ರಿಕಾ ದಿನವನ್ನು ಆಚರಿಸಲಾಯಿತು.

ಭಾರತಮಾತೆ ಹಾಗೂ ಮಾನನೀಯ ಲಕ್ಷ್ಮಣರಾವ್ ಇನಾಮದಾರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಸಹಕಾರ ಭಾರತಿ ಜಿಲ್ಲಾ ಅಧ್ಯಕ್ಷ ಬಸವರಾಜ ಮೇಲಿನ ಮಾತನಾಡಿ, ಅಂತರರಾಷ್ಟ್ರೀಯ ಸಹಕಾರ ದಿನವು ಸಹಕಾರ ಚಳವಳಿಯ ಮೌಲ್ಯಗಳು, ಆರ್ಥಿಕ ಸಮಾನತೆ ಮತ್ತು ಸಾಮಾಜಿಕ ಅಭಿವೃದ್ಧಿಯ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶ ಹೊಂದಿದೆ. ಯಾದಗಿರಿ ಜಿಲ್ಲೆಯ ಪ್ರತಿಯೊಂದು ತಾಲೂಕಿನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಹಕಾರ ಸಂಘಗಳು ಹಾಗೂ ಕೃಷಿ ಪತ್ತಿನ ಸಹಕಾರ ಸಂಘಗಳು ಸ್ಥಾಪನೆಯಾದರೆ ಮಾತ್ರ ಜಿಲ್ಲೆಗೆ ಡಿಸಿಸಿ ಬ್ಯಾಂಕ್ ಮಂಜೂರಾಗಲು ಸಾಧ್ಯವಾಗುತ್ತದೆ. ಪತ್ರಿಕಾರಂಗ ಮತ್ತು ಸಹಕಾರ ರಂಗ ಒಗ್ಗೂಡಿ ಸಮಾಜದ ಅಭಿವೃದ್ಧಿಗೆ ಕೆಲಸ ಮಾಡಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ಬಸವರಾಜ ಸಜ್ಜನ ಮಾತನಾಡಿ, ಸಹಕಾರ ಭಾರತಿ ಸಂಘದ ಬೆಳವಣಿಗೆಯಲ್ಲಿ ಬಸವರಾಜ ಮೇಲಿನ ಅವರ ಶ್ರಮ ಮತ್ತು ಸೇವೆ ಅಪಾರವಾಗಿದೆ ಎಂದು ಪ್ರಶಂಸಿಸಿದರು. ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ನಾಮನಿರ್ದೇಶಿತ ಕಾರ್ಯದರ್ಶಿ ವೆಂಕಟಗಿರಿ ದೇಶಪಾಂಡೆ ಮಾತನಾಡಿ, ಪತ್ರಕರ್ತರು ಸಮಾಜದ ಮೌಲ್ಯಗಳನ್ನು ಕಾಪಾಡುತ್ತಾ ಸತ್ಯ ಮತ್ತು ನಿಷ್ಪಕ್ಷಪಾತ ಸುದ್ದಿಗಳನ್ನು ಜನರಿಗೆ ತಲುಪಿಸುವ ಜವಾಬ್ದಾರಿಯನ್ನು ನಿಷ್ಠೆಯಿಂದ ನಿರ್ವಹಿಸಬೇಕು ಎಂದು ಹೇಳಿದರು.




ನಾಗರಾಜ ಬಿರಾದಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ಅರ್ಪಿತಾ ವೈಲಿ ಸ್ವಾಗತಿಸಿದರು. ಧನ್ಯಶ್ರೀ ಮುರಾಳ ಪ್ರಾರ್ಥಿಸಿದರು. ಮಹಾಂತೇಶ ಮುರಾಳ ನಿರೂಪಿಸಿದರು. ಪ್ರಭು ನೂಲಿನ್ ವಂದನಾರ್ಪಣೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಪತ್ರಕರ್ತರಾದ ವೆಂಕಟಗಿರಿ ದೇಶಪಾಂಡೆ, ಹುಣಸಗಿ ತಾಲೂಕು ಪತ್ರಕರ್ತರ ಸಂಘದ ನೂತನ ಅಧ್ಯಕ್ಷ ಬಾಲಪ್ಪ ಕುಪ್ಪಿ, ಪ್ರಧಾನ ಕಾರ್ಯದರ್ಶಿ ಶಾಂತಿನಾಥ ವನಕುದರಿ, ಜಿಲ್ಲಾ ಸದಸ್ಯ ಗವಿಸಿದ್ದೇಶ ಹೊಗರಿ, ಪತ್ರಕರ್ತೆ ರೇಣುಕಾ ಫೌಜದಾರ್ ಹಾಗೂ ಅಹಿಂದ್ ತಾಲೂಕು ಅಧ್ಯಕ್ಷೆ ಶ್ರೀದೇವಿ ಮೇಟಿ ಅವರನ್ನು ಸಹಕಾರ ಭಾರತಿ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಹುಣಸಗಿ ತಾಲೂಕು ಮಾಧ್ಯಮ ಮಿತ್ರರು, ಪ್ರಧಾನ ಕಾರ್ಯದರ್ಶಿ ಅಮರೇಶ ವೈಲಿ, ಜಿಲ್ಲಾ ಮಹಿಳಾ ಪ್ರಮುಖೆ ವಿಜಯಲಕ್ಷ್ಮಿ ಪಿ. ದೇಸಾಯಿ, ತಾಲೂಕು ಅಧ್ಯಕ್ಷೆ ಲಲಿತಾ ವೈಲಿ, ಶಹಾಪುರ ತಾಲೂಕು ಅಧ್ಯಕ್ಷ ದೇವಿಂದ್ರಪ್ಪ ವಿಶ್ವಕರ್ಮ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಮುಂಗಾರು ಬೆಳೆ ವಿಮೆ ನೋಂದಾಯಿಸಲು ರೈತರಿಗೆ ಕೃಷಿ ಇಲಾಖೆ ಸೂಚನೆ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

2026–27 ನೇ ಸಾಲಿನ ಮುಂಗಾರು ಹಂಗಾಮಿನ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನಯಡಿಯಲ್ಲಿ ಬೆಳೆ ವಿಮೆಗೆ ನೋಂದಾಯಿಸಲು ಕೃಷಿ ಅಧಿಕಾರಿ ರೈತ ಸಂಪರ್ಕ ಕೇಂದ್ರ ಇರಕಲ್ಗಡ ಇವರು ರೈತರಿಗೆ ಸೂಚಿಸಿದ್ದಾರೆ. ಹತ್ತಿ(ನೀರಾವರಿ), ಹೆಸರು (ಮಳೆಆಶ್ರಿತ) ಬೆಳೆಗಳಿಗೆ ಜುಲೈ 15 ಬುಧವಾರ ಕೊನೆ ದಿನಾಂಕವಾಗಿರುತ್ತದೆ. ಇತರೆ ಪ್ರಮುಖ ಬೆಳೆಗಳಾದ ತೊಗರಿ(ಮ.ಆ.), ಮೆಕ್ಕೆಜೋಳ (ಮ.ಆ. & ನೀರಾವರಿ), ಸಜ್ಜೆ(ಮ.ಆ. & ನೀರಾವರಿ), ಸೂರ್ಯಕಾಂತಿ(ನೀರಾವರಿ) ಹಾಗೂ ಇತರೆ ಬೆಳೆಗಳಿಗೆ ಜುಲೈ 31 ಕೊನೆಯ ದಿನವಾಗಿದೆ. ಈ ಯೋಜನೆಯನ್ನು ವಿಮಾ ಕಂಪನಿ IFFCO Tokio General Insurance company LTD. ಸಂಸ್ಥೆಯ ಮೂಲಕ ಜಾರಿಗೊಳಿಸಲಾಗುತ್ತಿದ್ದು. ಇರಕಲ್ಗಡ ಹೋಬಳಿಯ ರೈತರು ವಿವಿಧಬೆಳೆಗಳಿಗೆ ವಿಮೆ ಮಾಡಿಸಿಕೊಳ್ಳಬಹುದು.

ರೈತರು ಸಮೀಪದ ಸೇವಾ ಕೇಂದ್ರ, ಗ್ರಾಮ ಒನ್, ಕರ್ನಾಟಕ ಒನ್, ಅಥವಾ ಬ್ಯಾಂಕ ಮುಖಾಂತರ ಬೆಳೆ ವಿಮೆ ನೋಂದಾಣಿ ಮಾಡಿಸಿಕೊಳ್ಳಬಹುದು ಹೆಚ್ಚಿನ ಮಾಹಿತಿಗೆ 18001035490 ಸಂಪರ್ಕಿಸಬಹುದು ಎಂದು ಕೃಷಿ ಅಧಿಕಾರಿ ಯೋಗೇಶ್ ಕಾಟ್ರಳ್ಳಿ ತಿಳಿಸಿದ್ದಾರೆ.

## ಬರ ಮುನ್ಸೂಚನೆ; ಯಲಬುರ್ಗಾ, ಕುಕನೂರು ತಾಲೂಕಿನಲ್ಲಿ ಕ್ರೀಯಾಯೋಜನೆ ರೂಪಿಸಲು ಶಾಸಕರ ಸೂಚನೆ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಯಲಬುರ್ಗಾ ಮತ್ತು ಕುಕನೂರು ತಾಲ್ಲೂಕುಗಳಲ್ಲಿ ಮುಂಬರುವ ಮೂರು ತಿಂಗಳ ವರೆಗೆ ಕುಡಿಯುವ ನೀರಿನ ಪೂರೈಕೆ, ಬೆಳೆ ವಿಮಾ ನೋಂದಣಿ, ಬಿತ್ತನೆಗೆ ರಸಗೊಬ್ಬರದ ಲಭ್ಯತೆ ಸೇರಿದಂತೆ ಬರ ನಿರ್ವಹಣೆಗೆ ಅಗತ್ಯ ಕ್ರೀಯಾಯೋಜನೆ ರೂಪಿಸಬೇಕು ಎಂದು ಯಲಬುರ್ಗಾ ಕ್ಷೇತ್ರದ ಶಾಸಕರಾದ ಬಸವರಾಜ ರಾಯರೆಡ್ಡಿ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಯಲಬುರ್ಗಾ ಮತ್ತು ಕುಕನೂರು ತಾಲ್ಲೂಕುಗಳಲ್ಲಿ ಪ್ರಕೃತಿ ವಿಕೋಪದ ನಿರ್ವಹಣೆಯ ಬಗ್ಗೆ ಕೊಪ್ಪಳ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಶುಕ್ರವಾರ (ಜು. 3ರಂದು) ಯಲಬುರ್ಗಾ ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.

ಪ್ರಸ್ತುತ ಮಳೆಯ ಕೊರತೆಯಿಂದಾಗಿ ಯಲಬುರ್ಗಾ ಮತ್ತು ಕುಕನೂರು ತಾಲ್ಲೂಕುಗಳಲ್ಲಿ ಬೆಳೆ ಹಾನಿ ಎಷ್ಟಾಗಬಹುದು ಎಂಬ ವಿವರವನ್ನು ಹೆಕ್ಟರ್ ವಾರು ಸಂಗ್ರಹಿಸಿ, ಆ ಬೆಳೆ ನಷ್ಟಕ್ಕೆ ಎಷ್ಟು ಕೋಟಿ ರೂಪಾಯಿ ಪರಿಹಾರವನ್ನು ಒದಗಿಸಬೇಕಾಗುತ್ತದೆ. ಇದಕ್ಕೆ ಇನ್ಸೂರೆಸ್ ಎಷ್ಟು ಪಾವತಿಯಾಗಬಹುದು ಎಂಬ ಬೇರೆ ಬೇರೆ ವಿಷಯಗಳನ್ನು ಕ್ರೀಯಾ ಯೋಜನೆಯಲ್ಲಿ ಸೇರಿಸಿ ಸಲ್ಲಿಸಬೇಕೆಂದರು.

ಡಿಬಿಓಟಿ ಯೋಜನೆಗೆ ಸಂಬಂಧಿಸಿದಂತೆ ಮೇಲ್ಮಟ್ಟದ ಜಲಾಗಾರಗಳಲ್ಲಿ ನೀರಿರುತ್ತದೆ. ಆ ನೀರು ಪೈಪ್‌ಲೈನ್ ಮೂಲಕ ಹಳ್ಳಿಗಳಿಗೆ ಸರಿಯಾಗಿ ತಲುಪುತ್ತಿಲ್ಲ. ಇದ್ದ–ಕ್ಕೆ ಕಾರಣ ಜೆಜೆಎಂ ಕಾಮಗಾರಿಗಳು ಸರಿಯಾದ ರೀತಿಯಲ್ಲಿ ಕೈಗೊಳ್ಳದಿರುವುದಾಗಿದೆ. ಹಾಗಾಗಿ ಯಾವ ಯಾವ ಪ್ರದೇಶಗಳಲ್ಲಿ ಜೆಜೆಎಂ ಕಾಮಗಾರಿಗಳು ಕಳಪೆಯಾಗಿವೆ. ಅವುಗಳನ್ನು ಗುರುತಿಸಿ, ಕುಡಿಯುವ ನೀರಿನ ಪೈಪ್‌ಲೈನ್ ಸರಿಪಡಿಸಿ, ಎಲ್ಲಾ ಹಳ್ಳಿಗಳಿಗೆ ಕುಡಿಯುವ ನೀರು ಪೂರೈಸುವ ವ್ಯವಸ್ಥೆಯನ್ನು ಮಾಡಬೇಕು. ಸಾರ್ವಜನಿಕರಿಂದ ಯಾವುದೇ ರೀತಿಯ ದೂರುಗಳ ಬಾರದಂತೆ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ಕೊಪ್ಪಳ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ, ಜಿಲ್ಲಾ ಪಂಚಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವರ್ಣಿತ್ ನೇಗಿ, ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ, ಕೊಪ್ಪಳ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಮಂಜುನಾಥ ಗುಂಡೂರು ಸೇರಿದಂತೆ ಯಲಬುರ್ಗಾ ಮತ್ತು ಕುಕನೂರು ತಾಲ್ಲೂಕಿಗಳ ತಹಶೀಲ್ದಾರರು, ತಾ.ಪಂ ಇಓ.ಗಳು, ಪ.ಪಂ ಮುಖ್ಯಾಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಅಧಿಕಾರಿಗಳು, ಇಂಜಿನಿಯರ್‌ಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

## 445 ಎಕರೆ ಸರ್ಕಾರಿ ಅರಣ್ಯ ಭೂಮಿಯಲ್ಲಿ ವ್ಯಾಪಕ ಅಕ್ರಮ ಮರಳು ಲೂಟಿ: ಅರಣ್ಯ ಇಲಾಖೆ ಅಧಿಕಾರಿಗಳ ಮೌನ






• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ

ತಾಲ್ಲೂಕಿನ ಗುರುಗುಂಟಾ ಹೋಬಳಿಗೆ ಒಳಪಡುವ ಶೀಲಹಳ್ಳಿ ಗ್ರಾಮದ ಸರ್ವೆ ನಂ. 29 ರಲ್ಲಿನ ಸುಮಾರು 445 ಎಕರೆ 29 ಗುಂಟೆ ವಿಸ್ತೀರ್ಣದ ಸರ್ಕಾರಿ ಅರಣ್ಯ ಜಮೀನಿನಲ್ಲಿ ಜೆಸಿಬಿ ಹಾಗೂ ಟ್ರ್ಯಾಕ್ಟರ್‌ಗಳ ಮೂಲಕ ಹಗಲು–ರಾತ್ರಿ ಎನ್ನದೆ ಕಾನೂನು ಬಾಹಿರವಾಗಿ ಅಕ್ರಮ ಮರಳು ಸಾಗಾಣಿಕೆ ನಡೆದಿದ್ದು, ಇದನ್ನು ತಡೆಯಲು ವಿಫಲವಾಗಿರುವ ಅಧಿಕಾರಿಗಳ ನಡೆ ಖಂಡನೀಯ ಎಂದು ಭಾರತೀಯ ಪ್ರಜಾ ಸಂಘ ಪದಾಧಿಕಾರಿಗಳು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ಕುರಿತು ತಪ್ಪಿತಸ್ಥರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಸಂಘಟನೆಯ ತಾಲ್ಲೂಕ ಸಮಿತಿಯು ಅರಣ್ಯ ಇಲಾಖೆಗೆ ಲಿಖಿತ ದೂರನ್ನು ಸಲ್ಲಿಸಿದೆ.

ಪ್ರಕರಣದ ಹಿನ್ನೆಲೆ: ಕಳೆದ ಏಪ್ರಿಲ್ 22, 2026 ರಂದು ಶೀಲಹಳ್ಳಿ ಗ್ರಾಮಸ್ಥರು ಹಾಗೂ ಸಂಘಟನೆಯ ಪದಾಧಿಕಾರಿ ಗಳು ಸ್ಥಳದಲ್ಲಿ ನಡೆಯುತ್ತಿದ್ದ ಅಕ್ರಮ ಮರಳು ಸಾಗಾಣಿಕೆ ಕುರಿತು ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಖುದ್ದಾಗಿ ಮಾಹಿತಿ ನೀಡಿದ್ದರು. ಮಾಹಿತಿ ಮೇರೆಗೆ ಸ್ಥಳಕ್ಕೆ ಭೇಟಿ ನೀಡಿದ್ದ ಮೂವರು ಇಲಾಖಾ ಸಿಬ್ಬಂದಿಗಳು ಅಕ್ರಮವಾಗಿ ಮರಳು ತುಂಬುತ್ತಿದ್ದ ಟ್ರ್ಯಾಕ್ಟರ್ ಅನ್ನು ವಶಪಡಿಸಿಕೊಳ್ಳುವ ಬದಲಾಗಿ, ದಂಧೆಕೋರರೊಂದಿಗೆ ಒಳಒಪ್ಪಂದ ಮಾಡಿಕೊಂಡು ಯಾವುದೇ ಪ್ರಕರಣ ದಾಖಲಿಸದೆ ಹಾಗೇ ಬಿಟ್ಟು ಕಳುಹಿಸಿದ್ದಾರೆ ಎಂದು ಸಂಘಟನೆ ಗಂಭೀರವಾಗಿ ಆರೋಪಿಸಿದೆ. ಅಧಿಕಾರಿಗಳ ಬೇಜವಾಬ್ದಾರಿತನ: ಸರ್ಕಾರಿ ಸ್ವತ್ತನ್ನು ರಕ್ಷಿಸಬೇಕಾದ ಅಧಿಕಾರಿಗಳೇ ಈ ರೀತಿ ಬೇಜವಾಬ್ದಾರಿಯಿಂದ ವರ್ತಿಸುತ್ತಿರುವುದು ಇಲಾಖೆಯ ಕರ್ತವ್ಯಲೋಪವನ್ನು ಎತ್ತಿ ತೋರಿಸುತ್ತದೆ. ತಾಲೂಕು ಕಚೇರಿಗೆ ಈ ಬಗ್ಗೆ ಪ್ರಶ್ನಿಸಲು ಹೋದಾಗ ಅಧಿಕಾರಿಗಳು ಸಮರ್ಪಕ ಉತ್ತರ ನೀಡದೆ ದರ್ಪ ತೋರಿದ್ದಾರೆ ಎಂದು ಪದಾಧಿಕಾರಿಗಳು ಆಕ್ರೋಶ ಹೊರಹಾಕಿದ್ದಾರೆ.

ಪರಿಸರ ನಾಶಕ್ಕೆ ಮೌನ ಸಮ್ಮತಿ: ಅಮೂಲ್ಯವಾದ ಅರಣ್ಯ ಸಂಪತ್ತು ಮತ್ತು ಖನಿಜ ಸಂಪತ್ತನ್ನು ಲೂಟಿ ಮಾಡುತ್ತಿರುವ ಮಾಫಿಯಾ ವಿರುದ್ಧ ಯಾವುದೇ ಕ್ರಮ ಕೈಗೊಳ್ಳದಿರುವುದು ಇಲಾಖೆಯ ಮೌನ ಸಮ್ಮತಿಯನ್ನು ಸಾಬೀತುಪಡಿಸುತ್ತದೆ. ದೂರು ಸಲ್ಲಿಸಿ ತಿಂಗಳುಗಳೇ ಕಳೆದರು ಯಾವುದೇ ಕ್ರಮ ಮಾಡದೇ ವಿಳಂಬ ಮಾಡುತ್ತಿದ್ದಾರೆ. ಅಕ್ರಮ ಮರಳು ಸಾಗಾಣಿಕೆಗೆ ಬಳಸಿರುವ ಜೆಸಿಬಿ ಹಾಗೂ ಟ್ರ್ಯಾಕ್ಟರ್ ಮಾಲೀಕರನ್ನು ತಕ್ಷಣವೇ ಪತ್ತೆ ಹಚ್ಚಿ ಅವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಬೇಕು. ಕರ್ತವ್ಯ ಲೋಪ ಎಸಗಿ, ದಂಧೆಕೋರರನ್ನು ರಕ್ಷಿಸಿದ ಹಾಗೂ ಫೋನ್ ಕರೆಗಳಿಗೆ ಸ್ಪಂದಿಸದೆ ಉಡಾಫೆ ಉತ್ತರ ನೀಡುವ ಅರಣ್ಯ ಇಲಾಖೆಯ ಸಿಬ್ಬಂದಿಗಳ ವಿರುದ್ಧ ಇಲಾಖಾ ಮಟ್ಟದ ಶಿಸ್ತುಕ್ರಮ ಜರುಗಿಸಬೇಕುಎಂದು ಸಂಘಟನೆಯ ಪ್ರಮುಖ ಬೇಡಿಕೆಯಾಗಿದೆ. ಈ ವಿಷಯವನ್ನು ಸಂಬಂಧ ಪಟ್ಟ ಮೇಲಾಧಿಕಾರಿಗಳು ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಗಮನಕ್ಕೂ ತರಲಾಗಿದ್ದು, ತಕ್ಷಣವೇ ಸೂಕ್ತ ಕಾನೂನು ಕ್ರಮ ಜರುಗಿಸದಿದ್ದರೆ ಸಂಘಟನೆಯ ವತಿಯಿಂದ ಉಗ್ರ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಭಾರತೀಯ ಪ್ರಜಾ ಸಂಘದ ಜಿಲ್ಲಾಧ್ಯಕ್ಷ ಹೊಳಿಯಪ್ಪ ಕುಣೆಕೆಲ್ಲೂರು, ತಾಲೂಕ ಅಧ್ಯಕ್ಷ ಮೌನೇಶ ಹೊನ್ನಳ್ಳಿ, ಅಶೋಕ, ಆಂಜನೇಯ, ದಯಾನಂದ, ದೇವರೆಡ್ಡಿ, ಭೀಮಣ್ಣ, ಬಸವರಾಜ ಶೀಲಹಳ್ಳಿ ಸೇರಿದಂತೆ ಸಂಘಟನೆ ಪ್ರಮುಖರು ಎಚ್ಚರಿಸಿದ್ದಾರೆ.

## ಬರ ಎದುರಿಸಲು ಸಿದ್ಧರಾಗುವಂತೆ ಅಧಿಕಾರಿಗಳಿಗೆ ಸಚಿವ ಡಾ.ಪಾಟೀಲ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಮುಂಗಾರು ಋತುವಿನಲ್ಲಿ ಮಳೆಯ ಕೊರತೆಯ ಮುನ್ಸೂಚನೆ ಕಾಣುತ್ತಿದ್ದು, ಪರಿಸ್ಥಿತಿಯನ್ನು ಎದುರಿಸಲು ಅಧಿಕಾರಿಗಳು ಈಗಿನಿಂದಲೇ ಸಿದ್ಧರಾಗಬೇಕು. ಜನತೆಗೆ ಕುಡಿಯುವ ನೀರು ಒದಗಿಸಲು ಹಾಗೂ ಜನತೆಗೆ ಉದ್ಯೋಗ ಒದಗಿಸುವ ಕ್ರಿಯಾಯೋಜನೆಗಳನ್ನು ಸಿದ್ಧಪಡಿಸಬೇಕು ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವರು ಹಾಗೂ ಕೊಪ್ಪಳ ಜಿಲ್ಲೆಯ ಪ್ರಕೃತಿ ವಿಕೋಪ ನಿರ್ವಹಣೆಯ ಮೇಲುಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ ಆರ್.ಪಾಟೀಲ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಕೊಪ್ಪಳ ಜಿಲ್ಲೆಯ ಪ್ರಕೃತಿ ವಿಕೋಪ ನಿರ್ವಹಣೆಯ ಮೇಲುಸ್ತುವಾರಿ ಸಚಿವರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಳೆ ಕೊರತೆಯಿಂದ ಕೃಷಿ ಚಟುವಟಿಕೆ ಕಡಿಮೆಯಾದಲ್ಲಿ ಸರ್ಕಾರದಿಂದ ಮಾನವ ದಿನಗಳನ್ನು ಸೃಜಿಸುವುದು ಅನಿವಾರ್ಯವಾಗಲಿದೆ. ಆದ್ದರಿಂದ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಅಗತ್ಯವಿರುವ ಕಾಮಗಾರಿಗಳ ಬಗ್ಗೆ ವಿಬಿ ಜಿ ರಾಮ್ ಜಿ ಯೋಜನೆಯಡಿ ಮಾನವ ದಿನಗಳನ್ನು ಸೃಜಿಸಲು ಕ್ರಿಯಾ ಯೋಜನೆ ರೂಪಿಸಬೇಕು. ಜಾಬ್ ಕಾರ್ಡ್ ವಿತರಣೆಗೆ ಕ್ರಮ ವಹಿಸಬೇಕು. ಬೆಳೆ ವಿಮಾ ಯೋಜನೆಗೆ ಜಿಲ್ಲೆಯ ಎಲ್ಲ ಅರ್ಹ ರೈತರು ನೋಂದಣಿ ಮಾಡಿಕೊಳ್ಳುವಂತೆ ಕೃಷಿ ಇಲಾಖೆಯ ಅಧಿಕಾರಿಗಳು ಜಾಗೃತಿ ಮೂಡಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮುಂಗಾರು ಆರಂಭಗೊಂಡು ತಿಂಗಳುಗಳು ಕಳೆದರೂ ವಾಡಿಕೆಯಂತೆ ಮಳೆಯಾಗಿಲ್ಲ. ಇದರಿಂದ ರೈತರಿಗೆ ಬಿತ್ತನೆಗೆ ಅಡಚಣೆ ಉಂಟಾಗಿರುವುದು ಮಾತ್ರವಲ್ಲ ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣಿಸುವ ಸಾಧ್ಯತೆ ಇದೆ. ಆದ್ದರಿಂದ ಸರ್ಕಾರದ ಅನುದಾನ ಬಳಸಿಕೊಂಡು ಅಗತ್ಯವಿರುವೆಡೆ ಆದ್ಯತೆ ಮೇರೆಗೆ ಕುಡಿಯುವ ನೀರು ಪೂರೈಕೆ ಮಾಡಿ, ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆ ಪಡೆಯುವುದು, ಟ್ಯಾಂಕರ್‌ಗಳ ಮೂಲಕ ನೀರು ಪೂರೈಸುವುದು ಅಥವಾ ಅನಿವಾರ್ಯ ಪರಿಸ್ಥಿತಿಗಳಲ್ಲಿ ಹೊಸ ಬೋರ್‌ವೆಲ್ ಕೊರೆಸುವುದು ಮುಂತಾದ ಪರಿಹಾರೋಪಾಯಗಳನ್ನು ಆದ್ಯತೆ ಮೇರೆಗೆ ನಿರ್ವಹಿಸಿ ಎಂದು ಅವರು ಹೇಳಿದರು.

ರೈತರ ಬೇಡಿಕೆಯನುಸಾರ ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳ ಅಗತ್ಯ ದಾಸ್ತಾನು ಸಂಗ್ರಹಿಸಿ. ಹಾಗೆಯೇ ಖಾಸಗಿ ಮಾರಾಟ ಮಳಿಗೆಗಳಲ್ಲಿ ಬಿತ್ತನೆ ಬೀಜ ಅಥವಾ ರಸಗೊಬ್ಬರವನ್ನು ನಿಯಮಾನುಸಾರ ವಿತರಣೆ ಮಾಡಬೇಕು. ಹೆಚ್ಚಿನ ದರಕ್ಕೆ ಮಾರಾಟ ಮಾಡುವುದು ಅಥವಾ ಕಳಪೆ ಗುಣಮಟ್ಟದ ಬೀಜಗಳು, ಕಲಬೆರಕೆ ಬೀಜ, ರಸಗೊಬ್ಬರ ಮಾರಾಟ ಮಾಡುವುದು ಕಂಡು ಬಂದಲ್ಲಿ ಅಥವಾ ರಸಗೊಬ್ಬರ, ಬಿತ್ತನೆ ಬೀಜಗಳ ನಿಗದಿತ ದರ, ದಾಸ್ತಾನು ವಿವರಗಳನ್ನು ಮಳಿಗೆಗಳಲ್ಲಿ ಪ್ರದರ್ಶಿಸದೇ ಇದ್ದಲ್ಲಿ ಅಂತಹ ಮಳಿಗೆಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಕೃತಕ ಅಭಾವ ಸೃಷ್ಟಿಸಬಾರದು. ಈ ಬಗ್ಗೆ ಪರಿಶೀಲನೆಗಾಗಿ ಇಲಾಖೆಯ ಅಧಿಕಾರಿಗಳನ್ನು ನಿಯೋಜಿಸಬೇಕು.



ದೇಶಾದ್ಯಂತ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಜುಲೈ 29 ರವರೆಗೆ ನಡೆಯಲಿದೆ. ಕೊಪ್ಪಳ ಜಿಲ್ಲೆಯಲ್ಲಿ ಸಹ ಈ ಕಾರ್ಯ ಅಚ್ಚುಕಟ್ಟಾಗಿ ನಡೆಯಬೇಕು. ಗಣತಿ ನಮೂನೆಗಳನ್ನು ಮತದಾರರಿಗೆ ಕೊಡುವ ಮತ್ತು ಅದನ್ನು ಮರಳಿ ಪಡೆಯುವ ಕಾರ್ಯವಾಗಬೇಕು. ಭರ್ತಿ ಮಾಡಿದ ಗಣತಿ ನಮೂನೆಯನ್ನು ಮತದಾರರು ಹಿಂದುರುಗಿಸದೇ ಇದ್ದಲ್ಲಿ ಕರಡು ಮತದಾರರ ಪಟ್ಟಿಯಲ್ಲಿ ಅವರ ಹೆಸರು ಸೇರುವುದಿಲ್ಲ. ಮರಣ ಹೊಂದಿದ, ವಲಸೆ ಹೋದ ಮತದಾರರನ್ನು ಗುರುತಿಸಬೇಕು. ಭಾರತ ಚುನಾವಣಾ ಆಯೋಗದ ವೇಳಾಪಟ್ಟಿಯಂತೆ ಪ್ರಕ್ರಿಯೆ ಪೂರ್ಣಗೊಳಿಸಿ. ಗ್ರಾಮ ಪಂಚಾಯತಿ ಹಾಗು ವಾರ್ಡ್ವಾರು ಸಹಾಯವಾಣಿ ಸ್ಥಾಪಿಸಿ, ಮತದಾರರ ಗೊಂದಲಗಳಿಗೆ, ದೂರುಗಳಿಗೆ ಸ್ಪಂದಿಸಿ ಎಂದು ಸಚಿವರು ಸೂಚಿಸಿದರು.

ಕರ್ನಾಟಕ ವಿಧಾನಸಭೆಯ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಕುಷ್ಟಗಿ ಶಾಸಕರಾದ ದೊಡ್ಡನಗೌಡ ಹನುಮಗೌಡ ಪಾಟೀಲ ಅವರು ಮಾತನಾಡಿ, ಕುಷ್ಟಗಿ ತಾಲ್ಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗಿದೆ. ಜೆಜೆಎಂ ಅಡಿ ಪೂರೈಕೆಯಾಗುವ ನೀರಿನಲ್ಲಿ ವ್ಯತ್ಯಯವಾಗುತ್ತಿದೆ. ಶಾಲಾ–ಕಾಲೇಜುಗಳ ಸಮಯಕ್ಕೆ ಅನುಕೂಲವಾಗುವಂತೆ ಬಸ್‌ಗಳನ್ನು ಒದಗಿಸಬೇಕು. ಬಸ್‌ಗಳ ಸಂಖ್ಯೆಯೂ ಕಡಿಮೆ ಇದ್ದು, ಸಾರ್ವಜನಿಕರಿಗೆ, ವಿದ್ಯಾರ್ಥಿಗಳಿಗೆ ಬಹಳಷ್ಟು ತೊಂದರೆ ಉಂಟಾಗಿದೆ. ಈ ಸಮಸ್ಯೆಗಳ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಂಡು ಪರಿಹಾರ ಕಲ್ಪಿಸಿಕೊಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಯಲಬುರ್ಗಾ ಶಾಸಕರಾದ ಬಸವರಾಜ ರಾಯ–ರೆಡ್ಡಿ ಅವರು ಮಾತನಾಡಿ, ಯಲಬುರ್ಗಾ ಹಾಗೂ ಕುಕನೂರ ತಾಲ್ಲೂಕುಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕಾಣುತ್ತಿದೆ. ಬಿತ್ತನೆ ಪ್ರಮಾಣ ಕಡಿಮೆ ಆಗಿದೆ. ಹೆಚ್ಚುವರಿ ಜಿಲ್ಲಾಧಿಕಾರಿ ನೇತೃತ್ವದಲ್ಲಿ ಜಿಲ್ಲಾ ಪಂಚಾಯತಿಯ ಉಪಕಾರ್ಯದರ್ಶಿ, ತೋಟಗಾರಿಕೆ ಹಾಗೂ ಕೃಷಿ ಜಂಟಿ ನಿರ್ದೇಶಕರು ಮತ್ತು ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರ ಅವರನ್ನೊಳಗೊಂಡ ಅಧಿಕಾರಿಗಳ ತಂಡ ರಚನೆಯಾಗಬೇಕು. ಈ ತಂಡವು ಜಿಲ್ಲೆಯ ಎಲ್ಲಾ ತಾಲೂಕಿಗೆ ಸಂಚರಿಸಿ ಆಯಾ ಕಡೆಗಳಲ್ಲಿ ತಹಸೀಲ್ದಾರರು, ತಾಪಂ ಕಾರ್ಯನಿರ್ವಹಣಾಧಿಕಾರಿಗಳು, ಬಿಇಓ ಸೇರಿದಂತೆ ತಾಲೂಕುಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಬಿತ್ತನೆ ಪ್ರಮಾಣ, ಕುಡಿವ ನೀರಿನ ಪರಿಸ್ಥಿತಿ ಸೇರಿದಂತೆ ಮಳೆ ಕೊರತೆಯ ಹಿನ್ನಲೆಯಲ್ಲಿ ಎಲ್ಲ ರೀತಿಯ ಮಾಹಿತಿ ಸಂಗ್ರಹಿಸಿ ವರದಿ ಸಿದ್ಧಪಡಿಸಬೇಕು ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಅವರು ಮಾತನಾಡಿ, ಜಿಲ್ಲೆಯಲ್ಲಿ ಪ್ರಕೃತಿ ವಿಕೋಪಕ್ಕೆ ಸಂಬಂಧಿಸಿದಂತೆ ಯಾವುದೇ ಸನ್ನವೇಶವನ್ನು ಎದುರಿಸಲು ಜಿಲ್ಲಾಡಳಿತ ಸಿದ್ಧವಾಗಿದೆ. ಜೀವ ಹಾನಿ ಪ್ರಕರಣಗಳಿಗೆ ನಿಯಮಾನುಸಾರ ಪರಿಹಾರ ಒದಗಿಸಲಾಗಿದೆ. ರೈತ ಆತ್ಮಹತ್ಯೆ ಪ್ರಕರಣಗಳಿಗೆ ಪರಿಹಾರ ಒದಗಿಸಿದೆ. 39 ಪ್ರಾಣಿಗಳು ಮರಣ ಹೊಂದಿದ್ದು ಸೂಕ್ತ ಪರಿಹಾರ ವಿತರಣೆ ಮಾಡಲಾಗಿದೆ. ಮಳೆಯಿಂದ ಭಾಗಶಃ ಹಾನಿಯಾದ 44 ಮನೆಗಳಿಗೆ ಪರಿಹಾರ ಒದಗಿಸಿದೆ. ಕುಡಿಯುವ ನೀರು ಪೂರೈಕೆಗೆ ಅನುದಾನದ ಕೊರತೆ ಇಲ್ಲ ಎಂದು ಸಚಿವರಿಗೆ ಮಾಹಿತಿ ನೀಡಿದರು.

ಜಂಟಿ ಕೃಷಿ ನಿರ್ದೇಶಕರಾದ ಜಿ.ಡಿ ಕೃಷ್ಣಮೂರ್ತಿ ಮಾತನಾಡಿ, ಜಿಲ್ಲೆಯಲ್ಲಿ ವಾಡಿಕೆಗಿಂತ ಶೇ.31 ರಷ್ಟು ಮಳೆಯ ಕೊರತೆಯಾಗಿದೆ. ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನ ಸಾಮಾನ್ಯ ಬಿತ್ತನೆ ಗುರಿ 3,49,892 ಹೆಕ್ಟೇರ್ ಆಗಿದ್ದು, ಇದುವರೆಗೂ 1,63,546 ಹೆಕ್ಟೇರ್ ಪ್ರದೇಶದಲ್ಲಿ ಮಾತ್ರ ಬಿತ್ತನೆಯಾಗಿದ್ದು, ಶೇ.47 ರಷ್ಟು ಬಿತ್ತನೆ ಕಾರ್ಯ ಪೂರ್ಣಗೊಂಡಿದೆ. ಮುಂಗಾರು ಹಂಗಾಮಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಡಿ ಇದುವರೆಗೂ 3,203 ಅರ್ಜಿಗಳು ಸ್ವೀಕೃತಗೊಂಡಿದ್ದು, ರೈತರ ನೋಂದಣಿ ಕಾರ್ಯ ಪ್ರಗತಿಯಲ್ಲಿದೆ. ಯೂರಿಯಾ, ಡಿಎಪಿ, ಎಂಒಪಿ, ಕಾಂಪ್ಲೆಕ್ಸ್, ಎಸ್‌ಎಸ್‌ಪಿ ರಸಗೊಬ್ಬರಗಳ ಒಟ್ಟು ದಾಸ್ತಾನು 64,950 ಟನ್‌ಗಳಲ್ಲಿ 36,954 ಟನ್ ರಸಗೊಬ್ಬರ ಮಾರಾಟ ಮಾಡಲಾಗಿದ್ದು, ಜುಲೈ 2 ರಂತೆ 27,996 ಟನ್ ರಸಗೊಬ್ಬರ ಉಳಿಕೆ ದಾಸ್ತಾನು ಲಭ್ಯವಿದೆ ಎಂದು ವಿವರವಾದ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಜಿಲ್ಲಾ ಪಂಚಾಯತಿ ಉಪಕಾರ್ಯದರ್ಶಿ ಕೃಷ್ಣಮೂರ್ತಿ ಟಿ., ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಂಜುನಾಥ ಗುಂಡೂರ, ಉಪವಿಭಾಗಾಧಿಕಾರಿ ಮಹಮ್ಮದ್ ಜೀಲಾನ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ರೈತರು ಮುಂಗಾರು ಹಂಗಾಮಿನ ಬೆಳೆ ವಿಮೆ ನೋಂದಣಿಗೆ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜು.04–2026–27ನೇ ಸಾಲಿಗೆ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ಮುಂಗಾರು ಹಂಗಾಮಿನಲ್ಲಿ ಬೆಳೆದಿರುವ ಬೆಳೆಗಳಾದ ತೊಗರಿ, ಹೆಸರು, ಉದ್ದು, ಹತ್ತಿ ಸೂಯಾ ಅವರೆ ಹಾಗೂ ಇತರೆ ಎಲ್ಲಾ ಬೆಳೆಗಳಿಗೆ ಬೆಳೆ ವಿಮೆಗಾಗಿ ನೋಂದಾಯಿಸಿಕೊಳ್ಳಬೇಕೆಂದು ಕಲಬುರಗಿ ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಹಾಗೂ ಜಂಟಿ ಕೃಷಿ ನಿರ್ದೇಶಕರಾದ ಸಮದ್ ಪಟೇಲ್ ಅವರು ತಿಳಿಸಿದ್ದಾರೆ. ರೈತರು ತಮ್ಮ ಆಧಾರ್ ಕಾರ್ಡ್, ಬ್ಯಾಂಕ್ ಪಾಸ್ ಪುಸ್ತಕ, ಪಹಣಿ, ಮೊಬೈಲ್ ಸಂಖ್ಯೆಯೊಂದಿಗೆ ತಮ್ಮ ಹತ್ತಿರದ ಪೋಸ್ಟ್ ಆಫೀಸ್, ಬ್ಯಾಂಕ್, ಗ್ರಾಮ್–ಒನ್ ಅಥವಾ ಸಿ.ಎಸ್.ಸಿ. ಕೇಂದ್ರಗಳಲ್ಲಿ ಆನ್‌ಲೈನ್ ಮೂಲಕ ಅಥವಾ ಇಂಡಸ್ ಇಂಡ್ ಜನರಲ್ ಇನ್ಸೂರೆನ್ಸ್ ಕಂಪನಿ (Indusind General Insurance Company) ಪ್ರತಿನಿಧಿಯನ್ನು ಸಂಪರ್ಕಿಸಿ ನೋಂದಣಿ ಮಾಡಿಕೊಳ್ಳಬೇಕು. ಜಿಲ್ಲೆಯ ರೈತರು ಕೊನೆಯ ದಿನಾಂಕದವರೆಗೆ ಕಾಯದೇ, ಮುಂಚಿತವಾಗಿ ತಮ್ಮ ಬೆಳೆವಿಮೆ ನೋಂದಾಯಿಸಿಕೊಳ್ಳಬೇಕು. ನಿರ್ಧರಿತ ಬೆಳೆಗಳ ವಿವರ ಹಾಗೂ ರೈತರು ಪ್ರತಿ ಹೆಕ್ಟೇರ್‌ಗೆ ಪಾವತಿಸಬೇಕಾದ ಮೊತ್ತದ ವಿಮಾ ಮೊತ್ತದ ವಿವರ ಇಂತಿದೆ: ಮೆಕ್ಕೆಜೋಳ (ಮಳೆ ಆಶ್ರಿತ) ಬೆಳೆಗೆ 1350 ರೂ., ತೊಗರಿ (ನೀರಾವರಿ) ಬೆಳೆಗೆ 1206 ರೂ., ತೊಗರಿ (ಮಳೆ ಆಶ್ರಿತ) 1152 ರೂ., ಮೆಕ್ಕೆಜೋಳ (ನೀರಾವರಿ) ಬೆಳೆಗೆ 1524 ರೂ., ಹತ್ತಿ (ನೀರಾವರಿ) ಬೆಳೆಗೆ 4320 ರೂ., ಹತ್ತಿ (ಮಳೆ ಆಶ್ರಿತ) 2985 ರೂ., ಸಜ್ಜೆ (ಮಳೆ ಆಶ್ರಿತ) ಬೆಳೆಗೆ 696 ರೂ., ಎಳ್ಳು (ಮಳೆ ಆಶ್ರಿತ) ಬೆಳೆಗೆ 638 ರೂ., ಸೋಯಾಬೀನ್ (ಮಳೆ ಆಶ್ರಿತ) ಬೆಳೆಗೆ 944 ರೂ. ವಿಮಾ ಮೊತ್ತ ಇರುತ್ತದೆ. ಈ ಬೆಳೆಗಳಿಗೆ ನೋಂದಣಿ ಮಾಡಿಕೊಳ್ಳಲು 2026ರ ಜುಲೈ 31 ರಂದು ಕೊನೆಯ ದಿನವಾಗಿದೆ.

# ಬರ ಪರಿಸ್ಥಿತಿಯಲ್ಲಿ ಸಾರ್ವಜನಿಕರು ಹತ್ತಿರದ ಆಸ್ಪತ್ರೆಗಳಲ್ಲೇ ಉಚಿತ ಆರೋಗ್ಯ ಸೇವೆ ಪಡೆಯಿರಿ: ಡಿ.ಹೆಚ್.ಒ ಡಾ.ಯಲ್ಲಾ ರಮೇಶ್ ಬಾಬು ಕರೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಬರದಂತಹ ಕಠಿಣ ಪರಿಸ್ಥಿತಿಯಲ್ಲಿ ರೈತರು ಮತ್ತು ಸಾರ್ವಜನಿಕರು ಆರ್ಥಿಕ ಸಂಕಷ್ಟದ ಜೊತೆಗೆ ಮಾನಸಿಕ ಹಾಗೂ ದೈಹಿಕ ಆರೋಗ್ಯದ ಸಮಸ್ಯೆಗಳನ್ನು ಎದುರಿಸುತ್ತಾರೆ. ಈ ಸಮಯದಲ್ಲಿ ಸಾರ್ವಜನಿಕರು ವಿನಾಕಾರಣ ಖರ್ಚು-ವೆಚ್ಚ ಮಾಡದೆ, ತಮಗೆ ಲಭ್ಯವಿರುವ ಸರ್ಕಾರಿ ಆಸ್ಪತ್ರೆಗಳ ಉಚಿತ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಯಲ್ಲಾ ರಮೇಶ್ ಬಾಬು ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು, ಜನರ ಆಸರೆಗಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಗ್ರಾಮ ಮಟ್ಟದಲ್ಲಿ ಹಲವು ವಿಶೇಷ ಮತ್ತು ಉಚಿತ ಆರೋಗ್ಯ ಸೇವೆಗಳನ್ನು ಹಮ್ಮಿಕೊಂಡಿದ್ದು, ಸಾರ್ವಜನಿಕರು ನಗರ ಪ್ರದೇಶಗಳಿಗೆ ಅಲೆಯುವ ಅಗತ್ಯವಿಲ್ಲ ಎಂದು ಅವರು ತಿಳಿಸಿದ್ದಾರೆ.

*ಗ್ರಾಮ ಮಟ್ಟದಲ್ಲೇ ವಿಶೇಷ ಆರೋಗ್ಯ ಶಿಬಿರಗಳು:*

ಬರದಂತಹ ಸ್ಥಿತಿ ಎದುರಿಸುವ ಹಳ್ಳಿಗಳ ಜನರು ಆಸ್ಪತ್ರೆಗಳಿಗೆ ಅಲೆಯುವುದನ್ನು ತಪ್ಪಿಸಲು ಆರೋಗ್ಯ ಇಲಾಖೆಯೇ ಹಳ್ಳಿಗಳ ಕಡೆಗೆ ಬರಲಿದೆ. ಗ್ರಾಮ ಮಟ್ಟದಲ್ಲಿ ಉಚಿತ ತಪಾಸಣಾ ಶಿಬಿರಗಳನ್ನು ನಡೆಸಿ ರಕ್ತದೊತ್ತಡ, ಮಧುಮೇಹ ಮತ್ತು ಕಣ್ಣಿನ ಉಚಿತ ತಪಾಸಣೆ ಮಾಡಿ, ಅಗತ್ಯ ಮಾತ್ರೆ ಹಾಗೂ ಕನ್ನಡಕಗಳನ್ನು ಉಚಿತವಾಗಿ ನೀಡಲಾಗುವುದು. ಆಸ್ಪತ್ರೆಗಳಿಲ್ಲದ ದೂರದ ಹಳ್ಳಿಗಳಿಗೆ ಸಂಚಾರಿ ಆರೋಗ್ಯ ಘಟಕಗಳು ಭೇಟಿ ನೀಡಿ ಪ್ರಾಥಮಿಕ ಚಿಕಿತ್ಸೆ ಒದಗಿಸಲಿವೆ.

*ಸಾಂಕ್ರಾಮಿಕ ರೋಗಗಳ ತಡೆ ಹಾಗೂ ಕುಡಿಯುವ ನೀರು ಪರೀಕ್ಷೆ:*

ಮಳೆ ಕೊರತೆಯ ಸಮಯದಲ್ಲಿ ನೀರಿನ ಅಭಾವದಿಂದ ಕಾಮಾಲೆ, ಕಾಲರಾ, ಟೈಫಾಯಿಡ್ ಮತ್ತು ಚರ್ಮರೋಗಗಳಂತಹ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆ ಹೆಚ್ಚಿರುತ್ತದೆ. ಇಂತಹ



ಸಮಸ್ಯೆಗಳಿಗೆ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸಂಪೂರ್ಣ ಉಚಿತ ತಪಾಸಣೆ ಹಾಗೂ ಔಷಧಿ ನೀಡಲಾಗುವುದು. ಗ್ರಾಮೀಣ ಭಾಗದ ನೀರಿನ ಮೂಲಗಳಾದ ಬೋರ್‌ವೆಲ್ ಹಾಗೂ ಟ್ಯಾಂಕರ್ ನೀರನ್ನು ನಿಯಮಿತವಾಗಿ ಕ್ಲೋರಿನೇಷನ್ ಮಾಡಲು ಮತ್ತು ನೀರಿನ ಗುಣಮಟ್ಟವನ್ನು ಉಚಿತವಾಗಿ ಜೈವಿಕ ಪರೀಕ್ಷೆ ಮಾಡಲು ಇಲಾಖೆ ಕ್ರಮ ಕೈಗೊಂಡಿದೆ.

*ಗರ್ಭಿಣಿಯರು, ಬಾಣಂತಿಯರು ಮತ್ತು ಮಕ್ಕಳಿಗೆ ಪೌಷ್ಟಿಕಾಂಶ:*

ಆರ್ಥಿಕ ಮುಗ್ಗಟ್ಟಿನಿಂದಾಗಿ ಮಹಿಳೆಯರು ಮತ್ತು ಮಕ್ಕಳಲ್ಲಿ ಪೌಷ್ಟಿಕಾಂಶದ ಕೊರತೆ ಕಾಡದಂತೆ ತಡೆಯಲು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ವಿಶೇಷ ಸೇವೆ ನೀಡಲಾಗುತ್ತಿದೆ. ಗರ್ಭಿಣಿ ಮತ್ತು ಬಾಣಂತಿಯರಿಗೆ ರಕ್ತಹೀನತೆ ತಡೆಯಲು ಕಬ್ಬಿಣದಂಶ ಹಾಗೂ ಫೋಲಿಕ್ ಆಸಿಡ್ ಮಾತ್ರೆಗಳನ್ನು ಉಚಿತವಾಗಿ ನೀಡಲಾಗುವುದು. ಅಪೌಷ್ಟಿಕತೆಯಿಂದ ಬಳಲುವ ಮಕ್ಕಳನ್ನು ಗುರುತಿಸಿ ಅವರಿಗೆ ಉಚಿತ ಪೌಷ್ಟಿಕ ಆಹಾರದ ಕಿಟ್‌ಗಳು ಮತ್ತು ಚಿಕಿತ್ಸೆ ನೀಡಲಾಗುತ್ತದೆ.

*ಉಚಿತ ತುರ್ತು ಸೇವೆ ಹಾಗೂ ರೂ.5 ಲಕ್ಷದವರೆಗೆ ಆರೋಗ್ಯ ವಿಮೆ:*

ಆಯುಷ್ಮಾನ್ ಭಾರತ್ – ಆರೋಗ್ಯ ಕರ್ನಾಟಕ ಯೋಜನೆಯಡಿ ಬರಗಾಲದ ಸಮಯದಲ್ಲಿ ಬರುವ ಯಾವುದೇ ದೊಡ್ಡ ಕಾಯಿಲೆ ಅಥವಾ ಶಸ್ತ್ರಚಿಕಿತ್ಸೆಗೆ ನೋಂದಾಯಿತ ಆಸ್ಪತ್ರೆಗಳಲ್ಲಿ ರೈತರಿಗೆ ಹಾಗೂ ಕೂಲಿ ಕಾರ್ಮಿಕ ಕುಟುಂಬಗಳಿಗೆ ವರ್ಷಕ್ಕೆ ರೂ.5 ಲಕ್ಷದವರೆಗೆ ಸಂಪೂರ್ಣ ಉಚಿತ ನಗದು ರಹಿತ ಚಿಕಿತ್ಸೆ ಸಿಗಲಿದೆ. ಯಾವುದೇ ತುರ್ತು ಆರೋಗ್ಯ ಸಮಸ್ಯೆಯ ಸಂದರ್ಭದಲ್ಲಿ ರೋಗಿಗಳನ್ನು ಉಚಿತವಾಗಿ ಹತ್ತಿರದ ಆಸ್ಪತ್ರೆಗೆ ಸಾಗಿಸಲು 108 ಆಂಬ್ಯುಲೆನ್ಸ್ ಸೇವೆ ಸದಾ ಲಭ್ಯವಿರುತ್ತದೆ.

*ರೈತರ ಮಾನಸಿಕ ಒತ್ತಡ ನಿವಾರಣೆಗೆ ಉಚಿತ ಆಪ್ತಸಮಾಲೋಚನೆ:*

ಬೆಳೆ ನಷ್ಟ ಮತ್ತು ಸಾಲದ ಸುಳಿಗೆ ಸಿಲುಕಿ ರೈತರು ತೀವ್ರ ಮಾನಸಿಕ ಒತ್ತಡಕ್ಕೆ ಒಳಗಾಗುವುದನ್ನು ತಡೆಯಲು ಇಲಾಖೆ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. 'ಮನೋಚೈತನ್ಯ' ಯೋಜನೆಯಡಿ ತಾಲ್ಲೂಕು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮಟ್ಟದಲ್ಲಿ ರೈತರಿಗಾಗಿ ಉಚಿತ ಮಾನಸಿಕ ಸಮಾಲೋಚನೆ ಶಿಬಿರಗಳನ್ನು ನಡೆಸಿ, ಮಾನಸಿಕ ತಜ್ಞರಿಂದ ಧೈರ್ಯ ತುಂಬುವ ಕೆಲಸ ಮಾಡಲಾಗುವುದು.

ಟೆಲಿ-ಮನಸ್ ಕಾರ್ಯಕ್ರಮದಡಿ ರೈತರು ತಮಗಾಗುವ ತೀವ್ರ ಮಾನಸಿಕ ಒತ್ತಡ ಅಥವಾ ಖಿನ್ನತೆಯ ಸಮಯದಲ್ಲಿ 14416 ಸಂಖ್ಯೆಗೆ ಕರೆ ಮಾಡಿ ದಿನದ 24 ಗಂಟೆಯೂ ಉಚಿತವಾಗಿ ತಜ್ಞರಿಂದ ಆಪ್ತಸಮಾಲೋಚನೆ ಮತ್ತು ಮಾರ್ಗದರ್ಶನ ಪಡೆಯಬಹುದು ಎಂದು ಅವರು ತಿಳಿಸಿದ್ದಾರೆ.

ಗ್ರಾಮಕ್ಕೆ ಬರುವ ಆಶಾ ಕಾರ್ಯಕರ್ತೆಯರು ಅಥವಾ ಆರೋಗ್ಯ ಕ್ಷೇಮ ಕೇಂದ್ರದ ಸಿಬ್ಬಂದಿಯನ್ನು ಸಂಪರ್ಕಿಸಿ ಈ ಎಲ್ಲಾ ಸೌಲಭ್ಯಗಳನ್ನು ಉಚಿತವಾಗಿ ಪಡೆದುಕೊಳ್ಳಬಹುದು. ಯಾವುದೇ ಆರೋಗ್ಯ ನೆರವಿಗಾಗಿ ಇಲಾಖೆಯ ಸಹಾಯವಾಣಿ ಸಂಖ್ಯೆ 7353183474 ಗೆ ಕರೆ ಮಾಡಬಹುದು ಎಂದು ಡಿ.ಹೆಚ್.ಓ ಡಾ. ಯಲ್ಲಾ ರಮೇಶ್ ಬಾಬು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವನಮಹೋತ್ಸವ ಅಂಗವಾಗಿ ಗ್ರೀನ್ ಮಾರ್ಚ್ ಪರಿಸರ ಕಾಳಜಿ ಕೇವಲ ಒಂದು ದಿನಕ್ಕೆ ಸೀಮಿತ ಬೇಡ: ಎಸ್ಪಿ ಡಾ. ಸುಮನ್



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಪರಿಸರ ಸಂರಕ್ಷಣೆ, ಮರಗಳನ್ನು ಬೆಳೆಸುವುದು ಕೇವಲ ವರ್ಷಕ್ಕೊಮ್ಮೆ ಮಾಡುವ ಸಾಂಕೇತಿಕ ಆಚರಣೆಯಾಗಬಾರದು. ಬದಲಿಗೆ ಅದು ನಮ್ಮ ದೈನಂದಿನ ಜೀವನಶೈಲಿಯಾಗಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ.ಪೆನ್ನೇಕರ್ ಅವರು ಕರೆ ನೀಡಿದರು.

ವನಮಹೋತ್ಸವ 2026 ರ ಅಂಗವಾಗಿ ಬಳ್ಳಾರಿ ಪ್ರಾದೇಶಿಕ ಅರಣ್ಯ ವಿಭಾಗದ ವತಿಯಿಂದ ಪರಿಸರ ಜಾಗೃತಿ ಮೂಡಿಸುವ ಉದ್ದೇಶದಿಂದ ನಗರದ ರೇಡಿಯೋ ಪಾರ್ಕ್ ಬಳಿಯ ಪ್ರಾದೇಶಿಕ ಅರಣ್ಯ ವಿಭಾಗ ಕಚೇರಿ ಆವರಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ 'ಗ್ರೀನ್ ಮಾರ್ಚ್' ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಬಳ್ಳಾರಿಯಲ್ಲಿ ದಿನದಿಂದ ದಿನಕ್ಕೆ ತಾಪಮಾನವು ಗಣನೀಯವಾಗಿ ಹೆಚ್ಚಾಗುತ್ತಿದೆ. ಇದಕ್ಕೆ ಹಸಿರು ಕ್ರಾಂತಿಯೊಂದೇ ಸೂಕ್ತ ಪರಿಹಾರ. ನಾವು ಎಷ್ಟು ಹೆಚ್ಚು ಮರ-ಗಿಡಗಳನ್ನು ನೆಟ್ಟು ಪೋಷಿಸುತ್ತೇವೆಯೋ, ಅಷ್ಟು ಹಿತಕರವಾದ ವಾತಾವರಣವನ್ನು ನಮ್ಮ ಮುಂದಿನ ಪೀಳಿಗೆಗೆ ನೀಡಬಹುದು ಎಂದು ತಿಳಿಸಿದರು.

ಗಿಡಗಳನ್ನು ನೆಡುವ ಪ್ರಕ್ರಿಯೆಯಲ್ಲಿ ಮಕ್ಕಳ ಪಾತ್ರ ದೊಡ್ಡದಿದೆ. ಮಕ್ಕಳ ಬೆಳವಣಿಗೆಯ ಜೊತೆ ಜೊತೆಗೆ ಅವರು ನೆಟ್ಟ ಸಸಿಗಳು ಬೆಳೆಯುವುದನ್ನು ನೋಡುವುದೇ ಒಂದು ಸಂಭ್ರಮ. ನಮ್ಮ ಶಾಲಾ ದಿನಗಳಲ್ಲಿ ಸಸಿಗಳನ್ನು ನೆಟ್ಟು, ಅವುಗಳ ಬೆಳವಣಿಗೆಯನ್ನು ಪ್ರಾಯೋಗಿಕವಾಗಿ ದಾಖಲಿಸುವ ಚಟುವಟಿಕೆಗಳಿದ್ದವು. ಇಂತಹ ಹವ್ಯಾಸಗಳು ಇಂದಿನ ಮಕ್ಕಳಿಗೂ ಅತ್ಯಗತ್ಯ ಎಂದರು.

ಪ್ರತಿ ವರ್ಷ ಅರಣ್ಯ ಇಲಾಖೆಯು ಸಸಿಗಳನ್ನು ನೆಡುವ ಇಂತಹ ಹತ್ತಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವುದು ಶ್ಲಾಘನೀಯ. ಪ್ರತಿಯೊಬ್ಬ ನಾಗರಿಕನೂ ಕೇವಲ ಸಸಿ ನೆಡುವುದಷ್ಟೇ ಅಲ್ಲದೆ, ಅದನ್ನು ಹೆಮ್ಮರವಾಗಿಸುವವರೆಗೆ ಪೋಷಿಸುವ ಜವಾಬ್ದಾರಿ ಹೊರಬೇಕು ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಪರಿಸರ ಇದ್ದರೆ ನಾವು ಇರುತ್ತೇವೆ, ಪರಿಸರ ಇಲ್ಲದಿದ್ದರೆ ನಮ್ಮ ಅಸ್ತಿತ್ವವೇ ಇರಲ್ಲ, ಸುಸ್ಥಿರ ಅಭಿವೃದ್ಧಿಯ ಹಾದಿಯಲ್ಲಿ ಸಾಗಿದರೆ ಮಾತ್ರ ನಮ್ಮ ಭವಿಷ್ಯ ಚೆನ್ನಾಗಿರಲು ಸಾಧ್ಯ. ಇದಕ್ಕಾಗಿ ಯುವ ಪೀಳಿಗೆಯು ಅರಣ್ಯೀಕರಣ, ಸಾಮಾಜಿಕ ಅರಣ್ಯೀಕರಣ ಹಾಗೂ ಸಸಿ ನೆಡುವ ಕಾರ್ಯಕ್ರಮಗಳಿಗೆ ನಿರಂತರ ಬೆಂಬಲ ನೀಡಬೇಕು ಎಂದು ಆಶಿಸಿದರು.

*ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕುರಿತು ಜಾಗೃತಿ:*

ವಿದ್ಯಾರ್ಥಿಗಳು ನೀವಿನ್ನೂ ವೋಟ್ ಮಾಡದೇ ಇರಬಹುದು, ಆದರೆ ಎಸ್‌ಐಆರ್ ಬಗ್ಗೆ ಜಾಗೃತಿ ಇರಬೇಕು. ನಿಮ್ಮ ಕುಟುಂಬದ ಸದಸ್ಯರ ಹೆಸರು ಹಳೆಯ ಮತದಾರರ ಪಟ್ಟಿಯಲ್ಲಿ ಎಲ್ಲಿದೆ ಎಂಬುದನ್ನು ಪರಿಶೀಲಿಸಿ, ಎನ್ಯೂಮರೇಷನ್ ಫಾರ್ಮ್ಸ್ ಹಾಗೂ ಪ್ರೊಜನಿ ಮ್ಯಾಪಿಂಗ್ ಪ್ರಕ್ರಿಯೆಗಳನ್ನು ಸರಿಯಾಗಿ ಭರ್ತಿ ಮಾಡಲು ಸಹಾಯ ಮಾಡಬೇಕು. ಒಂದು ವೇಳೆ ಈ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ತಪ್ಪುಗಳಾದರೆ ಮತದಾರರ ಪಟ್ಟಿಯಿಂದ ಹೆಸರು ಕೈಬಿಟ್ಟು ಹೋಗುವ ಸಾಧ್ಯತೆ ಇರುತ್ತದೆ. ಇದರಿಂದಾಗಿ ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯಗಳಿಂದಲೂ ವಂಚಿತರಾಗಬೇಕಾಗಬಹುದು ಎಂದು ಎಸ್‌ಐಆರ್ ಕುರಿತು ಯುವಕರಲ್ಲಿ ಜಾಗೃತಿ ಮೂಡಿಸಿದರು.

ಬಳ್ಳಾರಿ ವಲಯ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ. ಕೆ.ಎನ್ ಬಸವರಾಜ ಅವರು ಮಾತನಾಡಿ, ದೇಶಾದ್ಯಂತ ಜುಲೈ 1 ರಿಂದ 7 ನೇ ತಾರೀಖಿನವರೆಗೆ ವನಮಹೋತ್ಸವ ಸಪ್ತಾಹವನ್ನು ಆಚರಿಸಲಾಗುತ್ತಿದ್ದು, ಸಾರ್ವಜನಿಕರಲ್ಲಿ ಪರಿಸರ ಸಂರಕ್ಷಣೆ ಮತ್ತು ಹಸಿರನ್ನು ಹೆಚ್ಚಿಸುವ ಕುರಿತು ಜಾಗೃತಿ ಮೂಡಿಸುವುದು ಇದರ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಸಾಮಾನ್ಯವಾಗಿ ಜೂನ್ ಮೊದಲ ವಾರದಲ್ಲಿ ಕರ್ನಾಟಕಕ್ಕೆ ಮುಂಗಾರು ಪ್ರವೇಶಿಸಿದರೂ, ದೇಶಾದ್ಯಂತ ಸಂಪೂರ್ಣವಾಗಿ ಮಳೆಗಾಲ ಆರಂಭವಾಗುವುದು ಜೂನ್ ಅಂತ್ಯಕ್ಕೆ. ಈ ಹಿನ್ನೆಲೆಯಲ್ಲಿ, ಗಿಡಗಳನ್ನು ನೆಟ್ಟು ಪೋಷಿಸಲು ಜುಲೈ ಮೊದಲ ವಾರ ಅತ್ಯಂತ ಸೂಕ್ತವಾದ ಸಮಯವೆಂದು ಪರಿಗಣಿಸಿ ಈ ಸಪ್ತಾಹವನ್ನು ಆಚರಿಸಲಾಗುತ್ತದೆ. ಪ್ರಕೃತಿಯನ್ನು ಇಂದಿನ ಸ್ಥಿತಿಗಿಂತಲೂ ಉತ್ತಮ ರೀತಿಯಲ್ಲಿ ಮುಂದಿನ ಪೀಳಿಗೆಗೆ ಹಸ್ತಾಂತರಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಅವರು ಪ್ರತಿಪಾದಿಸಿದರು.

ಬಳಿಕ ಗಣ್ಯರು 'ಗ್ರೀನ್ ಮಾರ್ಚ್' (ಪರಿಸರ ಜಾಥಾ) ಗೆ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು. ಜಾಥಾವು ಪ್ರಾದೇಶಿಕ ಅರಣ್ಯ ವಿಭಾಗ ಕಚೇರಿ ಆವರಣದಿಂದ ಆರಂಭಗೊಂಡು, ಕೌಲ್ ಬಜಾರ್ ಮಾರ್ಗವಾಗಿ ಸಾಗಿ ಟಿ.ಬಿ. ಸಾನಿಟೋರಿಯಂ ಆವರಣದಲ್ಲಿ ಅಂತ್ಯಗೊಂಡಿತು. ಬಳಿಕ ಅಲ್ಲಿ ಸಸಿಗಳನ್ನು ನೆಡಲಾಯಿತು. ಕಾರ್ಯಕ್ರಮದಲ್ಲಿ ಸಸಿಗಳನ್ನು ನೆಡುವ ಮೂಲಕ ಪರಿಸರ ರಕ್ಷಣೆಯ ಸಂಕಲ್ಪ ಮಾಡಲಾಯಿತು ಹಾಗೂ ಜಾಥದಲ್ಲಿ ಭಾಗವಹಿಸಿದವರೆಲ್ಲರಿಗೂ ಸಸಿಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಜಿಪಂ ಉಪಕಾರ್ಯದರ್ಶಿ ಶಶಿಕಾಂತ್ ಶಿವಪುರೆ, ಉಪ ಅರಣ್ಯ ಸಂರಕ್ಷಣಾಧಿಕಾರಿ ಡಿ.ಕೆ. ಗಿರೀಶ್ ಕುಮಾರ್ ಸೇರಿದಂತೆ ಅರಣ್ಯ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ವರ್ಗ ಹಾಗೂ ಶಾಲಾ-ಕಾಲೇಜುಗಳ ಪ್ರಾಂಶುಪಾಲರು, ವಿದ್ಯಾರ್ಥಿಗಳು, ಸಾರ್ವಜನಿಕರು ಭಾಗವಹಿಸಿದ್ದರು.

# ದತ್ತಾಂಶಗಳ ಸುರಕ್ಷತೆಗೂ ಆದ್ಯತೆ ಅಗತ್ಯ: ವಾಗೀಶ ಶಿವಾಚಾರ್ಯ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಇಂದಿನ ದಿನಗಳಲ್ಲಿ ಆಡಳಿತಾತ್ಮಕ ದತ್ತಾಂಶಗಳ ಸಂಗ್ರಹಣೆ ಎಷ್ಟು ಮುಖ್ಯವೋ, ಅಷ್ಟೇ ಪ್ರಾಮುಖ್ಯತೆಯನ್ನು ದತ್ತಾಂಶಗಳ ಸುರಕ್ಷತೆಗೂ ನೀಡಬೇಕಾಗಿದೆ. ದತ್ತಾಂಶಗಳ ಸುರಕ್ಷತೆಯ ಬಗ್ಗೆ ನಾವೆಲ್ಲರೂ ಅಷ್ಟೇ ಕಾಳಜಿವಹಿಸುವುದು ಇಂದಿನ ಅಗತ್ಯವಾಗಿದೆ ಎಂದು ಜಿ.ಪಂ.ಮುಖ್ಯ ಯೋಜನಾಧಿಕಾರಿ ವಾಗೀಶ ಶಿವಾಚಾರ್ಯ ಅವರು ಹೇಳಿದರು.

ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಚೇರಿಯಲ್ಲಿ ಶುಕ್ರವಾರ ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗಳನ್ನೊಳಗೊಂಡಂತೆ ಪ್ರೊ.ಪಿ.ಸಿ.ಮಹಾಲನೋಬಿಸ್ ಅವರ ಜನ್ಮದಿನಾಚರಣೆ ಅಂಗವಾಗಿ '20ನೇ ರಾಷ್ಟ್ರೀಯ ಸಾಂಖ್ಯಿಕ ದಿನಾಚರಣೆ' ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಯಾವುದೇ ದೇಶದ ಪ್ರಗತಿಗೆ ನಿಖರವಾದ ಅಂಕಿ-ಅಂಶಗಳು ಅತ್ಯಗತ್ಯ. ಕೃಷಿ, ಕೈಗಾರಿಕೆ, ಆರೋಗ್ಯ ಮತ್ತು ಶಿಕ್ಷಣ ಕ್ಷೇತ್ರಗಳಲ್ಲಿ ಸರಿಯಾದ ನಿರ್ಧಾರಗಳನ್ನು ತೆಗೆದುಕೊಳ್ಳಲು ಸಾಂಖ್ಯಿಕ ದಿನಾಚರಣೆಯಂತಹ ಕಾರ್ಯಕ್ರಮಗಳು ಹೊಸ ದಿಕ್ಸೂಚಿಯನ್ನು ಒದಗಿಸುತ್ತವೆ ಎಂದರು.

ಈ ವರ್ಷದ ಮುಖ್ಯ ವಿಷಯವಾದ 'ಆಡಳಿತಾತ್ಮಕ ದತ್ತಾಂಶಗಳ ಸಾಮರ್ಥ್ಯವನ್ನು ಅನಾವರಣಗೊಳಿಸುವುದು' ಎಂಬ ವಿಷಯದ ಕುರಿತು ತೆಕ್ಕಲಕೋಟೆಯ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ನಾಗೇಶ್ವರ ರಾವ್ ಅವರು ವಿಶೇಷ ಉಪನ್ಯಾಸ ನೀಡಿದರು. ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಯ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಎನ್. ಕೆ. ಪತ್ರಿಬಸಪ್ಪ ಅವರು, ಸಾಂಖ್ಯಿಕ ಇಲಾಖೆಯಿಂದ ಸಂಗ್ರಹಿಸಲಾಗುತ್ತಿರುವ ವಿವಿಧ ದತ್ತಾಂಶಗಳ ಮಹತ್ವ ಮತ್ತು ಅವುಗಳ ಬಳಕೆಯ ಕುರಿತು ಸವಿವರವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಬಳ್ಳಾರಿ ಎನ್.ಎಸ್.ಎಸ್.ಓ ಕಚೇರಿಯ ಸಹಾಯಕ ನಿರ್ದೇಶಕ ಸಮೀರ್ ಪಟೇಲ್, ಎಸ್.ಓ ಮಿತಿಲೇಶ್, ಸಾಂಖ್ಯಿಕ ಇಲಾಖೆಯ ಸಹಾಯಕ ನಿರ್ದೇಶಕ ಸರಸ್ವತಿ, ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳ ಎಲ್ಲಾ ತಾಲೂಕು ಯೋಜನಾಧಿಕಾರಿಗಳು ಹಾಗೂ ಕಚೇರಿಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಸರ್ಕಾರಿ ಆದರ್ಶ ವಿದ್ಯಾಲಯ: 7, 8 ಮತ್ತು 9ನೇ ತರಗತಿಗಳ ಪ್ರವೇಶ ಪರೀಕ್ಷೆ ಫಲಿತಾಂಶ ಪ್ರಕಟ; ಜುಲೈ 6, 7 ಕ್ಕೆ ದಾಖಲಾತಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದ ಈದ್ಗಾ ರಸ್ತೆಯ ಹಿರಿಯಾಳ್‌ಕುಡಂನಲ್ಲಿರುವ ಸರ್ಕಾರಿ ಆದರ್ಶ ವಿದ್ಯಾಲಯದಲ್ಲಿ 2026-27ನೇ ಶೈಕ್ಷಣಿಕ ಸಾಲಿನ 7, 8 ಮತ್ತು 9ನೇ ತರಗತಿಗಳ ಖಾಲಿ ಸೀಟುಗಳ ಭರ್ತಿಗಾಗಿ ನಡೆಸಲಾಗಿದ್ದ ಪ್ರವೇಶ ಪರೀಕ್ಷೆಯ ಫಲಿತಾಂಶ ಹಾಗೂ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದೆ. ಕಳೆದ ಜೂನ್ 23 ರಂದು ನಡೆದ ಪ್ರವೇಶ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ, ಶಾಲಾ ಪ್ರವೇಶಕ್ಕೆ ಆಯ್ಕೆಯಾಗಿರುವ ವಿದ್ಯಾರ್ಥಿಗಳ ಪಟ್ಟಿಯನ್ನು ಸಾರ್ವಜನಿಕರ ಹಾಗೂ ಪೋಷಕರ ಮಾಹಿತಿಗಾಗಿ ವಿದ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ ಎಂದು ಶಾಲೆಯ ಮುಖ್ಯಗುರುಗಳು ತಿಳಿಸಿದ್ದಾರೆ. ಪರೀಕ್ಷೆಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳ ಅಧಿಕೃತ ದಾಖಲಾತಿ ಪ್ರಕ್ರಿಯೆಯು ಜು.06 ಮತ್ತು 07 ರಂದು ನಡೆಯಲಿದೆ. ಆಯ್ಕೆಯಾಗಿರುವ ವಿದ್ಯಾರ್ಥಿಗಳ ಪೋಷಕರು ತಕ್ಷಣವೇ ಶಾಲೆಗೆ ಭೇಟಿ ನೀಡಿ ಪ್ರವೇಶದ ಕುರಿತು ಸವಿಸ್ತಾರ ಮಾಹಿತಿ ಪಡೆಯಬೇಕು.

# ಎಸ್‌ಐಆರ್ ಕುರಿತು ಜಾಗೃತಿ: ಆಕರ್ಷಕ ರಂಗೋಲಿ ಸ್ಪರ್ಧೆ ಆಯೋಜನೆ ದೋಷರಹಿತ ಮತದಾರರ ಪಟ್ಟಿ ತಯಾರಿಕೆಗೆ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಭಾಗವಹಿಸಿ: ಜಿ.ಪಂ. ಸಿಇಒ ಕರೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಪಾರದರ್ಶಕ ಮತದಾರರ ಪಟ್ಟಿ ಸಿದ್ಧಪಡಿಸುವ ನಿಟ್ಟಿನಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಈ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಸ್ವೀಪ್ ಸಮಿತಿಯ ವತಿಯಿಂದ ಜಿಪಂ ಅಬ್ದುಲ್ ನಜೀರ್ ಸಾಬ್ ಸಭಾಂಗಣದ ಮುಂಭಾಗದಲ್ಲಿ ಶನಿವಾರ ವಿಶೇಷ 'ಎಸ್‌ಐಆರ್ ಮತದಾನ ಜಾಗೃತಿ ರಂಗೋಲಿ ಸ್ಪರ್ಧೆ' ಆಯೋಜಿಸಲಾಗಿತ್ತು.

ಮತದಾರರಲ್ಲಿ ಎಸ್‌ಐಆರ್ ಪ್ರಕ್ರಿಯೆಯ ಕುರಿತು ವ್ಯಾಪಕ ಜಾಗೃತಿ ಮೂಡಿಸುವ ಮಹತ್ತರ ಉದ್ದೇಶವನ್ನು ಈ ಕಾರ್ಯಕ್ರಮ ಹೊಂದಿತ್ತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಪ್ರಜಾಪ್ರಭುತ್ವದಲ್ಲಿ ಪ್ರತಿಯೊಂದು ಮತವೂ ಅಮೂಲ್ಯವಾಗಿದೆ. ದೋಷರಹಿತ ಮತದಾರರ ಪಟ್ಟಿ ರೂಪಿಸಲು ಪ್ರತಿಯೊಬ್ಬ ಅರ್ಹ ನಾಗರಿಕನೂ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಭಾಗವಹಿಸಬೇಕು. ಈ ನಿಟ್ಟಿನಲ್ಲಿ ಅರಿವು ಮೂಡಿಸಲು ರಂಗೋಲಿ ಅತ್ಯುತ್ತಮ ಮಾಧ್ಯಮವಾಗಿದೆ ಎಂದು ತಿಳಿಸಿದರು.

ಈ ವಿಶೇಷ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಈ ತಿಂಗಳ ಜುಲೈ 29ರ ವರೆಗೆ ಬೂತ್ ಮಟ್ಟದ ಅಧಿಕಾರಿಗಳು ಪ್ರತಿ ಮನೆ ಮನೆಗೂ ಭೇಟಿ ನೀಡಿ ಗಣತಿ ನಮೂನೆಗಳನ್ನು ಮನೆ-ಮನೆಗೆ ನೀಡಲಿದ್ದಾರೆ. ಆ ಫಾರ್ಮ್ಗಳನ್ನು ಯಾವುದೇ ತಪ್ಪುಗಳಿಲ್ಲದಂತೆ ಜಾಗರೂಕತೆಯಿಂದ ಭರ್ತಿ ಮಾಡಿ ನೀಡಬೇಕು ಎಂದರು.

ಪ್ರಜಾಪ್ರಭುತ್ವದ ಹಬ್ಬದಲ್ಲಿ ಪಾಲ್ಗೊಳ್ಳಲು ಪ್ರತಿಯೊಬ್ಬ ಅರ್ಹ ನಾಗರಿಕನೂ ಮತದಾರರ



ಪಟ್ಟಿಯಲ್ಲಿ ಹೆಸರು ಹೊಂದಿರುವುದು ಕಡ್ಡಾಯ. ಹಾಗಾಗಿ ಈ ಮಹತ್ವದ ಪ್ರಕ್ರಿಯೆಯ ಕುರಿತು ಸಮಾಜದ ಪ್ರತಿಯೊಬ್ಬರಿಗೂ ಅರಿವು ಮೂಡಿಸುವುದು ಇಂದಿನ ಅಗತ್ಯವಾಗಿದೆ ಎಂದರು.

ಸ್ಪರ್ಧೆಯಲ್ಲಿ ಭಾಗವಹಿಸಿದ್ದ ಮಹಿಳೆಯರು ತಾವು ಬಿಡಿಸಿದ ಆಕರ್ಷಕ ರಂಗೋಲಿಗಳ ಭಾವಚಿತ್ರಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಾಗೂ ತಮ್ಮ ಮೊಬೈಲ್ ಸ್ಟೇಟಸ್‌ಗಳಲ್ಲಿ ಹಂಚಿಕೊಳ್ಳಬೇಕು. ಈ ಮೂಲಕ ಸಾರ್ವಜನಿಕರಲ್ಲಿ ಮತದಾನ ಮತ್ತು ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ಇನ್ನಷ್ಟು ಹೆಚ್ಚಿನ ಜಾಗೃತಿ ಮೂಡಿಸಲು ಸಾಧ್ಯವಾಗುತ್ತದೆ ಎಂದು ಅಧಿಕಾರಿಗಳು ಸಲಹೆ ನೀಡಿದರು.

ಮುಂದಿನ ದಿನಗಳಲ್ಲಿ ಇದೇ ಮಾದರಿಯ ಎಸ್‌ಐಆರ್ ಜಾಗೃತಿ ರಂಗೋಲಿ ಸ್ಪರ್ಧೆಗಳನ್ನು ಗ್ರಾಮ ಪಂಚಾಯತ್ ಮಟ್ಟದಲ್ಲೂ ಸಹ ಆಯೋಜಿಸಲು ಉದ್ದೇಶಿಸಲಾಗಿದೆ ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು.

*ರಂಗೋಲಿಯಲ್ಲಿ ಮೂಡಿದ ಎಸ್‌ಐಆರ್ ಜಾಗೃತಿ ಸಂದೇಶ:*

ಸ್ಪರ್ಧೆಯಲ್ಲಿ ಸ್ವ-ಸಹಾಯ ಗುಂಪಿನ ಮಹಿಳೆಯರು ಉತ್ಸಾಹದಿಂದ ಭಾಗವಹಿಸಿದ್ದರು. ಸ್ಪರ್ಧಾಳುಗಳು ತಮ್ಮ ಕಲ್ಪನಾ ಶಕ್ತಿಯ ಮೂಲಕ ಆಕರ್ಷಕ ರಂಗೋಲಿಗಳನ್ನು ಬಿಡಿಸಿ ಗಮನ ಸೆಳೆದರು. ಎಸ್‌ಐಆರ್ ಕುರಿತ ಜಾಗೃತಿ ಸಂದೇಶಗಳು ಮತ್ತು ಲೋಗೋಗಳು ರಂಗೋಲಿ ಬಣ್ಣಗಳ ಮೂಲಕ ನೆಲದ ಮೇಲೆ ಮೂಡಿಬಂದವು.

ನಂತರ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಜಿಲ್ಲಾಡಳಿತದ ವತಿಯಿಂದ ಪ್ರಥಮ, ದ್ವಿತೀಯ ಹಾಗೂ ತೃತೀಯ ಬಹುಮಾನಗಳನ್ನು ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಶಶಿಕಾಂತ್ ಶಿವಪುರೆ, ಜಿಪಂ ಸಹಾಯಕ ನಿರ್ದೇಶಕ ಬಸವರಾಜ ಹಿರೇಮಠ ಸೇರಿದಂತೆ ಎನ್‌ಎಲ್‌ಆರ್‌ಎಂ ಯೋಜನೆಯ ಅಧಿಕಾರಿಗಳು, ಸಿಬ್ಬಂದಿ ವರ್ಗ ಹಾಗೂ ಸ್ವಸಹಾಯ ಸಂಘಗಳ ಗುಂಪಿನ ಮಹಿಳಾ ಸದಸ್ಯರು ಸೇರಿದಂತೆ ನೂರಕ್ಕೂ ಹೆಚ್ಚು ಮಹಿಳೆಯರು ಅತ್ಯಂತ ಉತ್ಸಾಹದಿಂದ ಭಾಗವಹಿಸಿದ್ದರು. ತಾವು ಬಿಡಿಸಿದ ಆಕರ್ಷಕ ರಂಗೋಲಿಗಳ ಮುಂದೆ ನಿಂತು ಸೆಲ್ಫಿ ತೆಗೆದುಕೊಳ್ಳುವ ಮೂಲಕ ಜಾಗೃತಿ ಅಭಿಯಾನಕ್ಕೆ ಸಾಕ್ಷಿಯಾದರು.

# ಕಾಶಪ್ಪನವರಿಗೆ ಸಚಿವ ಸ್ಥಾನ ನೀಡಲು ಆಗ್ರಹ



**ಬಾಗಲಕೋಟೆ:** ವೀರಶೈವ ಲಿಂಗಾಯತ ಅಭಿವೃದ್ದಿ ನಿಗಮದ ಅಧ್ಯಕ್ಷರು, ಶಾಸಕ ವಿಜಯಾನಂದ ಕಾಶಪ್ಪನವರಿಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರ ಸಂಪುಟದಲ್ಲಿ ಸಚಿವ ಸ್ಥಾನ ನೀಡಬೇಕು ಎಂದು ವಾಲ್ಮೀಕಿ ಸಮುದಾಯದ ಮುಖಂಡ ಸೋಮಶೇಖರ ಬಲಕುಂದಿ ಒತ್ತಾಯಿಸಿದ್ದಾರೆ.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹುನಗುಂದ ಮತಕ್ಷೇತ್ರದಿಂದ ವಿಜಯಾನಂದ ಕಾಶಪ್ಪನವರ ಎರಡು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದು, ಜನ ಸಾಮಾನ್ಯರ ಕೆಲಸಗಳ ಬಗ್ಗೆ ಸಂಪೂರ್ಣ ಅರಿವಿದ್ದು ಮತ್ತು ಅವರ ತಂದೆ ದಿ.ಎಸ್.ಆರ್. ಕಾಶಪ್ಪನವರ ಮಂತ್ರಿಯಾಗಿ ಕೆಲಸ ಮಾಡಿದ್ದಾರೆ. ಕಾಶಪ್ಪನವರ ಕುಟುಂಬ ಜನಸೇವೆಯಲ್ಲಿ ಮಾಡುತ್ತಿದ್ದು ವಿಜಯಾನಂದ ಕಾಶಪ್ಪನವರಿಗೆ ಈ ಬಾರಿ ಸಚಿವ ಸ್ಥಾನ ನೀಡಿದರೆ ಜಿಲ್ಲೆಯ ಅಭಿವೃದ್ದಿಗೆ ಹೆಚ್ಚಿನ ವೇಗ ಸಿಗುತ್ತದೆ ಎಂದರು.

ಮತಕ್ಷೇತ್ರದ ನೀರಾವರಿ ಸಮಸ್ಯೆಗಳು, ರೈತರ ಕಷ್ಟಗಳು, ಹಿಂದುಳಿದ ವರ್ಗಗಳ ಸಮಸ್ಯೆಗಳು ಸೇರಿದಂತೆ ನಾನಾ ಸಮಸ್ಯೆಗಳಿಗೆ ಸ್ಪಂದಿಸುವ ಕೆಲಸ ಮಾಡುತ್ತಿದ್ದಾರೆ. ಪ್ರಬಲ ಲಿಂಗಾಯತ ಪಂಚಮಸಾಲಿ ಸಮಾಜದ ಪ್ರಶ್ನಾತೀತ ನಾಯಕರಾಗಿದ್ದು ಆಡಳಿತ ವಿಷಯದಲ್ಲಿ ಯಾವಾಗಲೂ ಸ್ವಜನ ಪಕ್ಷಪಾತ ಮಾಡಿಲ್ಲ. ಎಲ್ಲ ಸಮುದಾಯದವರನ್ನು ಒಗ್ಗೂಡಿಸಿಕೊಂಡು ಹೋಗುತ್ತಾರೆ. ವಾಲ್ಮೀಕಿ ಸಮಾಜ ಅವರ ಬೆನ್ನಿಗೆ ಇದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಶಾಂತಕುಮಾರ ಸುರಪುರ, ಚಂದ್ರು ತಳವಾರ ಸೇರಿದಂತೆ ಮತ್ತಿತರರು ಇದ್ದರು.

# ಪ್ರಾಮಾಣಿಕ ನ್ಯಾಯ ಒದಗಿಸುವುದೇ ಕಾನೂನಿನ ಮುಖ್ಯ ಉದ್ದೇಶ



**ಬಾಗಲಕೋಟೆ:** ಜನರಿಗೆ ಪ್ರಾಮಾಣಿಕವಾಗಿ ನ್ಯಾಯ ಒದಗಿಸುವುದೇ ಕಾನೂನಿನ ಪ್ರಮುಖ ಉದ್ದೇಶವಾಗಿದ್ದು, ಕಾನೂನು ಪದವೀಧರರು ನ್ಯಾಯ, ನೀತಿ, ನೈತಿಕತೆ ಮತ್ತು ಮಾನವೀಯ ಮೌಲ್ಯಗಳನ್ನು ಎತ್ತಿಹಿಡಿಯುವ ಜವಾಬ್ದಾರಿಯನ್ನು ನಿರ್ವಹಿಸಬೇಕು ಎಂದು ಬೆಂಗಳೂರಿನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶೆ ಪ್ರಭಾವತಿ ಹಿರೇಮಠ ಹೇಳಿದರು. ನಗರದ ಬಸವೇಶ್ವರ ಇಂಜಿನಿಯರಿಂಗ್ ಕಾಲೇಜಿನ ಗ್ಯಾಲರಿ ಸಭಾಂಗಣದಲ್ಲಿ ಶನಿವಾರ ನಡೆದ ಬಿ.ವಿ.ವಿ. ಸಂಘದ ಎಸ್.ಸಿ. ನಂದಿಮಠ ಕಾನೂನು ಮಹಾವಿದ್ಯಾಲಯದ 2023–2026ನೇ ಸಾಲಿನ ಪದವಿ ಪ್ರದಾನ ಸಮಾರಂಭದಲ್ಲಿ 114 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಿ ಅವರು ಮಾತನಾಡಿದರು.

ಆಳಕ್ಕೆ ಇಳಿದಷ್ಟು ಕಾನೂನು ಸರಳವಾಗುತ್ತದೆ. ಕಾನೂನು ಪದವೀಧರರಿಗೆ ವಿಫುಲ ಅವಕಾಶಗಳಿವೆ. ವಕೀಲ ವೃತ್ತಿಯಲ್ಲಿ ಹೆಸರಿನ ಜೊತೆ ಹಣವು ಕೂಡಾ ಬರುತ್ತದೆ ಆದರೆ ನ್ಯಾಯಕ್ಕಾಗಿ ಬರುವ ಕಕ್ಷಿದಾರರಿಗೆ ನ್ಯಾಯವನ್ನು ಒದಗಿಸುವ ಮೂಲಕ ಮಾದರಿಯಾಗಬೇಕು ಎಂದರು. ಮುಖ್ಯ ಅತಿಥಿಯಾಗಿದ್ದ ನಿವೃತ್ತ ವಿಶೇಷ ಸಾರ್ವಜನಿಕ ಅಭಿಯೋಜಕ ಕೆ.ಜಿ.ಪುರಾಣಿಕಮಠ ಮಾತನಾಡಿ, ಕಾನೂನು ವೃತ್ತಿಯಲ್ಲಿ ಪ್ರಾಮಾಣಿಕತೆ, ಸೇವಾ ಮನೋಭಾವ ಮತ್ತು ವೃತ್ತಿ ನಿಷ್ಠೆ ಅತ್ಯಂತ ಮುಖ್ಯವಾಗಿದ್ದು, ಸಮಾಜದ ವಿಶ್ವಾಸ ಗಳಿಸುವುದು ಸಹ ಅಷ್ಟೇ ಪ್ರಾಮುಖ್ಯವಾಗಿದೆ ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಬಿವಿವಿ ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ಗುಣಮಟ್ಟದ ಕಾನೂನು ಶಿಕ್ಷಣ ನೀಡುವ ಮೂಲಕ ಸಮಾಜಮುಖಿ ವಕೀಲರನ್ನು ರೂಪಿಸುವ ಕಾರ್ಯವನ್ನು ಸಂಘ ಮಾಡುತ್ತಿದೆ ಎಂದು ಹೇಳಿದರು. ಕಾಲೇಜು ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಗುರುಬಸವ ಸೂಳಿಭಾವಿ, ಆಡಳಿತಾಧಿಕಾರಿ ವಿ.ಆರ್.ಶಿರೋಳ ಉಪಸ್ಥಿತರಿದ್ದರು. ಸಮಾರಂಭದಲ್ಲಿ 114 ಪದವೀಧರರಿಗೆ ಪದವಿ ಪ್ರದಾನ ಮಾಡಲಾಯಿತು. ಮಹಾವಿದ್ಯಾಲಯದ ಪ್ರಾಚಾರ್ಯೆ ಎಂ.ಪಿ. ಚಂದ್ರಿಕಾ ಸ್ವಾಗತಿಸಿದರು. ಶೃದ್ಧಾ ಕಮತಗಿ ಹಾಗೂ ನರಸಿಂಹರಾವ ದೇಸಾಯಿ ಕಾರ್ಯಕ್ರಮ ನಿರೂಪಿಸಿದರು. ಸುದೀಂಧ್ರ ವಂದಿಸಿದರು.

# ರೋಟರಿ ಸೆಂಟ್ರಲ್ ಕ್ಲಬ್ ಪದಗ್ರಹಣ ಕಾರ್ಯಕ್ರಮ

**ಗಂಗಾವತಿ:** ನಾಳೆ ಮುಂಜಾನೆ 10.30 ಗಂಟೆಗೆ ರೋಟರಿ ಕ್ಲಬ್ ಗಂಗಾವತಿ ಸೆಂಟ್ರಲ್ ನೂತನ ಪದಾಧಿಕಾರಿಗಳ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಹೊಸಪೇಟೆ ಮಾಜಿ ರೋಟರಿ ಜಿಲ್ಲಾ ಗವರ್ನರ್





ಆರ್. ಗೋಪಿನಾಥ್ ರವರು ಪದಗ್ರಹಣ ಕಾರ್ಯಕ್ರಮ ನೆರವೇರಿಸಲು ಆಗಮಿಸಲಿದ್ದಾರೆ. ನೂತನ ಅಧ್ಯಕ್ಷರಾಗಿ ಗಂಗಾವತಿ ನಗರದ ದಿ.ಶ್ರೀ, ಎಂ.ವಿಠ್ಠಲಶೆಟ್ಟಿ ತೆರಿಗೆ ಸಲಹೆಗಾರರ ಚಿರಂಜೀವಿಗಳಾದ ಎಂ.ಗುರುರಾಜ್ ವಿಠ್ಠಲಶೆಟ್ಟಿ ಇವರು ಅಧ್ಯಕ್ಷರಾಗಿ ಮತ್ತು ನಗರದ ಪ್ರಖ್ಯಾತ ವಾಣಿಜ್ಯೋದ್ಯಮಿಗಳಾದ ಕೊಡಗಲಿ ಕೃಷ್ಣಪ್ಪ ಇವರ ಚಿರಂಜೀವಿ ರಾಮಪ್ರಸಾದ್ ಕೊಡಗಲಿ ಅವರು ಕಾರ್ಯದರ್ಶಿಗಳಾಗಿ ಮತ್ತು ಪದಾಧಿಕಾರಿಗಳು ಅಧಿಕಾರ ಸ್ವೀಕಾರ ಪಡೆಯಲಿದ್ದಾರೆ. ನೂತನ ಸದಸ್ಯರಿಗೆ ಪದಗ್ರಹಣ ನೆರವೇರಿಸಲು ರೋಟರಿ ಜಿಲ್ಲಾ ಕಾರ್ಯದರ್ಶಿಗಳಾದ ಟಿ. ಆಂಜನೇಯವರು ಉಪಸ್ಥಿತರಿಲಿದ್ದಾರೆ. ಉಪಾಧ್ಯಕ್ಷರಾಗಿ ವಕೀಲರಾದ ಎಚ್.ಎಂ. ಮಂಜುನಾಥ್, ಡಾ. ಶ್ರೀಕಾಂತ್ ಬಾರಿಕರ್ ಸಹ ಕಾರ್ಯದರ್ಶಿಗಳಾಗಿ, ಸುರೇಶ್ ಚಂದ್ ಬಂಬ ಖಜಾಂಚಿ ಗಳಾಗಿ ಮತ್ತು ರೋಟರಿ ಹಿರಿಯ ಸದಸ್ಯರಾದ ಟಿ ಆಂಜನೇಯವರು ರೋಟರಿ ಜಿಲ್ಲಾ ಕಾರ್ಯದರ್ಶಿ ಮತ್ತು ಕ್ಲಬ್ ಟ್ರೈನರ್, ಮತ್ತು ಝೋನಲ್ ಅಧಿಕಾರಿಗಳಾಗಿ ವಾಸು ಕೊಳಗದ, ಪ್ರಕಾಶ್ ಚೋಪ್ರ, ಜೆ.ನಾಗರಾಜ,ಎ.ಶಿವಕುಮಾರ್, ನಿಕಟ ಪೂರ್ವ ಅಧ್ಯಕ್ಷರು ಎ. ಜಗದೀಶ್, ರೋಟರಿ ಫೌಂಡೇಶನ್ ಚೇರ್ಮನ್ ಮತ್ತು ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷರು ಎನ್. ಆರ್ .ಶ್ರೀನಿವಾಸ್, ಡಾ. ಎಸ್. ಬಿ. ಗೌಡರ, ಡಾಕ್ಟರ್ ಸಿ.ಬಿ.ಚಿನಿವಾಲ, ಡಾಕ್ಟರ್ ಪ್ರಸನ್ನ ಆಚಾರ್, ಶ್ರೀಧರ್ ನಾಯಕ್, ದರೋಜಿ ರಂಗಣ್ಣ, ಸುರೇಶ್ ಚಂದ ಬಂಬ, ದಿಲೀಪ್ ಮೋತಾ,ಸಲಹುದ್ದೀನ್ ವಿರೇಶ ಅರಿಕೇರಿ, ನರೇಶ್, ಚತ್ರಾಮ, ಮನೋಹರ್ ಸಿಂಗ್ ಪದಾಧಿಕಾರಿಗಳು ಪ್ರತಿಜ್ಞಾವಿಧಿ ಪಡೆಯಲಿದ್ದಾರೆ.

# ತೋಟಗಾರಿಕೆ ಇಲಾಖೆಯ ಪ್ರಗತಿ ಪರಿಶೀಲನೆ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಕ್ಷೇತ್ರ ಮಟ್ಟದಲ್ಲಿ ರೈತರೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ತಾಂತ್ರಿಕ ಸಲಹೆ ಹಾಗೂ ಮಾರ್ಗದರ್ಶನ ನೀಡುವ ಮೂಲಕ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಆದ್ಯತೆ ನೀಡಬೇಕೆಂದು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಜಾನನ ಬಾಲೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಜರುಗಿದ ತೋಟಗಾರಿಕೆ ಇಲಾಖೆಯ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ತೋಟಗಾರಿಕೆ ಬೆಳೆಗೆ ಜಿಲ್ಲೆಯಲ್ಲಿ ವಿಫುಲ ಅವಕಾಶಗಳಿದ್ದು, ಕ್ಷೇತ್ರದ ವ್ಯಾಪ್ತಿ ಹೆಚ್ಚಿಸುವ ಕೆಲಸವಾಗಬೇಕು. ಸರಕಾರದ ಯೋಜನೆಗಳ ಪ್ರಯೋಜನ ಅರ್ಹ ರೈತರಿಗೆ ಪಾರದರ್ಶಕವಾಗಿ ಹಾಗೂ ಸಕಾಲದಲ್ಲಿ ತಲುಪಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು. ನಿಗದಿತ ಗುರಿಗಳನ್ನು ಕಾಲಮಿತಿಯೊಳಗೆ ಸಾಧಿಸಲು ಅಗತ್ಯ ಕ್ರಮಕೈಗೊಳ್ಳಬೇಕೆಂದರು.

ಪ್ರಸಕ್ತ ಸಾಲಿನಲ್ಲಿ ಅನುಷ್ಠಾನಗೊಳ್ಳುತ್ತಿರುವ ಇಲಾಖೆಯ ಎಲ್ಲ ಯೋಜನೆಗಳ ಮಾಹಿತಿ ಹಾಗೂ



ಗುರಿ ಸಾಧನೆ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದು ಪರಿಶೀಲನೆ ಮಾಡಿದರು. ಹಣ್ಣು, ತರಕಾರಿ ಹಾಗೂ ಹೂ ಬೆಳೆಗಳ ಅಭಿವೃದ್ದಿ, ಸಂರಕ್ಷಿತ ಕೃಷಿ, ಹನಿ ನೀರಾವರಿ, ತೋಟಗಾರಿಗೆ ವಿಸ್ತರಣೆ, ರೈತರಿಗೆ ನೀಡಲಾಗುತ್ತಿರುವ ವಿವಿಧ ಅನುದಾನ ಸೌಲಭ್ಯಗಳು ಸೇರಿದಂತೆ ಇಲಾಖೆಯ ಪ್ರಮುಖ ಕಾರ್ಯಕ್ರಮಗಳ ಅನುಷ್ಠಾನದ ಕುರಿತು ವಿವರವಾಗಿ ಚರ್ಚಿಸಿದರು.

ಸರ್ಕಾರದ ಯೋಜನೆಗಳ ಬಗ್ಗೆ ರೈತರಲ್ಲಿ ವ್ಯಾಪಕ ಜಾಗೃತಿ ಮೂಡಿಸಬೇಕು. ಗ್ರಾಮ ಮಟ್ಟದಲ್ಲಿಯೇ ರೈತರಿಗೆ ಮಾಹಿತಿ ನೀಡಿ, ಅರ್ಹ ಫಲಾನುಭವಿಗಳನ್ನು ಗುರುತಿಸಿ ಯೋಜನೆಗಳ ಸೌಲಭ್ಯಗಳನ್ನು ತಲುಪಿಸುವ ಕಾರ್ಯವನ್ನು ಚುರುಕುಗೊಳಿಸಬೇಕು. ಯೋಜನೆ ಅನುಷ್ಠಾನದಲ್ಲಿ ಯಾವುದೇ ಲೋಪ ಅಥವಾ ವಿಳಂಬಕ್ಕೆ ಅವಕಾಶ ನೀಡಬಾರದು. ರೈತರಿಗೆ ತಾಂತ್ರಿಕ ಮಾರ್ಗದರ್ಶನ ನೀಡುವ ಕೆಲಸವಾಗಬೇಕು. ಇಲಾಖೆಗಳ ನಡುವಿನ ಸಮನ್ವಯ ಸಾಧಿಸಿ ತೋಟಗಾರಿಕೆ ಕ್ಷೇತ್ರದ ಅಭಿವೃದ್ದಿಗೆ ಪೂರಕವಾದ ಕಾರ್ಯಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಬೇಕು ಎಂದು ಬಾಲೆ ಹೇಳಿದರು.

ತೋಟಗಾರಿಕೆ ಜಂಟಿ ನಿರ್ದೇಶಕ ರವೀಂದ್ರ ಹಕಾಟಿ ಮಾತನಾಡಿ, ಜಿಲ್ಲೆಯಲ್ಲಿ ಒಟ್ಟು 64471 ಹೆಕ್ಟೆರ್ ತೋಟಗಾರಿಕೆ ವಿಸ್ತೀರ್ಣವಿದ್ದು, ಅದರಲ್ಲಿ ಹಣ್ಣು, ತರಕಾರಿ, ಸಾಂಬಾರು ಬೆಳೆಗಳು, ತೋಟದ ಬೆಳೆಗಳು, ಹೂವಿನ ಬೆಳೆಗಳು, ಔಷಧೀಯ ಸಸ್ಯಗಳು ಸುಗಂಧಿತ ಸಸ್ಯಗಳನ್ನು ಬೆಳೆಯಲಾಗುತ್ತಿದೆ. ಅದರಲ್ಲಿ ತೋಟಗಾರಿಕೆ ಇಲಾಖೆಯ ಕ್ಷೇತ್ರ, ನರ್ಸರಿಗಳ ಜಮೀನು 79.29 ಎಕರೆ ಇದೆ. 6 ರೈತ ಉತ್ಪಾದಕ ಸಂಘಗಳು ಕಾರ್ಯನಿರ್ವಹಿಸುತ್ತಿವೆ ಎಂದ ಅವರು, ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೊಜನೆ, ಸೋಲಾರ ಪಂಪಸೆಟ್, ಕೋಲ್ಡ ಸ್ಟೋರೆಜ್ ಯುನಿಟ್, ಹವಾಮಾನ ಆಧಾರಿತ ಘಟಕಗಳಡಿ ಸಹಾಯಧನ ಯೋಜನೆ, ಪಿಎಂ ಫಸಲ್ ಬಿಮಾ ಯೋಜನೆ, ಪಿಎಂ ಕೃಷಿ ಸಿಂಚಾಯಿ ಯೋಜನೆ, ಎಣ್ಣೆ ತಾಳೆ ಅಭಿವೃದ್ದಿ ಯೋಜನೆ ಸೇರಿದಂತೆ ಇತರೆ ಯೋಜನೆಗಳ ಬಗ್ಗೆ ಸಭೆಗೆ ತಿಳಿಸಿದರು.

ಸಭೆಯಲ್ಲಿ ಜಿ.ಪಂ ಉಪ ಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ ಸೇರಿದಂತೆ ಆಯಾ ತಾಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಹಾಗೂ ಹೋಬಳಿ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಕಾಂಗ್ರೆಸ್ಸಿನಿಂದ ವಿದ್ಯಾರ್ಥಿಗಳ ಗರ್ಜನೆ ಅಭಿಯಾನ: ಗಸ್ತಿ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಅನೇಕ ಪರೀಕ್ಷೆಯಲ್ಲಿ ಪ್ರಶ್ನೆಪತ್ರಿಕೆ ಸೋರಿಕೆ, ಅಕ್ರಮಗಳು ಹಾಗೂ ಪಾರದರ್ಶಕತೆಯ ಕೊರತೆಯಿಂದ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯಕ್ಕೆ ಧಕ್ಕೆ ಉಂಟಾಗಿದೆ ಎಂದು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ (ಕೆಪಿಸಿಸಿ) ಕಾನೂನು, ಮಾನವ ಹಕ್ಕುಗಳು ಮತ್ತು ಮಾಹಿತಿ ಹಕ್ಕು ವಿಭಾಗ ಜಿಲ್ಲಾಧ್ಯಕ್ಷ ಎನ್.ಬಿ.ಗಸ್ತಿ ಆರೋಪಿಸಿದ್ದಾರೆ.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೇಶದ ವಿವಿಧ ಭಾಗಗಳಲ್ಲಿ ನಡೆದಿರುವ ಅಕ್ರಮಗಳು, ಮಾಧ್ಯಮ ವರದಿಗಳು ಹಾಗೂ ತನಿಖಾ ಸಂಸ್ಥೆಗಳು ದಾಖಲಿಸಿರುವ ಪ್ರಕರಣಗಳನ್ನು ಉಲ್ಲೇಖಿಸಿ, ನೀಟ್ ಪರೀಕ್ಷೆಯ ವಿಶ್ವಾಸಾರ್ಹತೆ ಪ್ರಶ್ನಾರ್ಹವಾಗಿದೆ ಎಂದರು.

ಪ್ರಶ್ನೆಪತ್ರಿಕೆ ಸೋರಿಕೆ ಮತ್ತು ಅಕ್ರಮಗಳ ಕುರಿತು ಸಮಗ್ರ ಹಾಗೂ ನ್ಯಾಯಸಮ್ಮತ ತನಿಖೆ ನಡೆಸಬೇಕು. ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು. ವಿದ್ಯಾರ್ಥಿಗಳ ಭವಿಷ್ಯಕ್ಕೆ ಯಾವುದೇ ರೀತಿಯ ಅನ್ಯಾಯವಾಗದಂತೆ ಕೇಂದ್ರ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಬೇಕು. ಈ ಹಿನ್ನೆಲೆಯಲ್ಲಿ ಆಪರೇಷನ್ ಕ್ಲೀನ್ ಹೆಸರಿನಲ್ಲಿ



ರಾಜ್ಯಾದ್ಯಂತ ಪ್ರತಿಭಟನೆ ಹಮ್ಮಿಕೊಂಡಿದ್ದು, ಜೂನ್ 30ರಿಂದ 28 ನಗರಗಳಲ್ಲಿ ಕರಪತ್ರ ವಿತರಣೆ ಹಾಗೂ ಸಾರ್ವಜನಿಕ ಜಾಗೃತಿ ಕಾರ್ಯಕ್ರಮ, ಆಗಸ್ಟ್ 9ರಂದು ಜಿಲ್ಲಾಧಿಕಾರಿ ಕಚೇರಿಗಳ ಮುಂದೆ ಸಂವಿಧಾನ ಉಳಿಸಿ ಹೆಸರಿನಲ್ಲಿ ಪ್ರತಿಭಟನೆ ನಡೆಸಲಾಗುವುದು. ಅಗತ್ಯವಿದ್ದರೆ ಮುಂದಿನ ದಿನಗಳಲ್ಲಿ ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು. ಪ್ರತಿಭಟನೆಯ ಮೂಲಕ ವಿದ್ಯಾರ್ಥಿಗಳ ಹಿತಾಸಕ್ತಿಯನ್ನು ಕಾಪಾಡುವುದು ಹಾಗೂ ಪರೀಕ್ಷಾ ವ್ಯವಸ್ಥೆಯಲ್ಲಿ ಪಾರದರ್ಶಕತೆ ತರಬೇಕೆಂಬುದು ಕಾಂಗ್ರೆಸ್‌ನ ಉದ್ದೇಶವಾಗಿದೆ ಎಂದು ಎಂದು ತಿಳಿಸಿದರು.

ದೇಶಾದ್ಯಂತ ನಡೆಯುತ್ತಿರುವ ವಿದ್ಯಾರ್ಥಿಗಳ ಗರ್ಜನೆ ಅಭಿಯಾನದ ಅಂಗವಾಗಿ ಕೇಂದ್ರ ಶಿಕ್ಷಣ ಸಚಿವರು ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು ಹಾಗೂ ಪ್ರಶ್ನೆ ಪತ್ರಿಕೆ ಸೋರಿಕೆ ಮಾಫಿಯಾದ ಬಗ್ಗೆ ಸಮಗ್ರ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ಪ್ರಶ್ನೆ ಪತ್ರಿಕೆ ಸೋರಿಕೆ, ಪರೀಕ್ಷಾ ಅಕ್ರಮಗಳು, ಪರೀಕ್ಷೆಗಳ ರದ್ದು ಹಾಗೂ ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ನಡೆಯುತ್ತಿರುವ ಅನ್ಯಾಯದಿಂದ ಸಾರ್ವಜನಿಕ ಪರೀಕ್ಷಾ ವ್ಯವಸ್ಥೆಯ ಮೇಲಿನ ವಿಶ್ವಾಸ ಕುಸಿದಿದೆ ಎಂದು ಆರೋಪಿಸಿದರು. ವಿದ್ಯಾರ್ಥಿಗಳು ವರ್ಷಗಳ ಕಾಲ ಶ್ರಮಪಟ್ಟು ಪರೀಕ್ಷೆಗೆ ಸಿದ್ಧರಾಗುತ್ತಿದ್ದರೂ ಪ್ರಶ್ನೆ ಪತ್ರಿಕೆ ಸೋರಿಕೆಯಿಂದ ಅವರ ಭವಿಷ್ಯಕ್ಕೆ ಧಕ್ಕೆಯಾಗುತ್ತಿದೆ ಎಂದರು.

ನೀಟ್ ಯುಜಿ–2026 ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣದಲ್ಲಿ ಪ್ರಮುಖ ಆರೋಪಿಯನ್ನು ಸಿಬಿಐ ಬಂಧಿಸಿರುವುದನ್ನು ಉಲ್ಲೇಖಿಸಿದ ಕಾಂಗ್ರೆಸ್ ನಾಯಕರು, ಪರೀಕ್ಷಾ ಪ್ರಕ್ರಿಯೆಯಲ್ಲಿದ್ದವರ ಕೈಗೆ ಪ್ರಶ್ನೆ ಪತ್ರಿಕೆಗಳು ತಲುಪಿರುವುದು ವ್ಯವಸ್ಥೆಯ ಗಂಭೀರ ವೈಫಲ್ಯವನ್ನು ತೋರಿಸುತ್ತದೆ ಎಂದು ಹೇಳಿದರು. ಈ ಪ್ರಕರಣದಲ್ಲಿ ಕೇವಲ ಕೆಳಮಟ್ಟದ ಅಧಿಕಾರಿಗಳ ಮೇಲೆ ಹೊಣೆ ಹೊರಿಸುವ ಬದಲು ಉನ್ನತ ಮಟ್ಟದ ತನಿಖೆ ನಡೆಸಬೇಕು ಎಂದು ಆಗ್ರಹಿಸಿದರು.

# ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿ: ಮುನವಳ್ಳಿ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ವಿದ್ಯಾರ್ಥಿಗಳು ತಮ್ಮ ತಾಯಿಯ ಹೆಸರಿನಲ್ಲಿ ಸಸಿ ನೆಟ್ಟು ಬೆಳೆಸಿ ಪ್ರಕೃತಿಗೆ ಕೊಡುಗೆ ನೀಡಬೇಕು ಎಂದು ಹೇಮರಡ್ಡಿ ಮಲ್ಲಮ್ಮ ಪ್ರೌಢಶಾಲೆಯ ಮುಖ್ಯಗುರು ಎಂ.ಎ.ಮುನವಳ್ಳಿ ಹೇಳಿದರು.

ತಾಲೂಕಿನ ಬೆನಕಟ್ಟಿ ಗ್ರಾಮದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಸ್ಥಳೀಯ ಪ್ರೌಢಶಾಲೆಯಲ್ಲಿ ಶುಕ್ರವಾರ ಹಮ್ಮಿಕೊಳ್ಳಲಾಗಿದ್ದ ಪರಿಸರ ಜಾಗೃತಿ ಹಾಗೂ ಸಸಿ ನೆಡುವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮನುಷ್ಯ ಇಂದು ತನ್ನ ಸ್ವಾರ್ಥಕ್ಕಾಗಿ ಕಾಡು ಕಡಿದು ನಾಡು ಕಟ್ಟಲು ಹೊರಟಿದ್ದು ಇದು ಪರಿಸರ ನಾಶದ ಸಂಕೇತ ಎಂದ ಮುನವಳ್ಳಿ, ಪರಿಸರ ಸಂರಕ್ಷಣೆ ಮಾಡದೇ ಹೋದರೆ ಬರುವ ದಿನಗಳಲ್ಲಿ ಅದರ ಪ್ರತಿಕೂಲ ಪರಿಣಾಮ ಎದುರಿಸಬೇಕಾಗುತ್ತದೆ



ಎನ್ನುವ ಅರಿಯು ನಮಗಿರಬೇಕು ಎಂದರು.

ಅತಿಥಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಕೃಷಿ ಅಧಿಕಾರಿ ಬಸಯ್ಯ ಹಿರೇಮಠ ಮಾತನಾಡಿ, ಪರಿಸರವನ್ನು ನಾವು ಸಂರಕ್ಷಿಸಿದರೆ ಅದು ನಮ್ಮನ್ನು ರಕ್ಷಿಸುತ್ತದೆ. ವಿದ್ಯಾರ್ಥಿಗಳು ಪರಿಸರದ ಮಹತ್ವ ಅರಿತು ಸಸಿ ನೆಟ್ಟು ಬೆಳೆಸುವ ಜವಾಬ್ದಾರಿ ಹೊಂದಬೇಕು ಎಂದು ಹೇಳಿದರು. ಶಿಕ್ಷಕ ಕಿರಣ ನಿಂಬಲಗುಂದಿ, ವಿದ್ಯಾರ್ಥಿಗಳು ಶಾಲಾ ಆವರಣದಲ್ಲಿ ಒಂದೊಂದು ಗಿಡ ನೆಟ್ಟು ಬೆಳೆಸುವ ಸಂಕಲ್ಪ ಮಾಡಬೇಕು ಎಂದರು. ಶಿಕ್ಷಕರಾದ ಆರ್.ಎಂ.ಸನಗಿನ, ಬಿ.ಎಂ.ಕಾಮಾ, ಎಸ್.ಬಿ.ರಾಠೋಡ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಸೇವಾ ಪ್ರತಿನಿಧಿ ಸರೋಜಿನಿ ರಾಂಪುರ ವೇದಿಕೆಯಲ್ಲಿದ್ದರು.

ಕಾರ್ಯಕ್ರಮದ ನಂತರ ಶಾಲಾ ಆವರಣದಲ್ಲಿ 25 ಕ್ಕೂ ಹೆಚ್ಚು ಸಸಿಗಳನ್ನು ನೆಟ್ಟು ಅವುಗಳನ್ನು ಬೆಳೆಸುವ ಜವಾಬ್ದಾರಿಯನ್ನು ವಿದ್ಯಾರ್ಥಿಗಳಿಗೆ ವಹಿಸಲಾಯಿತು.

# ಎಸ್‌ಐಆರ್ ದುರ್ಬಳಕೆಗೆ ರಾಜ್ಯ ಸರ್ಕಾರದ ಕುಮ್ಮಕ್ಕು: ಬಿವೈವಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಅನ್ನು ದುರ್ಬಳಕೆ ಮಾಡಿಕೊಳ್ಳಲು ರಾಜ್ಯ ಸರ್ಕಾರ ಕುಮ್ಮಕ್ಕು ನೀಡುತ್ತಿದೆ. ಬಿಎಲ್‌ಒಗಳ ಮೇಲೆ ಒತ್ತಡ ಹೇರಲಾಗುತ್ತಿದೆ ಎಂದು ಶಾಸಕ ಹಾಗೂ ರಾಜ್ಯ ಬಿಜೆಪಿ ಅಧ್ಯಕ್ಷ ಬಿ ವೈ ವಿಜಯೇಂದ್ರ ಅವರು ಆರೋಪಿಸಿದ್ದಾರೆ.

ರಾಜ್ಯದಲ್ಲಿ ಆರಂಭವಾಗಿರುವ ಎಸ್‌ಐಆರ್‌ನಲ್ಲಿ ಆಗುತ್ತಿರುವ ಅವ್ಯವಸ್ಥೆಯನ್ನು ಸರಿಪಡಿಸಬೇಕು ಎಂದು ಕೋರಿ ಕೇಂದ್ರ ಚುನಾವಣಾ ಆಯೋಗಕ್ಕೆ ಮನವಿ ಸಲ್ಲಿಸಿದ ನಂತರ ಅವರು ಮಾಧ್ಯಮಗಳೊಂದಿಗೆ ಮಾತನಾಡಿ, ರಾಜ್ಯ ಸರ್ಕಾರ ಅಧಿಕಾರಿಗಳನ್ನು ದುರ್ಬಳಕೆ ಮಾಡುತ್ತಿದೆ. ಎಸ್‌ಐಆರ್ ನಲ್ಲಿ ಅಧಿಕಾರಿಗಳು ಮನೆಮನೆಗೆ ಹೋಗಿ ಎನ್ಯೂಮರೇಷನ್ ಫಾರಂಗಳನ್ನು ನೀಡಬೇಕು. ಆದರೆ ಬಿಎಲ್‌ಒ ಗಳನ್ನು ಕಲ್ಯಾಣ ಮಂಟಪ, ಚೌಲ್ಟ್ರಿ, ಮಸೀದಿಗಳಲ್ಲಿ ಕುಳಿತು ನಮೂನೆಗಳನ್ನು ಹಂಚುತ್ತಿದ್ದಾರೆ. ಈ ಬಗ್ಗೆ ಕ್ರಮ ಕೈಗೊಳ್ಳಬೇಕು ಎಂದು ಆಯೋಗಕ್ಕೆ ಮನವಿ ಸಲ್ಲಿಸುರುವುದಾಗಿ ಹೇಳಿದರು.

ಬಿಎಲ್‌ಒಗಳನ್ನು ಕೆಲವು ಶಾಸಕರು ತಮ್ಮ ಕಚೇರಿಯಲ್ಲಿ ಕೂರಿಸಿಕೊಂಡು ಕೆಲಸ ಮಾಡಿಸುತ್ತಿದ್ದಾರೆ. ಅಧಿಕಾರಿಗಳ ಮೇಳೆ ಶಾಸಕರು ಒತ್ತಡ ಹೇರುತ್ತಿದ್ದಾರೆ. ಇದನ್ನೆಲ್ಲ ಆಯುಕ್ತರ ಗಮನಕ್ಕೆ ತಂದಿದ್ದೇವೆ. ಆದ್ದರಿಂದ ರಾಜ್ಯ ಸರ್ಕಾರಕ್ಕೆ ಎಚ್ಚರಿಕೆ ನೀಡಬೇಕು. ಎಲ್ಲೆಲ್ಲಿ ಈ ರೀತಿ ಎಸ್‌ಐಆರ್ ಎಡವಟ್ಟು ಆಗಿದೆ ಅಲ್ಲಿ ಹೊಸದಾಗಿ ಎಸ್‌ಐಆರ್ ಆರಂಭಿಸಬೇಕು ಎಂದು ಆಗ್ರಹಿಸಿರುವುದಾಗಿ ತಿಳಿಸಿದರು.

ಈಗಾಗಲೇ ಕೇಂದ್ರ ಚುನಾವಣಾ ಆಯೋಗದ ಎಸ್‌ಐಆರ್ ಜೊತೆಗೆ ಸಮಾನಾಂತರವಾಗಿ ಜಿಬಿಎ



ವ್ಯಾಪ್ತಿಯಲ್ಲಿ ರಾಜ್ಯ ಚುನಾವಣಾ ಆಯೋಗದಿಂದ ಎಸ್‌ಐಆರ್ ನಡೆಸಲಾಗುತ್ತಿದೆ. ಇದರಿಂದ ಮತದಾರರಲ್ಲಿ ಗೊಂದಲ ಸೃಷ್ಟಿಯಾಗುತ್ತಿದೆ. ಎಸ್‌ಐಆರ್ ಉದ್ದೇಶವನ್ನೇ ರಾಜ್ಯ ಸರ್ಕಾರ ಹಾಳುಗೆಡವಿದೆ. ಜಯನಗರ ವಿಧಾನಸಭಾ ಕ್ಷೇತ್ರದಲ್ಲಿ ಹಂಚುತ್ತಿರುವ ಫಾರಂಗಳಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರ ಫೊಟೋಗಳನ್ನು ಹಾಕಿದ್ದಾರೆ. ಇದನ್ನು ಆಯೋಗದ ಗಮನಕ್ಕೆ ತಂದಿದ್ದೇವೆ ಎಂದರು.

ಎಸ್‌ಐಆರ್ ಅವ್ಯವಸ್ಥೆಯನ್ನು ಗಂಭೀರವಾಗಿ ಪರಿಗಣಿಸಿದ ಆಯೋಗ ವಿಡಿಯೊ ಕಾನ್ಫರೆನ್ಸ್ ಮಾಡಿ ಸರಿಯಾದ ರೀತಿ ಮಾಡಿ ಎಂದು ತಾಕೀತು ಮಾಡಿದ್ದರೂ ಪಾಲಿಸಲಾಗುತ್ತಿಲ್ಲ. ನಮ್ಮ ದೂರಿಗೆ ಸ್ಪಂದಿಸಿರುವ ಆಯೋಗ ಸರಿಪಡಿಸುವ ಭರವಸೆ ನೀಡಿದೆ ಎಂದು ವಿವರಿಸಿದರು.

**ಕಾಂಗ್ರೆಸ್ ಕತ್ತೆಗಳೇ ಕಾರಣ:** ರಾಜ್ಯದಲ್ಲಿನ ಎಸ್‌ಐಆರ್ ದುರ್ಬಳಕೆಗೆ ಕಾಂಗ್ರೆಸ್ ಕತ್ತೆಗಳೇ ಕಾರಣ. ಕೇಂದ್ರ ಚುನಾವಣಾ ಆಯೋಗವು ಸರಿಯಾದ ರೀತಿಯಲ್ಲಿ ಕೆಲಸ ಮಾಡುತ್ತಿದೆ. ಕಾಂಗ್ರೆಸ್ ಕತ್ತೆಗಳು ಇಡೀ ವ್ಯವಸ್ಥೆಯನ್ನು ಬುಡಮೇಲು ಮಾಡಲು ಹೊರಟವೆ. ಈ ಕತ್ತೆಗಳೇ ಎಸ್‌ಐಆರ್ ಅನ್ನು ಹಾಳುಗೆಡವುತ್ತಿವೆ. ಬಿಎಲ್‌ಒ ಗಳ ಗಮನಕ್ಕೆ ಬರದಂತೆ ಶಾಸಕರ ಕಚೇರಿಯಲ್ಲಿ ಬಿಎಲ್‌ಒಗಳು ಕುಳಿತರೆ ಏನೂ ಮಾಡಲಾಗದು. ಅಧಿಕಾರಿಗಳನ್ನು ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಒತ್ತಾಯಪೂರ್ವಕವಾಗಿ ಬಳಸಿಕೊಳ್ಳುತ್ತಿದ್ದಾರೆ ಎಂದರು. ಕೆಲವು ಕಡೆ ಫಾರಂಗಳನ್ನು ಕಾಂಗ್ರೆಸ್ ಕಾರ್ಯಕರ್ತರು ಅಧಿಕಾರಿಗಳಿಂದ ಕಸಿದುಕೊಂಡು ಹೋಗಿ ಹಂಚುತ್ತಿದ್ದಾರೆ ಎಂದು ದೂರಿದರು.

ಬೆಂಗಳೂರು ದಕ್ಷಿಣ ಜಿಲ್ಲಾಧ್ಯಕ್ಷ ಮತ್ತು ಶಾಸಕ ಸಿ.ಕೆ.ರಾಮಮೂರ್ತಿ ಅವರು ಮಾತನಾಡಿ, ಜಯನಗರದಲ್ಲೂ ಎಸ್‌ಐಆರ್ ಅವ್ಯವಸ್ಥೆ ಆಗಿದೆ. ಆಯೋಗಕ್ಕೆ ದೂರು ನೀಡಿದ್ದೇವೆ. ಜಿಬಿಎ ಅಧಿಕಾರಿಗಳಿಗೆ ಸಹ ದೂರು ನೀಡಿದ್ದೇವೆ. ಬಿಎಲ್‌ಒಗಳು ಬೇಕೆಂದರಲ್ಲಿ ಅರ್ಜಿ ಹಂಚುತ್ತಿದ್ದಾರೆ. ಆದ್ದರಿಂದ ಯಾರೇ ಕರ್ತವ್ಯಲೋಪ ಮಾಡಿದ್ದರೂ ಅಂತಹವರನ್ನು ಅಮಾನತು ಮಾಡಬೇಕು ಎಂದರು. ಇಂತಹ ಅಕ್ರಮ ಎಲ್ಲೆಲ್ಲಿ ಆಗಿದೆ ಅಲ್ಲಿ ಮತ್ತೆ ಎಸ್‌ಐಆರ್ ಮಾಡಬೇಕು ಎಂದು ಆಗ್ರಹಿಸಿದರು.

# ದೇವಿಯ ಚಿನ್ನ ಬೆಳ್ಳಿ ಕಳವು



**ಮುದಗಲ್:** ಪಟ್ಟಣ ಸಮೀಪದ ಆರ್ಯಭೋಗಾಪೂರು ಗ್ರಾಮದಲ್ಲಿ ಕಳ್ಳರು ದೇವಸ್ಥಾನದ ಬಾಗಿಲು ಮುರಿದು ದೇವಿಯ ಚಿನ್ನ, ಬೆಳ್ಳಿ ಕಳ್ಳತನ ಮಾಡಿರುವ ಘಟನೆ ಜರುಗಿದೆ.

ಆರ್ಯಭೋಗಾಪುರ ಗ್ರಾಮದ ದುರ್ಗಾದೇವಿಯ 10 ಗ್ರಾಂ. ಚಿನ್ನ ಹಾಗೂ 110 ಗ್ರಾಂ. ಬೆಳ್ಳಿ ಕಳ್ಳರು ಕಳ್ಳತನ ಮಾಡಿಕೊಂಡು ಹೋಗಿದ್ದಾರೆ. ಆಭರಣ ಕಳ್ಳತನದಿಂದ ಗ್ರಾಮದಲ್ಲಿ ಆತಂಕದ ವಾತಾವರಣ ಮೂಡಿದೆ. ಸ್ಥಳಕ್ಕೆ ಮುದಗಲ್ ಠಾಣೆ ಪೊಲೀಸರ ಭೇಟಿ, ಪರಿಶೀಲನೆ ಮಾಡಿದ್ದಾರೆ ಗ್ರಾಮಸ್ಥರು ಮಾಹಿತಿ ನೀಡಿದರು.

# ವಿ ಆರ್ ದೇಶಪಾಂಡೆ ಮೆಮೋರಿಯಲ್ ಟ್ರಸ್ಟ್‌ನ ಸಂಸ್ಥಾಪಕ ದಿನಾಚರಣೆ




**ಹಳಿಯಾಳ:** 1998 ರಲ್ಲಿ ಸ್ಥಾಪನೆಯಾದ ವಿ ಆರ್ ದೇಶಪಾಂಡೆ ಮೆಮೋರಿಯಲ್ ಟ್ರಸ್ಟ್ ಶಿಕ್ಷಣ,ಧಾರ್ಮಿಕ ಆರೋಗ್ಯ, ಮಹಿಳಾ ಸಬಲೀಕರಣ ಕೃಷಿ, ಸ್ವಯಂ ಉದ್ಯೋಗ ಮುಂತಾದ ಕ್ಷೇತ್ರಗಳಲ್ಲಿ ನಿರಂತರವಾಗಿ ಸಮಾಜಮುಖಿಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಪ್ರಸಾದ ಆರ್ ದೇಶಪಾಂಡೆ ಪ್ರಸ್ತಾವಿಕವಾಗಿ ಹೇಳಿದರು.

ಇಂದು ಆರ್ ಶೆಟ್ಟಿ ಭವನದಲ್ಲಿ ದಿ. ವಿಶ್ವನಾಥ್ ಆರ್ ದೇಶಪಾಂಡೆಯವರ ಜನ್ಮದಿನವಾದ ಜುಲೈ ಒಂದನ್ನು ಸಂಸ್ಥೆಯ ಸ್ಥಾಪಕರ ದಿನಾಚರಣೆಯನ್ನಾಗಿ ಆಚರಿಸಲಾಯಿತು.

ಈ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಸಕರು ಹಾಗೂ ಸಂಸ್ಥೆಯ ಅಧ್ಯಕ್ಷರಾದ ಆರ್ ವಿ ದೇಶಪಾಂಡೆ ನಮ್ಮ ಸಂಸ್ಥೆಯಿಂದ ಸುಮಾರು 28,000 ಯುವಕ ಯುವತಿಯರಿಗೆ ಉಚಿತ ಸ್ವ ಉದ್ಯೋಗ ತರಬೇತಿ ಪಡೆದುಕೊಂಡಿದ್ದು ಇದರಲ್ಲಿ ಪ್ರತಿಶತ 70ರಷ್ಟು ಯುವಕರು ತಮ್ಮ ಸ್ವಉದ್ಯೋಗದಲ್ಲಿ ತೊಡಗಿಕೊಂಡು ಜೀವನ ನಡೆಸುತ್ತಿದ್ದಾರೆ ಎಂದು ಸ್ಮರಿಸಿದರು. ಅದಲ್ಲದೆ ಸಂಸ್ಥೆಯ ಸಂಸ್ಥಾಪಕ ದಿನಾಚರಣೆ ಅಂಗವಾಗಿ ಜಿಲ್ಲೆಯಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರನ್ನು ಸನ್ಮಾನಿಸುವುದು ರೂಢಿ.

ಉದ್ಯಮ ಕ್ಷೇತ್ರದಲ್ಲಿ ಮೈಲಿಗಲ್ಲು ಸಾಧಿಸಿದ ಪೂರ್ಣಿಮಾ ಹೆಗಡೆ, ಸುಯೋಗಾಶ್ರಮದ ಮೂಲಕ ವಯೋವೃದ್ಧರಿಗೆ ಆಶ್ರಯದಾತರಾದ ಲತಿಕಾ ಭಟ್ ಮತ್ತು ಜಿಲ್ಲೆಯ ಉದಯೋನ್ಮುಖ ಕ್ರೀಡಾ ಪ್ರತಿಭೆಗಳು, ಎಸ್ ಎಸ್ ಎಲ್ ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ವಿಶೇಷ ಸಾಧನೆಗೈದ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಈ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಓಸಾಟ್ ಸಂಸ್ಥಾಪಕರಾದ ವಾದಿರಾಜ ಭಟ್, ಧರ್ಮದರ್ಶಿಗಳಾದ ಶ್ರೀಮತಿ ರಾಧಾ ದೇಶಪಾಂಡೆ, ಪ್ರಸಾದ್ ದೇಶಪಾಂಡೆ, ಶ್ಯಾಮ್ ಕಾಮತ್ ಉಪಸ್ಥಿತರಿದ್ದರು.

# AI ಗುಲಾಮರಾಗದಿರಲು ಧರ್ಮದ ಆಧಾರದ ಜ್ಞಾನ ಅಗತ್ಯ: ಬಸವರಾಜ ಬೊಮ್ಮಾಯಿ

• ಮಲ್ಲಮ್ಮ ನುಡಿ ವಾರ್ತೆ ಗದಗ

ಆಧುನಿಕ ಜಗತ್ತಿನ ತಂತ್ರಜ್ಞಾನ ಹಾಗೂ ಕೃತಕ ಬುದ್ಧಿಮತ್ತೆಯ ಈ ಕಾಲದಲ್ಲಿ ಮನುಷ್ಯನು ತಾನು ಸೃಷ್ಟಿಸಿರುವ ತಂತ್ರಜ್ಞಾನಕ್ಕೆ ಗುಲಾಮರಾಗಬಾರದು ಎಂದರೆ ನಮ್ಮ ಮೂಲ ಧರ್ಮದ ಆಧಾರದ ಮೇಲಿರುವ ಜ್ಞಾನವನ್ನು ಗಟ್ಟಿಯಾಗಿ ಅಳವಡಿಸಿಕೊಳ್ಳಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ತಿಳಿಸಿದರು.

ಇಂದು ಗದಗ ತಾಲೂಕಿನ ಹರ್ಲಾಪೂರದ ಹಠಯೋಗಿ ಶ್ರೀ ಗುರು ಕೊಟ್ಟೂರೇಶ್ವರರ 138 ನೇಯ ಜಾತ್ರಾ ಮಹೋತ್ಸವದ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು. "ಹರ್ಲಾಪುರ ಗ್ರಾಮ ಹಾಗೂ ಇಲ್ಲಿನ ಹಿರಿಯರೊಂದಿಗೆ ನನಗೆ ಸುದೀರ್ಘವಾದ ಹಾಗೂ ಅತ್ಯಂತ ಅನ್ಯೋನ್ಯವಾದ ಸಂಬಂಧವಿದೆ. ನಾನು ಎರಡು ಬಾರಿ ವಿಧಾನ ಪರಿಷತ್ ಚುನಾವಣೆಗೆ ಸ್ಪರ್ಧಿಸಿದ್ದ ಸಂದರ್ಭದಲ್ಲಿ ಇಲ್ಲಿನ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಸದಸ್ಯರು ಹಾಗೂ ಗ್ರಾಮದ ಎಲ್ಲಾ ಹಿರಿಯರು ನನಗೆ ಸಂಪೂರ್ಣವಾಗಿ ಬೆಂಬಲ ನೀಡಿದ್ದರು. ಅದನ್ನು ನಾನು ನನ್ನ ಜೀವನದಲ್ಲಿ ಎಂದಿಗೂ ಮರೆಯಲು ಸಾಧ್ಯವಿಲ್ಲ" ಎಂದು ನುಡಿದರು.



"ಕಳೆದ ಕೆಲವು ದಿನಗಳಿಂದ ಇಲ್ಲಿನ ಹಿರಿಯರು ಹಾಗೂ ಯುವಕರು ಮಠಕ್ಕೆ ಬರುವಂತೆ ನನಗೆ ಆಹ್ವಾನ ನೀಡುತ್ತಿದ್ದರು. ಆದರೆ ಸಮಯ ಕೂಡಿಬಂದಿರಲಿಲ್ಲ. ಈ ಬಾರಿಯ ಜಾತ್ರಾ ಮಹೋತ್ಸವದ ಪ್ರಾರಂಭೋತ್ಸವಕ್ಕೆ ಬರಬೇಕೆಂದುಕೊಂಡಿದ್ದರೂ ಅನಿವಾರ್ಯ ಕಾರಣಗಳಿಂದ ಸಾಧ್ಯವಾಗಲಿಲ್ಲ. ಆದಾಗ್ಯೂ, ಮಠಕ್ಕೆ ಭೇಟಿ ನೀಡಿ ಪರಮಪೂಜ್ಯರ ಆಶೀರ್ವಾದ ಪಡೆಯಲೇಬೇಕು ಎಂಬ ಹಠ ಹಾಗೂ ಹಂಬಲ ನನ್ನದಾಗಿತ್ತು. ಜೊತೆಗೆ ನಮ್ಮ ಆತ್ಮೀಯರು, ಮಾಜಿ ಸಚಿವರಾದ ಕಳಕಪ್ಪ ಬಂಡಿ ಅವರ ಒತ್ತಾಸೆಯ ಮೇರೆಗೆ ಇಂದು ಇಲ್ಲಿಗೆ ಬಂದಿದ್ದೇನೆ" ಎಂದು ತಿಳಿಸಿದರು.

ಮಠದ ಇತಿಹಾಸವನ್ನು ಶ್ಲಾಘಿಸಿದ ಅವರು, "ಈ ಕೊಟ್ಟೂರೇಶ್ವರ ಮಠಕ್ಕೆ ಸುಮಾರು ಎರಡು ನೂರು ವರ್ಷಗಳ ಸುದೀರ್ಘ ಇತಿಹಾಸವಿದೆ. ಸುತ್ತಮುತ್ತಲಿನ ಹತ್ತಾರು ಹಳ್ಳಿಗಳ ಜನರಿಗೆ ಇದು ಪವಿತ್ರ ಧಾರ್ಮಿಕ ಕೇಂದ್ರವಾಗಿದೆ. ಪರಮಪೂಜ್ಯರು ಮಠವನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸಿ ಭಕ್ತರಿಗೆ ಅನುಕೂಲ ಮಾಡಿಕೊಟ್ಟಿದ್ದಾರೆ. ಸ್ಥಳೀಯ ಹಿರಿಯರು ಮತ್ತು ಭಕ್ತರ ಸಹಕಾರದಿಂದ ಮಠವು ಇನ್ನಷ್ಟು ಅಭಿವೃದ್ಧಿ ಹೊಂದುತ್ತಿರುವುದು ಶ್ಲಾಘನೀಯ" ಎಂದರು.

ಮೂನ್ನೂರು ವರ್ಷಗಳ ಭವ್ಯ ಇತಿಹಾಸವಿರುವ ಈ ಶ್ರೀಮಠಕ್ಕೆ ಸುತ್ತಮುತ್ತಲಿನ ಹತ್ತಾರು ತಲೆಮಾರುಗಳ ಭಕ್ತರು ನಡೆದುಕೊಳ್ಳುತ್ತಿದ್ದಾರೆ. ಹಿಂದಿನ ಪರಮಪೂಜ್ಯರು ಸ್ಥಳೀಯ ಹಿರಿಯರು ಹಾಗೂ ಭಕ್ತರ ಸಹಾಯದಿಂದ ಮಠವನ್ನು ಅಭಿವೃದ್ಧಿಪಡಿಸಿದ್ದಾರೆ. ಇಂದಿನ ಕಲಿಯುಗದಲ್ಲೂ ಗುರುಗಳು ಸ್ವತಃ ಕೃಷಿ ಕಾಯಕ ಮಾಡುತ್ತಿರುವುದು ಇಡೀ ಸಮಾಜಕ್ಕೆ ಆದರ್ಶಪ್ರಾಯವಾಗಿದೆ. ವೇದ ಹಾಗೂ ವಚನಗಳನ್ನು ಅರ್ಥೈಸಿಕೊಳ್ಳಲು ಸಾಧ್ಯವಾಗದವರು ಪುರಾಣಗಳ ಮೂಲಕ ತತ್ವಗಳನ್ನು, ಮಹಾಮಹಿಮರ ಜೀವನದ ಆದರ್ಶಗಳನ್ನು ಸುಲಭವಾಗಿ ತಿಳಿದುಕೊಳ್ಳಬಹುದು ಎಂದರು.

**ಕೃತಕ ಬುದ್ಧಿಮತ್ತೆ ಒಂದು ಸವಾಲು:** "ಮನುಷ್ಯನಿಗೆ ಭಗವಂತ ಜ್ಞಾನ ಕೊಟ್ಟಿದ್ದಾನೆ. ಜ್ಞಾನದಿಂದ ಅಕ್ಷರ ಜ್ಞಾನ, ಅದರಿಂದ ವಿಜ್ಞಾನ, ವಿಜ್ಞಾನದಿಂದ ತಂತ್ರಜ್ಞಾನ ಬೆಳೆಯಿತು. ಮೊದಲು ಕಂಪ್ಯೂಟರ್ ನಮ್ಮ ಶಿಷ್ಯನಂತೆ ಕೆಲಸ ಮಾಡುತ್ತಿತ್ತು, ಆದರೆ ಈಗ ಕೃತಕ ಬುದ್ಧಿಮತ್ತೆ ಬಂದಿರುವುದರಿಂದ ಶಿಷ್ಯನೇ ಗುರುವಾಗುವ ಪರಿಸ್ಥಿತಿ ನಿರ್ಮಾಣವಾಗಿದೆ" ಎಂದು ಬೊಮ್ಮಾಯಿ ಕಳವಳ ವ್ಯಕ್ತಪಡಿಸಿದರು.

ಜಗತ್ತಿನಲ್ಲಿ ಇಂದು ಕ್ಷುಲ್ಲಕ ಕಾರಣಗಳಿಗಾಗಿ ಯುದ್ಧಗಳು ನಡೆದು ಅಮಾಯಕರು ಸಾಯುತ್ತಿದ್ದಾರೆ. ಯುದ್ಧದಿಂದ ಯಾರೂ ಗೆಲ್ಲಲು ಸಾಧ್ಯವಿಲ್ಲ, ಅಲ್ಲಿ ಮಾನವೀಯತೆ ಮಾತ್ರ ಸೋಲುತ್ತದೆ. ಆಟಂ ಬಾಂಬ್ ಅನ್ನು ವಿಜ್ಞಾನಿ ತಯಾರಿಸಿದರೂ ಅದನ್ನು ಎಲ್ಲಿ, ಯಾವಾಗ ಬಳಸಬೇಕು ಎಂದು ರಾಜಕಾರಣಿಗಳೇ ನಿರ್ಧರಿಸುತ್ತಾರೆ. ಆದ್ದರಿಂದಲೇ ಆಡಳಿತ ನಡೆಸುವವರಿಗೆ 'ದಯೆ' ಇರಬೇಕು ಎಂದು ಪ್ಲೇಟೋನ 'ರಾಜನು ತತ್ವಜ್ಞಾನಿಯಾಗಿರಬೇಕು' ಎಂಬ ನುಡಿಯನ್ನು ಅವರು ಸ್ಮರಿಸಿದರು.

**ಸಮುದಾಯ ಭವನಕ್ಕೆ 10 ಲಕ್ಷ ರೂ. ಅನುದಾನ ಘೋಷಣೆ:** "ಮಠಕ್ಕೆ ಪ್ರತಿದಿನ ಸುಮಾರು ಹತ್ತು ಸಾವಿರ ಭಕ್ತರು ಭೇಟಿ ನೀಡುತ್ತಿದ್ದು, ಇಲ್ಲಿ ಸಮುದಾಯ ಭವನದ ಅವಶ್ಯಕತೆ ಇದೆ ಎಂದು ಭಕ್ತರು ಮನವಿ ಮಾಡಿದ್ದಾರೆ. ಭಕ್ತರ ಅನುಕೂಲಕ್ಕಾಗಿ ನನ್ನ ಸಂಸದರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯಿಂದ ಒಟ್ಟು 10 ಲಕ್ಷ ರೂಪಾಯಿಗಳನ್ನು (ಎರಡು ಕಂತುಗಳಲ್ಲಿ ತಲಾ 5 ಲಕ್ಷ ರೂ.) ನೀಡುವುದಾಗಿ ಬಸವರಾಜ ಬೊಮ್ಮಾಯಿ ಅವರು ಇದೇ ಸಂದರ್ಭದಲ್ಲಿ ಪ್ರಕಟಿಸಿದರು." ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಶ್ರೀ ನಿರಂಜನ ಪ್ರಣವ ಸ್ವರೂಪಿ ಅಭಿನವ ಡಾ. ಕೊಟ್ಟೂರೇಶ್ವರ ಮಹಾಸ್ವಾಮಿಗಳು ವಹಿಸಿದ್ದರು. ವೇದಿಕೆಯಲ್ಲಿ ಮಾಜಿ ಸಚಿವ ಕಳಕಪ್ಪ ಬಂಡಿ, ಬಿಜೆಪಿ ಜಿಲ್ಲಾ ಅಧ್ಯಕ್ಷ ರಾಜು ಕುರುಡಗಿ, ಮುಖಂಡರಾದ ಉಮೇಶ್ ಹಳ್ಳಾಪುರ, ಹಂದಪ್ಪ ಆರುಗೇರಿ ಸೇರಿದಂತೆ ಹಳ್ಳಾಪುರ ಗ್ರಾಮದ ಹಿರಿಯರು, ಯುವಕರು ಹಾಗೂ ಅಪಾರ ಸಂಖ್ಯೆಯ ಭಕ್ತಾದಿಗಳು ಉಪಸ್ಥಿತರಿದ್ದರು.

# ಬಿಳಿಮಲೆ ಕ್ಷಮಾಯಾಚನೆಗೆ ಆಗ್ರಹ



• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ಕೇಂದ್ರ ಸರ್ಕಾರದ ಶಿಕ್ಷಣ ನೀತಿಯನ್ನು ವಿರೋಧಿಸುವ ಭರದಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪ್ರೊ. ಪುರುಷೋತ್ತಮ ಬಿಳಿಮಲೆ ಅವರು "ಕಾವೇರಿ ಮಾತ್ರ ನಮ್ಮ ಅಸ್ಮಿತೆ, ಕೃಷ್ಣಾ ಅಲ್ಲ" ಎಂದು ಹೇಳಿಕೆ ನೀಡಿರುವುದು ಈಗ ತೀವ್ರ ಸ್ವರೂಪದ ವಿವಾದಕ್ಕೆ ಕಾರಣವಾಗಿದೆ. ಈ ಹೇಳಿಕೆಯು ಅಖಂಡ ಕರ್ನಾಟಕವನ್ನು ಒಡೆಯುವಂತಿದ್ದು, ಸಮಗ್ರ ಕರ್ನಾಟಕದ ಜನತೆಗೆ ತೀವ್ರ ನೋವುಂಟು ಮಾಡಿದೆ ಎಂದು ಹಸಿರು ಸೇನೆ ಆಕ್ರೋಶ ವ್ಯಕ್ತಪಡಿಸಿದೆ.

ಹೌದ ವಿಜಯಪುರದಲ್ಲಿ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿದ ಹಸಿರು ಸೇನೆಯ ಪದಾಧಿಕಾರಿಗಳು, ಪ್ರೊ. ಬಿಳಿಮಲೆ ಅವರ ಹೇಳಿಕೆಯನ್ನು ತೀವ್ರವಾಗಿ ಖಂಡಿಸಿದ್ದಾರೆ.

ರಾಜ್ಯದ ಶೇಕಡಾ 60 ಕ್ಕೂ ಹೆಚ್ಚು ಜನರ ಕುಡಿಯುವ ನೀರು ಹಾಗೂ ಕೃಷಿಯ ಜೀವನಾಡಿಯಾಗಿರುವ ಕೃಷ್ಣಾ ನದಿಯ ಮಹತ್ವವನ್ನು ಕಡೆಗಣಿಸಿರುವುದು ಉತ್ತರ ಕರ್ನಾಟಕದ ಬಗೆಗಿನ ಅಸಡ್ಡೆ ಮತ್ತು ಅಧ್ಯಯನದ ಕೊರತೆಯನ್ನು ಎತ್ತಿ ತೋರಿಸುತ್ತದೆ.

ದ್ವಾಪರ ಯುಗದ ಕೃಷ್ಣನಿಗೂ, ಕೃಷ್ಣಾ ನದಿಗೂ ಸಂಬಂಧವಿಲ್ಲ. ಸುಮಾರು 1400 ಕಿ.ಮೀ ಸಮೃದ್ಧವಾಗಿ ಹರಿಯುವ, ಕಪ್ಪು ಮಣ್ಣಿನಿಂದ ಕೂಡಿದ ಈ ನದಿಗೆ ಅದರದ್ದೇ ಆದ ಭವ್ಯ ಇತಿಹಾಸವಿದೆ. ಇನ್ನು ಕೃಷ್ಣಾ ಮತ್ತು ಕಾವೇರಿ ಇವೆರಡೂ ಕರ್ನಾಟಕದ ಎರಡು ಕಣ್ಣುಗಳಿದ್ದಂತೆ. ಒಬ್ಬ ಜವಾಬ್ದಾರಿಯುತ ಚಿಂತಕ ಹಾಗೂ ಲೇಖಕರಿಂದ ಇಂತಹ ಬೇಜವಾಬ್ದಾರಿ ಹೇಳಿಕೆ ನಿರೀಕ್ಷಿಸಿರಲಿಲ್ಲ ಎಂದು ಪ್ರತಿಭಟನಾಕಾರರು ಬೇಸರ ವ್ಯಕ್ತಪಡಿಸಿದ್ದು , ಪ್ರೊ. ಪುರುಷೋತ್ತಮ ಬಿಳಿಮಲೆ ಅವರು ಕೂಡಲೇ ಉತ್ತರ ಕರ್ನಾಟಕದ ಜನತೆಯ ಕ್ಷಮೆಯಾಚಿಸಬೇಕು. ಇಲ್ಲದಿದ್ದರೆ ರಾಜ್ಯ ಸರ್ಕಾರವು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಹಸಿರು ಸೇನೆ ಎಚ್ಚರಿಸಿದೆ.

# ಎಸ್.ಐ.ಆರ್ ಕುರಿತು ಜಾಗೃತಿ ಜಾಥಾ

• ಮಲ್ಲಮ್ಮ ನುಡಿ ವಾರ್ತೆ ನಿಡಗುಂದಿ

ತಾಲೂಕಿನ ಆಲಮಟ್ಟಿ ಗ್ರಾಮ ಪಂಚಾಯಿತಿ ಅರಳದಿನ್ನಿ ಗ್ರಾಮದಲ್ಲಿ ತಾಲೂಕು ಆಡಳಿತ ತಾಲೂಕು ಸ್ವೀಫ್ ಸಮಿತಿ ಹಾಗೂ ಆಲಮಟ್ಟಿ ಗ್ರಾಮ ಪಂಚಾಯತಿ ಆಶ್ರಯದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್.ಐ.ಆರ್) ಕುರಿತು ಜಾಗೃತಿ ಜಾಥಾ ಕಾರ್ಯಕ್ರಮ ಶನಿವಾರ ನಡೆಯಿತು.

ತಾ.ಪಂ.ಕಾ.ನಿ. ಅಧಿಕಾರಿಗಳಾದ ವೆಂಕಟೇಶ ವಂದಾಲ ಹಾಗೂ ತಹಶೀಲ್ದಾರ ಎ.ಡಿ.ಅಮರವಾದಗಿ ಅವರು ಜಂಟಿಯಾಗಿ ಚಾಲನೆ ನೀಡಿದರು

ವಿದ್ಯಾರ್ಥಿಗಳು ಮತದಾರರ ಜಾಗೃತಿ ಘೋಷಣೆಗಳನ್ನು ಕೂಗಿ ಗ್ರಾಮಸ್ಥರ ಗಮನ ಸೆಳೆದರು. ಗ್ರಾಮದ ಚಂದ್ರಮ್ಮ ದೇವಸ್ಥಾನದ ಬಳಿ ಸ್ವೀಪ್ ಸಮಿತಿ ಸದಸ್ಯರು ಹಾಗೂ ವಿದ್ಯಾರ್ಥಿಗಳು ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಮಹತ್ವವನ್ನು ಸಾರಿದರು ತಹಶೀಲ್ದಾರ ಎ.ಡಿ.ಅಮರವಾದಗಿ ಮಾತನಾಡಿ, ಜೂನ್ 30 ರಿಂದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ 2026 ಆರಂಭವಾಗಿದೆ. ಒಂದು ತಿಂಗಳ ಕಾಲ ಮತಗಟ್ಟೆ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ಪರಿಷ್ಕರಣೆ ಕಾರ್ಯದಲ್ಲಿ ತೊಡಗಲಿದ್ದು, ಮತದಾರರು, ನಾಗರೀಕರು ಸಹಕಾರ ನೀಡಬೇಕು ಎಂದರು.

ತಾಪಂ ಇಒ ವೆಂಕಟೇಶ ವಂದಾಲ ಮಾತನಾಡಿ, ಮತಗಟ್ಟೆ ಅಧಿಕಾರಿಗಳು ಮನೆ–ಮನೆಗೆ ಭೇಟಿ ನೀಡಿ ಮತದಾರರ ಪಟ್ಟಿಯ ಮಾಹಿತಿಯ ಗಣತಿ ನಮೂನೆ ನೀಡಲಿದ್ದು, ಮತದಾರರು ಕಡ್ಡಾಯವಾಗಿ ನಮೂನೆಯನ್ನು ಭರ್ತಿ ಮಾಡಿ ಅಧಿಕಾರಿಗಳಿಗೆ ನೀಡಬೇಕು. ನಮೂನೆಯ ದ್ವಿಪ್ರತಿಯನ್ನು ನೀಡಲಿದ್ದು ಒಂದು ಪ್ರತಿಯನ್ನು ಸ್ವೀಕೃತಿಯಾಗಿ ಮತದಾರರು ತಮ್ಮಲ್ಲೇ ಉಳಿಸಿಕೊಳ್ಳಬೇಕು ಎಂದು ಮನವಿ ಮಾಡಿದರು.

ಈ ವೇಳೆ ಇ.ಆರ್.ಒ. ಎಮ್.ಬಿ. ನಾಗಠಾಣ ಪಿಡಿಒ ಜಿ.ಬಿ.ಕಲ್ಯಾಣಿ ಆಡಳಿತಾಧಿಕಾರಿ ಅಬೂಬಕರ ಬಾಗವಾನ ಕಾರ್ಯದರ್ಶಿ ಅಜೀಜ್ ಬಾರೇ ಇಮಾಮ್, ತಾಲೂಕು ಐಇಸಿ ಸಂಯೋಜಕರಾದ ದಸ್ತಗೀರ್ ಗುಡಿಹಾಳ, ಕಂದಾಯ ಇಲಾಖೆಯ ಗ್ರಾಮ ಆಡಳಿತ ಅಧಿಕಾರಿಗಳು, ಬಿಎಲ್ ಒ, ಆಶಾ ಕಾರ್ಯಕರ್ತೆಯರು ಗ್ರಾಮದ ಪ್ರಮುಖರು ಸೇರಿ ಇನ್ನಿತರರು ಭಾಗವಹಿಸಿದ್ದರು.



# ಸುಸ್ಥಿರ ನಾಳೆಗಾಗಿ ಜಲ ಮತ್ತು ವಿದ್ಯುತ್ ಸಂರಕ್ಷಣೆ



ಜಲ–ಸಂರಕ್ಷಣೆ
● ಡಾ. ಶಾಲಿನಿ ರಜನೀಶ್
ಮುಖ್ಯ ಕಾರ್ಯದರ್ಶಿ

> **ಭೂಮಿ ಮತ್ತು ನಮ್ಮ ಭವಿಷ್ಯವನ್ನು ಸುರಕ್ಷಿತವಾಗಿಡಲು ಜಲ ಮತ್ತು ವಿದ್ಯುತ್ನ ಸಂರಕ್ಷಣೆ ಅತ್ಯಂತ ಅಗತ್ಯವಾಗಿದೆ. ನೀರನ್ನು ಉಳಿಸುವುದು ಎಂದರೆ ವಿದ್ಯುತ್ ಅನ್ನು ಸಹ ಉಳಿಸುವುದಾಗಿದೆ. ಏಕೆಂದರೆ ನೀರನ್ನು ಶುದ್ಧೀಕರಿಸಿ ಮನೆಗಳಿಗೆ ಪೂರೈಸಲು ಹೆಚ್ಚಿನ ವಿದ್ಯುತ್ ಬಳಸಲಾಗುತ್ತದೆ. ಆದ್ದರಿಂದ ಈ ಸಂಪನ್ಮೂಲಗಳನ್ನು ಸಂರಕ್ಷಿಸುವ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಇಂದಿನ ಅಗತ್ಯವಾಗಿದೆ. ದೈನಂದಿನ ಜೀವನದಲ್ಲಿ ಸಣ್ಣ ಬದಲಾವಣೆಗಳೂ ದೊಡ್ಡ ಪರಿಣಾಮ ಉಂಟು ಮಾಡಬಹುದು. ಆದುದರಿಂದ, ಕೆಲವು ಉತ್ತಮ ಅಭ್ಯಾಸಗಳನ್ನು ಈ ಲೇಖನದ ಮೂಲಕಹಂಚಿಕೊಳ್ಳ ಬಯಸುತ್ತೇನೆ.**

**ಜಲಸಂರಕ್ಷಣೆ**

ಪ್ರತಿಯೊಬ್ಬ ಜೀವಿಯ ಬದುಕಿಗೆ ನೀರು ಅತ್ಯಗತ್ಯ. ಭೂಮಿಯ ಶೇಕಡಾ 70 ರಷ್ಟು ಭಾಗ ನೀರಿನಿಂದ ಕೂಡಿದ್ದರೂ, ಕುಡಿಯಲು ಯೋಗ್ಯವಾದ ಸಿಹಿ ನೀರು ಕೇವಲ ಶೇಕಡಾ 2ರಷ್ಟು ಮಾತ್ರ ಇದೆ. ಜಲಸಂರಕ್ಷಣೆ ಎಂದರೆ ಲಭ್ಯವಿರುವ ಶುದ್ಧ ನೀರನ್ನು ಸಮರ್ಥವಾಗಿ ಬಳಸುವುದು. ಹೆಚ್ಚುತ್ತಿರುವ ಜನಸಂಖ್ಯೆ, ಮಾಲಿನ್ಯ ಮತ್ತು ನಿರ್ಲಕ್ಷ್ಯದ ಬಳಕೆಯಿಂದಾಗಿ ಜಲಕ್ಷಾಮವು ಇಂದು ಜಾಗತಿಕ ಸಮಸ್ಯೆಯಾಗಿದೆ. ಆದ್ದರಿಂದ, ಭವಿಷ್ಯದ ಪೀಳಿಗೆಗೆ ನೀರನ್ನು ಉಳಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ.

ಈಗಾಗಲೇ ಎಲ್ನಿನೊ ಹವಾಮಾನ ವೈಪರೀತ್ಯದ ಪರಿಣಾಮದಿಂದ ವಿಶ್ವದಾದ್ಯಂತದ ಸಾಮಾನ್ಯ ಹವಾಮಾನ ಮಾದರಿಗಳನ್ನು ವ್ಯತ್ಯಯಗೊಳಿಸುತ್ತಿದ್ದು, ದೇಶದಲ್ಲಿ ಅತಿವೃಷ್ಟಿ, ಪ್ರವಾಹ ಮತ್ತು ಬರಗಾಲ ಮೊದಲಾದ ತೀವ್ರ ಹವಾಮಾನ ಪರಿಸ್ಥಿತಿಗಳಿಗೆ ಕಾರಣವಾಗಿದೆ. ಅಲ್ಲದೇ ದೇಶದಲ್ಲಿ ಮಳೆಯ ಕೊರತೆಯುಂಟಾಗುತ್ತಿದೆ. ಇದರಿಂದ, ನಮ್ಮ ರೈತರ ಕೃಷಿ ಉತ್ಪಾದನೆ ಮೇಲೆ ಪರಿಣಾಮ ಬೀರುತ್ತಿದೆ. ಆದುದರಿಂದ, ನಾವು ನಮ್ಮಲ್ಲಿರುವ ಅತ್ಯಮೂಲ್ಯ ನೈಸರ್ಗಿಕ ಸಂಪನ್ಮೂಲ ಮತ್ತು ಜೀವಜಲವಾದ ನೀರನ್ನು ಉಪಯೋಗಿಸುವಾಗ ಆದಷ್ಟು ಎಚ್ಚರಿಕೆಯನ್ನು ವಹಿಸಬೇಕಾಗಿದೆ.

**ನೀರು ಏಕೆ ಮುಖ್ಯ?**

● ನೀರುಜೀವನ, ಕೃಷಿ, ಕೈಗಾರಿಕೆ ಹಾಗೂ ಪರಿಸರ ವ್ಯವಸ್ಥೆಗೆ ಅತ್ಯಗತ್ಯವಾದ ಅಮೂಲ್ಯ ಮತ್ತು ಸೀಮಿತ ಸಂಪನ್ಮೂಲವಾಗಿದೆ.

● ವೇಗವಾದ ನಗರೀಕರಣ, ಜನಸಂಖ್ಯೆಯ ಹೆಚ್ಚಳ ಮತ್ತು ಹವಾಮಾನ ವೈಪರೀತ್ಯಗಳು ಜಲಸಂಪನ್ಮೂಲಗಳ ಮೇಲೆ ಹೆಚ್ಚಿನ ಒತ್ತಡ ಉಂಟುಮಾಡುತ್ತಿವೆ.

● ಇಂದು ನೀರನ್ನು ಸಂರಕ್ಷಿಸುವುದರಿಂದ ಭವಿಷ್ಯದ ಪೀಳಿಗೆಗಳಿಗೆ ನೀರಿನ ಲಭ್ಯತೆ ಖಚಿತವಾಗುತ್ತದೆ.

**ನೀರಿನ ಸಂರಕ್ಷಣೆ ಮಾರ್ಗೋಪಾಯಗಳು:**

ಪ್ರತಿ ನಾಗರೀಕರು ಸಣ್ಣಸಣ್ಣ ಪ್ರಮಾಣದಲ್ಲಿ ನೀರನ್ನು ಉಳಿಸುವ ಪ್ರಯತ್ನವನ್ನು ಮಾಡಿದರೆ, ನಾಳೆ ದೊಡ್ಡ ಪ್ರಮಾಣದಲ್ಲಿ ನೀರಿನ ಸಂರಕ್ಷಣೆ ಮಾಡಬಹುದಾಗಿದೆ.

● ಪ್ರತಿಯೊಂದು ನೀರಿನ ಹನಿಯೂ ಅಮೂಲ್ಯ; ನೀರಿನ ವ್ಯರ್ಥತೆಯನ್ನು ತಪ್ಪಿಸುವುದು.

● ಸೋರಿಕೆಯಾಗಿರುವ ಕೊಳವೆಗಳು, ಪೈಪ್ಗಳು ಮತ್ತು ನೀರು ಸಂಗ್ರಹ ವ್ಯವಸ್ಥೆಗಳನ್ನು ತಕ್ಷಣ ದುರಸ್ತಿ ಮಾಡುವುದು.

● ಮುಖ ತೊಳೆಯುವಾಗ ಹಾಗೂ ಪಾತ್ರೆ ತೊಳೆಯುವಾಗ ನೀರಿನ ಕೊಳವೆಗಳನ್ನು ನಿಲ್ಲಿಸುವುದು.

● ಸಾಧ್ಯವಾದಷ್ಟು ಬಕೆಟ್ಬಳಸಿ ಸ್ನಾನ ಮಾಡುವುದು.

● ನೀರು ಉಳಿತಾಯ ಮಾಡುವ ಉಪಕರಣಗಳನ್ನು ಅಳವಡಿಸುವುದು.

● ಮನೆ, ಶಾಲೆ, ಕಚೇರಿ ಹಾಗೂ ಸಾರ್ವಜನಿಕ ಕಟ್ಟಡಗಳಲ್ಲಿ ಮಳೆ ನೀರು ಸಂಗ್ರಹಣೆಯನ್ನು ಅನುಸರಿಸುವುದು.

● ಕುಡಿಯುವ ನೀರನ್ನು ತೋಟಗಾರಿಕೆ, ವಾಹನಗಳ ಸ್ವಚ್ಛತೆಯಂತಹ ಇತರೆ ಕೆಲಸಗಳಿಗೆ ಬಳಸದೇ, ತ್ಯಾಜ್ಯ ಸಂಸ್ಕರಿಸಿದ ನೀರನ್ನು ತೋಟಗಾರಿಕೆ ಮತ್ತು ಸ್ವಚ್ಛತೆಗೆ ಮರುಬಳಕೆ ಮಾಡುವುದು.

● ಸಾಧ್ಯವಾದಷ್ಟು ನೀರಿನ ಕಡಿಮೆ ಬಳಕೆ (Reduce), ಮರುಬಳಕೆ (Reuse) ಮತ್ತು ಮರು ಸಂಸ್ಕರಣೆ (Recycle) ಮಾದರಿಗಳನ್ನು ಅನುಸರಿಸುವುದು.

● ಕೃಷಿಯಲ್ಲಿ ಹನಿ ನೀರಾವರಿ ಮತ್ತು ತುಂತುರು ನೀರಾವರಿ ವಿಧಾನಗಳನ್ನು ಅಳವಡಿಸುವುದು.

● ಕೆರೆ, ನದಿ ಹಾಗೂ ಭೂಗರ್ಭ ಜಲಮೂಲಗಳನ್ನು ಮಾಲಿನ್ಯ ಮತ್ತು ಅತಿಕ್ರಮಣದಿಂದ ರಕ್ಷಿಸುವುದು.

● ಅಂತರ್ಜಲ ನಿರ್ವಹಣೆಗಾಗಿ ಗಿಡಗಳನ್ನು ನೆಟ್ಟು ಸಂರಕ್ಷಿಸುವುದು.

**ವಿದ್ಯುತ್ ಸಂರಕ್ಷಣೆ:** ಆಧುನಿಕ ಜಗತ್ತಿನಲ್ಲಿ ವಿದ್ಯುತ್ ನಮ್ಮ ದೈನಂದಿನ ಜೀವನದ ಅವಿಭಾಜ್ಯ ಅಂಗವಾಗಿದೆ. ಬೆಳಕು, ಫ್ಯಾನ್, ಮೊಬೈಲ್ ಚಾರ್ಜರ್ ಮತ್ತು ಕೈಗಾರಿಕೆಗಳು ಸೇರಿದಂತೆ ಎಲ್ಲದಕ್ಕೂ ವಿದ್ಯುತ್ ಬೇಕೆ ಬೇಕು. ಆದರೆ ವಿದ್ಯುತನ್ನು ಹೆಚ್ಚಾಗಿ ಕಲ್ಲಿದ್ದಲು ಸುಡುವ ಮೂಲಕ ಉತ್ಪಾದಿಸಲಾಗುತ್ತದೆ. ಇದರಿಂದ ವಾಯುಮಾಲಿನ್ಯ ಉಂಟಾಗುತ್ತದೆ ಮತ್ತು ಭೂಮಿಯ ತಾಪಮಾನ ಹೆಚ್ಚುತ್ತಿದೆ. ಈ ಸಮಸ್ಯೆಗಳನ್ನು ತಡೆಯಲು ವಿದ್ಯುತ್ ಸಂರಕ್ಷಣೆ ಅತ್ಯಗತ್ಯ.

**ವಿದ್ಯುತ್ ಸಂರಕ್ಷಣೆ ಏಕೆ ಮುಖ್ಯ?**

● ವಿದ್ಯುತ್ ಉತ್ಪಾದನೆಗೆ ಅಪಾರ ಪ್ರಮಾಣದ ನೈಸರ್ಗಿಕ ಸಂಪನ್ಮೂಲಗಳ ಅಗತ್ಯವಿದೆ.

● ವಿದ್ಯುತ್ ಸಂರಕ್ಷಣೆಯಿಂದ ವೆಚ್ಚ ಕಡಿಮೆಯಾಗುತ್ತದೆ, ಪರಿಸರ ಮಾಲಿನ್ಯ ತಗ್ಗುತ್ತದೆ ಮತ್ತು ಶಕ್ತಿ ಭದ್ರತೆ ಹೆಚ್ಚುತ್ತದೆ.

● ಜವಾಬ್ದಾರಿಯುತ ವಿದ್ಯುತ್ ಬಳಕೆ ಸುಸ್ಥಿರ ಅಭಿವೃದ್ಧಿಗೆ ಅಗತ್ಯವಾಗಿದೆ.

**ವಿದ್ಯುತ್ ಸಂರಕ್ಷಣೆ ಮಾರ್ಗೋಪಾಯಗಳು**

● ಬಳಕೆಯಿಲ್ಲದಾಗ ದೀಪಗಳು, ಫ್ಯಾನ್ಗಳು ಮತ್ತು ಇತರ ಉಪಕರಣಗಳನ್ನು ಆರಿಸುವುದು. ಸಾಮಾನ್ಯ ಬಲ್ಬುಗಳ ಬದಲಿಗೆ ಎಲ್ಇಡಿ ದೀಪಗಳನ್ನು ಬಳಸುವುದು.

● ಮೇಲ್ಛಾವಣಿ ಸೌರ ವ್ಯವಸ್ಥೆಗಳು ಮತ್ತು ನವೀಕರಿಸ ಬಹುದಾದ ಶಕ್ತಿಮೂಲಗಳನ್ನು ಉತ್ತೇಜಿಸುವುದು, ಸೋಲಾರ್ ಉಪಕರಣಗಳನ್ನು ಬಳಸುವುದು.

● ಸಾಧ್ಯವಾದಷ್ಟು ನೈಸರ್ಗಿಕ ಬೆಳಕು ಮತ್ತು ಗಾಳಿಯನ್ನು ಬಳಸುವುದು.

● ಚಾರ್ಜರ್‌ಗಳು ಮತ್ತು ವಿದ್ಯುತ್ ಸಾಧನಗಳನ್ನು ಬಳಕೆಯ ನಂತರ ಬೇರ್ಪಡಿಸುವುದು.

● ಏರ್ ಕಂಡೀಷನರ್‌ಗಳನ್ನು 24–26°C ತಾಪಮಾನದಲ್ಲಿ ನಿರ್ವಹಿಸಿ.

● ಶಾಲೆ/ಕಾಲೇಜುಗಳು ಮತ್ತು ಕಚೇರಿಗಳಲ್ಲಿ ನಿಯಮಿತ ವಿದ್ಯುತ್ ಲೆಕ್ಕ ಪರಿಶೋಧನೆ ನಡೆಸುವುದು.

● ಮನೆ ಮತ್ತು ಕೆಲಸದ ಸ್ಥಳಗಳಲ್ಲಿ ವಿದ್ಯುತ್ ಉಳಿಸುವ ಪದ್ಧತಿಗಳನ್ನು ಅನುಸರಿಸುವುದು.

● ಮಕ್ಕಳಿಗೆ ಮತ್ತು ಸಮುದಾಯಕ್ಕೆ ವಿದ್ಯುತ್ಸಂರಕ್ಷಣೆಯ ಮಹತ್ವವನ್ನು ತಿಳಿಸುವುದು.

**ವಿದ್ಯುತ್ ಸಂರಕ್ಷಣೆ ಚಟುವಟಿಕೆಗಳು**

● ಶಾಲೆ/ಕಾಲೇಜು ಮತ್ತು ಕಚೇರಿಗಳಲ್ಲಿ ಜಲ ಮತ್ತು ವಿದ್ಯುತ್ಸಂರಕ್ಷಣಾ ಪ್ರತಿಜ್ಞಾ ಕಾರ್ಯಕ್ರಮಗಳನ್ನು ಆಯೋಜಿಸುವುದು.

● ಜಾಗೃತಿ ಮೆರವಣಿಗೆಗಳು ಮತ್ತು ಬೀದಿನಾಟಕಗಳನ್ನು ಆಯೋಜಿಸುವುದು.

● ಸಾರ್ವಜನಿಕ ಸ್ಥಳಗಳು ಮತ್ತು ಸರ್ಕಾರಿ ಕಚೇರಿಗಳಲ್ಲಿ ಪೋಸ್ಟರ್‌ಗಳು ಹಾಗೂ ಬ್ಯಾನರ್‌ಗಳನ್ನು ಪ್ರದರ್ಶಿಸುವುದು.

● ಸಮುದಾಯದ ಭಾಗವಹಿಸುವಿಕೆಯಿಂದ ಜಲಸಂರಕ್ಷಣಾ ವಾರ ಮತ್ತು ವಿದ್ಯುತ್ಸಂರಕ್ಷಣಾ ದಿನವನ್ನು ಆಚರಿಸುವುದು.

● ಮನೆಗಳು, ಸಂಸ್ಥೆಗಳು ಮತ್ತು ಕೈಗಾರಿಕೆಗಳಲ್ಲಿ ಜಲ ಹಾಗೂ ಶಕ್ತಿ ದಕ್ಷ ಪದ್ಧತಿಗಳನ್ನು ಅಳವಡಿಸಿಕೊಳ್ಳಲು ಪ್ರೋತ್ಸಾಹಿಸುವುದು.

ವಿದ್ಯುತ್ ಅನ್ನು ಉತ್ಪಾದಿಸಲು ಪ್ರಮುಖವಾಗಿ ನೀರನ್ನು ಬಳಸಲಾಗುವುದರಿಂದ, ರಾಜ್ಯದ ಶೇ.15–20 ರಷ್ಟು ವಿದ್ಯುತ್ ಉತ್ಪಾದನೆ ಇದರಿಂದ ಆಗುತ್ತಿದೆ. ಒಂದು ವೇಳೆ, ನೀರಿನ ಕೊರತೆಯಾದರೆ, ನೀರಿನಿಂದ ಉತ್ಪಾದಿಸುವ ವಿದ್ಯುತ್ನ ಕೊರತೆ ಸಹ ಉಂಟಾಗುತ್ತದೆ. ಇದರಿಂದಾಗಿ, ದೈನಂದಿನ ಬಳಕೆಗಾಗಿ ಲಭ್ಯವಾಗುವ ವಿದ್ಯುತ್ ಪ್ರಮಾಣ ಕಡಿಮೆಯಾಗುತ್ತದೆ. ಆದುದರಿಂದ, ಸಾರ್ವಜನಿಕರು ನೀರಿನ ಮಿತವ್ಯಯ ಅಭ್ಯಾಸಗಳನ್ನು ಸ್ವಯಂಪ್ರೇರಿತರಾಗಿ ರೂಢಿಸಿಕೊಳ್ಳುವುದರಿಂದ, ನಮ್ಮ ನಾಡಿಗೆ, ದೇಶಕ್ಕೆ ಮತ್ತು ಈ ಭೂಮಿಗೆ ಇದರಿಂದ ಒಳಿತಾಗುತ್ತದೆ ಎಂಬುದು ನನ್ನ ಆಶಾಭಾವನೆ.

"ಬನ್ನಿ! ಇಂದೇ ಜಲ ಮತ್ತು ವಿದ್ಯುತ್‌ನ್ನು ಸಂರಕ್ಷಿಸೋಣ– ಸುಸ್ಥಿರತೆ, ಸಮೃದ್ಧಿ ಹಾಗೂ ಭವಿಷ್ಯದ ಪೀಳಿಗೆಗಳಿಗೆ ಉತ್ತಮ ಜೀವನಮಟ್ಟವನ್ನು ಖಚಿತಪಡಿಸೋಣ."

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000, Telephone Number:08483200222

PRGI NO. 120927
(RNINO:KARKAN/2011/48371)